ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 146 ಸಂಚಿಕೆ- 146 | PAGE-8 ಪುಟ-8 | ಶನಿವಾರ 19.07.2025 | RS.2/- ಬೆಲೆ 2/-

# 'ಕೈ' ಶಾಸಕರಿಗೆ ತಲಾ 50 ಕೋಟಿ ಅನುದಾನ

ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಜು.18: ಅನುದಾನ ಸಿಕ್ತಿಲ್ಲ ಎಂದು ಸರ್ಕಾರದ ವಿರುದ್ಧವೇ ಅಸಮಾಧಾನ ಹೊರ ಹಾಕಿದ್ದ ಸ್ವಪಕ್ಷದ ಶಾಸಕರಿಗೆ ಕೊನೆಗೂ ಅನುದಾನ ಬಿಡುಗಡೆಗೆ ಸಿಎಂ ಸಿದ್ದರಾಮಯ್ಯ ಅವರು ಹಸಿರು ನಿಶಾನೆ ಕೊಟ್ಟಿದ್ದಾರೆ.ಅನುದಾನ ಸಿಗುತ್ತಿಲ್ಲ ಅಂತ ಬಹಿರಂಗವಾಗಿ ಶಾಸಕರು ಅಸಮಾಧಾನ ಹೊರಹಾಕಿದ್ದ ಹಿನ್ನೆಲೆಯಲ್ಲಿ ಶಾಸಕರ ಅಸಮಾಧಾನ ಆಲಿಸಲು ಖುದ್ದು ಉಸ್ತುವಾರಿ ಸುರ್ಜೇವಾಲಾ ಅವರೇ ಬಂದು ಶಾಸಕರ ಅಹವಾಲು ಕೇಳಿದ್ದರು. ಶಾಸಕರ ಜೊತೆ ಸುರ್ಜೇವಾಲಾ ಸಭೆ ಮಾಡಿದ ಬೆನ್ನಲ್ಲೇ ಸಿಎಂ ಅನುದಾನ ಬಿಡುಗಡೆಗೆ ಮುಂದಾಗಿದ್ದಾರೆ.

ಕಾಂಗ್ರೆಸ್ ಶಾಸಕರಿಗೆ ತಲಾ 50 ಕೋಟಿ ರೂ. ಅನುದಾನ ಬಿಡುಗಡೆಗೆ ಸಿಎಂ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಲೋಕೋಪಯೋಗಿ ಇಲಾಖೆ ಅಡಿ 37.50 ಕೋಟಿ ರೂ., ಶಾಸಕರ ವಿವೇಚನಾಧಿಕಾರದ ಅಡಿ ಹಾಗೂ ಇತರೆ ಇಲಾಖೆ ಕಾಮಗಾರಿಗೆ 12.50 ಕೋಟಿ ರೂ. ಅನುದಾನ ಬಿಡುಗಡೆ ಮಾಡೋ ಬಗ್ಗೆ ಸಿಎಂ ಎಲ್ಲಾ ಶಾಸಕರಿಗೆ ಪತ್ರ ಬರೆದಿದ್ದಾರೆ. ಅನುದಾನ ಬಿಡುಗಡೆಗೂ ಮುನ್ನ ಸಿಎಂ ಕಾಂಗ್ರೆಸ್ ಶಾಸಕರ ಜೊತೆ ಒನ್ ಟು ಒನ್ ಸಭೆ ನಡೆಸಲಿದ್ದಾರೆ. ಜು. 30 ಮತ್ತು 31ರಂದು ಸಿಎಂ ಶಾಸಕರ ಜೊತೆ ಸಭೆ ನಡೆಸಲಿದ್ದಾರೆ. ಈ ಸಭೆಗೆ ಶಾಸಕರು ಬೇಡಿಕೆ ಪತ್ರದೊಂದಿಗೆ ಕಾಮಗಾರಿ ವಿವರಗಳನ್ನು ನೀಡುವಂತೆ ಸಿಎಂ ತಿಳಿಸಿದ್ದಾರೆ. ಶಾಸಕರ ಜೊತೆ ಸಭೆ ಬಳಿಕ ಅನುದಾನ ಬಿಡುಗಡೆ ಆಗುವ ಸಾಧ್ಯತೆ ಇದೆ.



## ಬಿಜೆಪಿ-ಜೆಡಿಎಸ್ ಶಾಸಕರಿಗೂ ಅನುದಾನ ಸಿಗುತ್ತೆ, ತಾಳ್ಮೆಯಿಂದ ಇರಬೇಕು: ಡಿಕೆಶಿ

ಮಲ್ಲಮ್ಮ ನುಡಿ ವಾರ್ತೆ
ರಾಮನಗರ:ಜು.18: ಬಿಜೆಪಿ-ಜೆಡಿಎಸ್ ಶಾಸಕರಿಗೂ ಅನುದಾನ ಸಿಗುತ್ತದೆ, ತಾಳ್ಮೆಯಿಂದ ಇರಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದರು. ಶಾಸಕರಿಗೆ ಸಿಎಂ ಸಿದ್ದರಾಮಯ್ಯ 50 ಕೋಟಿ ಅನುದಾನ ನೀಡಿದ ವಿಚಾರ ಕುರಿತು ಚನ್ನಪಟ್ಟಣದಲ್ಲಿ ಮಾತನಾಡಿದ ಅವರು, ಇದು ಬಜೆಟ್‌ನಲ್ಲೇ ತೀರ್ಮಾನ ಮಾಡಲಾಗಿತ್ತು. ಇದಕ್ಕಾಗಿ 8 ಸಾವಿರ ಕೋಟಿಯನ್ನ ಮೀಸಲಿಟ್ಟಿದ್ದೆವು. ಪಿಡಬ್ಲ್ಯೂಡಿ ಇಲಾಖೆಯ ರಸ್ತೆ, ಸೇತುವೆ ಹಾಗೂ ಶಾಸಕರ ವಿವೇಚನೆಗೆ ಅನುಗುಣವಾಗಿ ಬಳಸಲು ಅನುದಾನ



(2ನೇ ಪುಟ ನೋಡಿ)

## ರಾಜ್ಯಕ್ಕೆ ಹುಮನಾಬಾದ್ ಗೌಡರ ಕೊಡುಗೆ ಅಪಾರ

ಮಲ್ಲಮ್ಮ ನುಡಿ ವಾರ್ತೆ
ಬೀದರ್:ಜು.18: ರಾಜ್ಯಕ್ಕೆ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಹುಮನಾಬಾದ್ ಗೌಡರ ಕೊಡುಗೆ ಅಪಾರವಾಗಿದೆ. ಗೌಡರಿಗೆ ಪಕ್ಷದ ನಾಯಕರು ಗುರುತಿಸುವ ಅವಶ್ಯಕತೆ ಇದೆ ಎಂಬ ಮಾತು ಎಲ್ಲೆಡೆ ಚರ್ಚೆಗೆ ಗ್ರಾಸವಾಗಿದೆ.ದಿ.ಬಸವರಾಜ ಪಾಟೀಲ ಹುಮನಾಬಾದ್, ಮಾಜಿ ಸಚಿವ ರಾಜಶೇಖರ ಪಾಟೀಲ, ಎಂಎಲ್‌ಸಿಗಳಾದ ಡಾ.ಚಂದ್ರಶೇಖರ ಪಾಟೀಲ, ಭೀಮರಾವ ಪಾಟೀಲ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ್ ಪಾಟೀಲ, ವೀರಣ್ಣ ಪಾಟೀಲ ಸೇರಿದಂತೆ ಇತರರು ಸೇರಿ ಕಾಂಗ್ರೆಸ್ ಪಕ್ಷವನ್ನು ಬೇರು ಮಟ್ಟದಲ್ಲಿ ಕಟ್ಟಿ ಬೆಳೆಸಿದ್ದಾರೆ, ರಾಜಶೇಖರ ಪಾಟೀಲ ರವರು ಮಂತ್ರಿಯಾಗಿ, ನಿಗಮ ಮಂಡಳಿಯು ಅಧ್ಯಕ್ಷರಾಗಿ, ದಶಕಗಳಿಂದ ಶಾಸಕರಾಗಿ ಕ್ಷೇತ್ರಕ್ಕೆ ಹಾಗೂ ಜಿಲ್ಲೆಗೆ ಸಾಕಷ್ಟು ಅಭಿವೃದ್ಧಿಯನ್ನು ಮಾಡಿದ್ದಾರೆ. ಪಾಟೀಲರ ಏಳಿಗೆಯನ್ನು ಸಹಿಸದೇ ಇರುವ ಹಿತಶತ್ರುಗಳು ಅವರ ಬೆನ್ನಿಗೆ ಚೂರಿ ಹಾಕಿದ್ದಾರೆ. ನೇರ ನುಡಿಯಲ್ಲಿ ಮಾತನಾಡುವ ಏಕೈಕ ರಾಜಕಾರಣಿ ರಾಜಶೇಖರ ಪಾಟೀಲ ಎಂದರೆ ತಪ್ಪಾಗಲಾರದು ಎನ್ನುತ್ತಾರೆ ಹಿರಿಯ ರಾಜಕೀಯ ವಿಶ್ಲೇಷಕರು, ಪಾಟೀಲ ಪರಿವಾರಕ್ಕೆ ತನ್ನದೇ ಆದ ಇತಿಹಾಸವಿದೆ. ಯಾವುದೇ ಕಳಂಕ ಇವರ ಮೇಲೆ ಇಲ್ಲ, ಇವರು ಅಲ್ಪ ಅವಧಿಗೆ ಮಂತ್ರಿಯಾಗಿದ್ದರೂ ಎಲ್ಲರು ನನ್ನವರೆಂದು ತಿಳಿದು ಕೆಲಸವನ್ನು ಮಾಡಿದ ಕೀರ್ತಿ ಪಾಟೀಲ ರಿಗೆ ಸಲ್ಲುತ್ತದೆ. ತನ್ನ ವಿರೋಧ ಪಕ್ಷದವರಿದ್ದರೂ ಕೂಡ ಅವರನ್ನು ದ್ವೇಷದಿಂದ ಕಾಣಲಿಲ್ಲ,

ರಾಜಶೇಖರ ಪಾಟೀಲ ರವರು ಅಧಿಕಾರಕ್ಕೆ ಬಂದೇ ಬರುತ್ತಾರೆ. ಕ್ಷೇತ್ರದ ಹಾಗೂ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ಮಾಡೆ ಮಾಡುತ್ತಾರೆ. ಹಿತ ಶತ್ರುಗಳನ್ನು ಬಗ್ಗು ಬಡಿಯುತ್ತಾರೆ ಎಂಬ ಮಾತು ಅವರ ಹಿತಚಿಂತಕರಲ್ಲಿದೆ. ಪಾಟೀಲ ರವರು ಯಾವತ್ತೂ ಕೂಡ ಒಂದು ಜಾತಿಗೆ ಸೀಮಿತವಾಗಿ ಸೇವೆ ಸಲ್ಲಿಸಿದವರಲ್ಲ. ವಿಶ್ವಗುರು ಬಸವಣ್ಣನವರು ನುಡಿದಂತೆ ಇವನಾರವ ಇವನಾರವ ಎನ್ನದೇ, ಇವ ನಮ್ಮವ ಇವ ನಮ್ಮವ ಎನ್ನುವಂತೆ ನಡೆದಿದ್ದಾರೆ. ಪಾಟೀಲ ರವರ ಸರಳತೆಯನ್ನು ಕೆಲವರು ಬಂಡವಾಳವಾಗಿ ಮಾಡಿಕೊಂಡು ಅವರ ಬೆನ್ನಿಗೆ ಚೂರಿ ಹಾಕಿದ್ದಾರೆ. ಕ್ಷೇತ್ರದ ಜನರು ರಾಜಶೇಖರ ಪಾಟೀಲ ರವರು ಶಾಸಕರಾಗಬೇಕೆಂದು ತುದಿಗಾಲಲ್ಲಿ ನಿಂತಿದ್ದಾರೆ. ಕರ್ಮ ಯಾರಿಗೂ ಬಿಟ್ಟಿಲ್ಲ ಪಾಟೀಲರಿಗೆ ದ್ರೋಹ ಬಗೆದವರಿಗೊ ಬಿಡುವುದಿಲ್ಲ ಎಂಬ ಮಾತು ಜಿಲ್ಲೆಯಲ್ಲಿ ಚರ್ಚೆಯಾಗುತ್ತಿದೆ.



## ಸೈಟ್ ವಿಚಾರಕ್ಕೆ ಗಲಾಟೆ : ಚಾಕುವಿನಿಂದ ಇರಿದು ವ್ಯಕ್ತಿಯ ಬರ್ಬರ ಹತ್ಯೆ

ಮಲ್ಲಮ್ಮನುಡಿವಾರ್ತೆ ಬೀದರ್:ಜು.18: ಸೈಟ್ ವಿಚಾರಕ್ಕೆ ಗಲಾಟೆಯಾಗಿ ಚಾಕುವಿನಿಂದ ಇರಿದು ವ್ಯಕ್ತಿಯ ಬರ್ಬರ ಹತ್ಯೆ ಮಾಡಿರುವ ಘಟನೆ ಬೀದರ್ ತಾಲೂಕಿನ ಗಾದಗಿ ಗ್ರಾಮದಲ್ಲಿ ನಡೆದಿದೆ.

ಮಲ್ಲಿಕಾರ್ಜುನ (50) ಮೃತ ದುರ್ದೈವಿ. ಒತ್ತುವರಿ ಮಾಡಿದ್ದ ಸೈಟ್ ಕೇಳಿದ್ದಕ್ಕೆ ಮೃತ ಮಲ್ಲಿಕಾರ್ಜುನ ಹಾಗೂ ಆರೋಪಿಗಳ ನಡುವೆ ಗಲಾಟೆಯಾಗಿದೆ. ಜಗಳ ತಾರಕಕ್ಕೇರಿ ಕೊನೆಗೆ ಆರೋಪಿಗಳು ಚಾಕುವಿನಿಂದ ಇರಿದು ಹತ್ಯೆಗೈದಿದ್ದಾರೆ.

ಕೂಡಲೇ ಆತನನ್ನು ಬ್ರಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾನೆ. ಸದ್ಯ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಬೀದರ್ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



## ಕೆಡಿಪಿ ಸಭೆಯಲ್ಲಿ ಅಶಿಸ್ತು ತೋರಿದ ಉಪ ಅರಣ್ಯ ಸಂರಕ್ಷಣಾಧಿಕಾರಿಗೆ ನೋಟೀಸ್

ಮಲ್ಲಮ್ಮನುಡಿವಾರ್ತೆ ರಾಯಚೂರ ಜು.18 : ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜುಲೈ 18ರಂದು ನಡೆದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾ ಅಧಿಕಾರಿಯು

ಅಶಿಸ್ತು ತೋರಿದ್ದಾಗಿ ಖಾಸಗಿ ಸುದ್ದಿವಾಹಿನಿಯಲ್ಲಿ ಪ್ರಸಾರವಾದ ವರದಿಯ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾ ಅಧಿಕಾರಿಗೆ ಎದ್ದು ನಿಲ್ಲಿಸಿ ವಿವರಣೆ ಕೇಳಿದರು.

ಈ ವೇಳೆ ಅಧಿಕಾರಿ ಪ್ರವೀಣ ಅವರು ಕ್ಷಮೆ ಕೇಳಿದರು. ಅತ್ಯಂತ ಮಹತ್ವದ ಕೆಡಿಪಿ ಸಭೆಯಲ್ಲಿ ಶಿಸ್ತಿನಿಂದ ಭಾಗಿಯಾಗದೇ ಮೋಬೈಲನಲ್ಲಿ ತಲ್ಲೀನರಾಗಿ ಅಸಭ್ಯ ವರ್ತನೆ ತೋರಿರುವುದು ಅಕ್ಷಮ್ಯ ಎಂದು ಸಚಿವರು ತರಾಟೆ ತೆಗೆದುಕೊಂಡರು.

ಇದೆ ವೇಳೆ, ಅಧಿಕಾರಿಯನ್ನು ಸಭೆಯಿಂದ ಹೊರ ಕಳುಹಿಸಿದ ಸಚಿವರು, ಅಧಿಕಾರಿಯ ಅಸಭ್ಯ ಕಾರ್ಯವೈಖರಿಯ ಬಗ್ಗೆ ನೋಟೀಸ್ ಜಾರಿ ಮಾಡಿ ಶಿಸ್ತಿನ ಕ್ರಮಕ್ಕಾಗಿ ಸರ್ಕಾರಕ್ಕೆ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಪ್ರವೀಣ್ ಅವರು ಕೆಡಿಪಿ ಸಭೆಯ ಆಗುಹೋಗುಗಳ ಬಗ್ಗೆ ಆಲಿಸದೇ ರಮ್ಮಿಯಲ್ಲಿ ಮಗ್ನರಾಗಿರುವುದು ಖಾಸಗಿ ಸುದ್ದಿವಾಹಿನಿಯ ಕ್ಯಾಮೆರಾದಲ್ಲಿ ಸೆರೆಯಾಗಿದೆ ಎಂದು ಖಾಸಗಿ ಸುದ್ದಿವಾಹಿನಿಯಲ್ಲಿ ವರದಿಯಾಗಿತ್ತು.

## ಬಿಹಾರದಲ್ಲಿ ಭಾರಿ ಮಳೆ: ಸಿಡಿಲು ಬಡಿದು 33 ಮಂದಿ ಸಾವು

ಮಲ್ಲಮ್ಮನುಡಿವಾರ್ತೆ ಪಾಟ್ನಾ:ಜು.18: ಈ ವಾರ ಬಿಹಾರದಲ್ಲಿ ಭಾರಿ ಮಳೆಯಾಗುತ್ತಿದ್ದು, ಸಿಡಿಲು ಬಡಿದು ಕನಿಷ್ಠ 33 ಜನ ಸಾವನ್ನಪ್ಪಿದ್ದಾರೆ ಮತ್ತು ಡಜನ್ಗಟ್ಟಲೆ ಜನ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ. ಬಿಹಾರದಲ್ಲಿ ಬುಧವಾರ ಮತ್ತು ಗುರುವಾರದ ನಡುವೆ ಬಿರುಗಾಳಿ ಸಹಿತ ಭೀಕರ ಮಳೆಯಲ್ಲಿ ಈ ಸಾವುಗಳು ಸಂಭವಿಸಿವೆ ಎಂದು ರಾಜ್ಯ ವಿಪತ್ತು ನಿರ್ವಹಣಾ ಇಲಾಖೆಯ ಪ್ರಕಟಣೆ ತಿಳಿಸಿದೆ. ಸಿಡಿಲು ಬಡಿದು ಮೃತಪಟ್ಟವರಲ್ಲಿ ಹೆಚ್ಚಿನವರು ರೈತರು ಮತ್ತು ಕಾರ್ಮಿಕರಾಗಿದ್ದ, ರಾಜ್ಯದ ಕೆಲವು ಭಾಗಗಳಲ್ಲಿ ಭಾರಿ ಮಳೆ ಮತ್ತು ಮಿಂಚಿನ ಮುನ್ಸೂಚನೆ ನೀಡಲಾಗಿದೆ."ಮಿಂಚಿನ ಬಗ್ಗೆ ಎಚ್ಚರಿಕೆ ನೀಡಿದ ನಂತರ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲು ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ" ನಿರ್ದೇಶಿಸಲಾಗಿದೆ ಎಂದು ಬಿಹಾರ ರಾಜ್ಯ ವಿಪತ್ತು ನಿರ್ವಹಣಾ ಸಚಿವ ವಿಜಯ್ ಕುಮಾರ್ ಮಂಡಲ್ ತಿಳಿಸಿದ್ದಾರೆ. ಸಿಡಿಲಿನಿಂದ ಸಾವನ್ನಪ್ಪಿದವರ ಕುಟುಂಬಗಳಿಗೆ ರಾಜ್ಯ ಸರ್ಕಾರ ಒಟ್ಟು 4 ಮಿಲಿಯನ್ ರೂಪಾಯಿ($4,600) ಪರಿಹಾರ ಘೋಷಿಸಿದೆ. 2024ರಲ್ಲಿ ಕನಿಷ್ಠ 243 ಜನ ಸಿಡಿಲಿನಿಂದ ಸಾವನ್ನಪ್ಪಿದ್ದರು ಮತ್ತು ಅದರ ಹಿಂದಿನ ವರ್ಷ 275 ಜನ ಸಾವನ್ನಪ್ಪಿದರು ಎಂದು ರಾಜ್ಯ ಸರ್ಕಾರ ತಿಳಿಸಿದೆ.

## ಬ್ರಿಮ್ಸ್ ಆಸ್ಪತ್ರೆಗೆ ಧಿಡೀರ್ ಭೇಟಿ ನೀಡಿದ ಸಚಿವ ಈಶ್ವರ ಬಿ.ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು.18 : ಇತ್ತೀಚೆಗೆ ಬೀದರ ಬ್ರಿಮ್ಸ್ (BRIMS) ಆಸ್ಪತ್ರೆಯಲ್ಲಿ ವಿದ್ಯುತ್ ವ್ಯತ್ಯಯದಿಂದ ರೋಗಿಗಳಿಗೆ ತೆ-ಊಂದರೆ ಉಂಟಾದ ಹಿನ್ನೆಲೆಯಲ್ಲಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಇಂದು ಬ್ರಿಮ್ಸ್ ಆಸ್ಪತ್ರೆಗೆ ಧಿಡೀರ್ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು.

ಸಚಿವರು ನೇರವಾಗಿ ಆಸ್ಪತ್ರೆಯ ರೋಗಿಗಳೊಂದಿಗೆ ಸಂವಾದ ನಡೆಸಿ, ಅವರಿಗೆ ನೀಡಲಾಗುತ್ತಿರುವ ಚಿಕಿತ್ಸೆ, ಸೌಲಭ್ಯಗಳು ಹಾಗೂ ವೈದ್ಯರು ಹಾಗೂ ಸಿಬ್ಬಂದಿಯಿಂದ ಆಸ್ಪತ್ರೆಯೊಳಗಿನ ಸಮಸ್ಯೆಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡರು.

(2ನೇ ಪುಟ ನೋಡಿ)

## ಗ್ರಾಮೀಣ ಕುಡಿಯುವ ನೀರು ಯೋಜನೆ ನಿಗದಿತ ಸಮಯದಲ್ಲಿ ಮುಗಿಸದ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಲು ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಜು.18: ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಗಳನ್ನು ಗುತ್ತಿಗೆ ಪಡೆದು ಕೆಲವು ವರ್ಷಗಳಿಂದ ಕಾಮಗಾರಿಗಳನ್ನು ಪೂರ್ಣಗೊಳಿಸದ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಿಲ್ಲಾ ಕಾರ್ಯನಿರ್ವಾಹಕ ಎಂಜಿನಿಯರುಗಳಿಗೆ ಸೂಚನೆ ನೀಡಿದರು. ಎಂಜನಿಯರುಗಳು ನಿಧಾನ ಪ್ರವೃತ್ತಿಯನ್ನು ಬಿಟ್ಟು, ಗ್ರಾಮೀಣ ಜನರಿಗೆ ಕುಡಿಯುವ ನೀರು ಒದಗಿಸುವ ಯೋಜನೆಗಳನ್ನು ನಿರ್ದಿಷ್ಟ ಸಮಯದಲ್ಲಿ ಅನುಷ್ಠಾನಕ್ಕೆ ತರುವಲ್ಲಿ ಆದ್ಯತೆ ನೀಡಬೇಕೆಂದು ಆದೇಶಿಸಿದರು. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಿಲ್ಲಾ ಕಾರ್ಯನಿರ್ವಾಹಕ ಎಂಜಿನಿಯರುಗಳ ಸಭೆಯಲ್ಲಿ ಮಾತನಾಡಿದ ಸಚಿವರು ಏಕಗ್ರಾಮ ಹಾಗೂ ಬಹುಗ್ರಾಮ ನೀರು ಸರಬರಾಜು ಯೋಜನೆಯ ಕಾಮಗಾರಿಗಳು ಮುಕ್ತಾಯಗೊಂಡ ನಂತರ ಅಗೆದ ರಸ್ತೆಗಳನ್ನು ಯಥಾಸ್ಥಿತಿಗೆ ತರುತ್ತಿಲ್ಲವೆಂಬ ದೂರುಗಳು ಬಹಳಷ್ಟು ಬರುತ್ತಿದ್ದು, ಈ ಸಂಬಂಧದಲ್ಲಿ ಎಂಜನಿಯರುಗಳಿಗೆ ಸ್ಪಷ್ಟ ನಿರ್ದೇಶನ ನೀಡಿದ ಸಚಿವರು ನೀರು ಸರಬರಾಜು ಕಾಮಗಾರಿ ಮುಗಿದ ನಂತರ ಆದ್ಯತೆಯ ಮೇಲೆ ರಸ್ತೆಗಳನ್ನು ಸರಿಪಡಿಸುವಲ್ಲಿ ಗಮನ ಹರಿಸಲು ಸೂಚಿಸಿದರು. ಗುತ್ತಿಗೆದಾರರಿಗೆ ಕಾಮಗಾರಿಗಳನ್ನು ನೀಡುವ ಮೊದಲು ಅವರಲ್ಲಿನ ಯಂತ್ರೋಪಕರಣಗಳು ಮುಂತಾದ ಸಾಮರ್ಥ್ಯವನ್ನು ಪರೀಕ್ಷಿಸಬೇಕೆಂದು ಸಚಿವರು ತಿಳಿಸಿದರು, ಏಕಗ್ರಾಮ ಹಾಗೂ ಬಹುಗ್ರಾಮ ನೀರು ಸರಬರಾಜು ಯೋಜನೆಗಳಿಗೆ ಮಂಜೂರಾತಿ ಪಡೆದು, ಕಾರ್ಯಗತವಾಗುವ ಸಮಯದಲ್ಲಿ ಎದುರಾಗುವ ಅರಣ್ಯ ಭೂಮಿ ಹಾಗೂ ಇನ್ನಿತರ ತಾಂತ್ರಿಕ ಸಮಸ್ಯೆಗಳ ಕಾರಣ ನೀಡಿ, ಯೋಜನೆಗಳನ್ನು ವಿಳಂಬ



(2ನೇ ಪುಟ ನೋಡಿ)

## ಇಂಡಿ ಕೂಟದಿಂದ ಹೊರನಡೆದ ಆಪ್

ಮಲ್ಲಮ್ಮನುಡಿವಾರ್ತೆ ನವದೆಹಲಿ:ಜು.18: ಮಹತ್ವದ ಬೆಳವಣಿಗೆಯಲ್ಲಿ ಆಮ್ ಆದ್ಮಿ ಪಕ್ಷ ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟದಿಂದ ಹೊರಬಂದಿರುವುದಾಗಿ ಘೋಷಣೆ ಮಾಡಿದೆ.

2024 ರ ಲೋಕಸಭಾ ಚುನಾವಣೆಯಲ್ಲಿ ದೆಹಲಿಯಲ್ಲಿ ಎಎಪಿ ಮತ್ತು ಕಾಂಗ್ರೆಸ್ ಇಂಡಿಯಾ ಮೈತ್ರಿಕೂಟದ ಅಡಿಯಲ್ಲಿ ಒಟ್ಟಾಗಿ ಸ್ಪರ್ಧಿಸಿದ್ದವು. ಆದಾಗ್ಯೂ, ಹರಿಯಾಣ ಮತ್ತು ದೆಹಲಿ ವಿಧಾನಸಭಾ ಚುನಾವಣೆಗಳಲ್ಲಿ ಎರಡೂ ಪಕ್ಷಗಳು ಏಕಾಂಗಿಯಾಗಿ ಸ್ಪರ್ಧಿಸಿದ್ದವು. ಇದೀಗ ತಾನು ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟದಿಂದ ಹೊರಬಂದಿರುವುದಾಗಿ ಎಎಪಿ ಘೋಷಣೆ ಮಾಡಿದೆ.

ಈ ಕುರಿತು ಸುದ್ದಿಸಂಸ್ಥೆಯೊಂದಿಗೆ ಮಾತನಾಡಿರುವ ಎಎಪಿ ನಾಯಕ ಸಂಜಯ್ ಸಿಂಗ್, ಇಂಡಿಯಾ ಒಕ್ಕೂಟದಿಂದ ಆಮ್ ಆದ್ಮಿ ಪಕ್ಷ ಹೊರಬಂದಿದೆ ಎಂದು ಹೇಳಿದ್ದಾರೆ.



'ಇನ್ನು ಮುಂದೆ ಆಪ್ ಇಂಡಿಯಾ ಒಕ್ಕೂಟದ ಭಾಗವಾಗಿಲ್ಲ. ಇದನ್ನು ನಮ್ಮ ನಾಯಕ ಅರವಿಂದ್ ಕೇಜ್ರಿವಾಲ್ ಸ್ಪಷ್ಟಪಡಿಸಿದ್ದಾರೆ ಎಂದು ಒಕ್ಕೂಟದಿಂದ ಎಎಪಿ ಹೊರ ಬಂದಿರುವ ಬಗ್ಗೆ ಸಂಜಯ್ ಸಿಂಗ್ ಮಾಹಿತಿ ನೀಡಿದ್ದಾರೆ.

'ಲೋಕಸಭಾ ಚುನಾವಣೆಯವರೆಗೂ ಭಾರತ ಮೈತ್ರಿಕೂಟ ಇತ್ತು ಎಂಬ ನಮ್ಮ ನಿಲುವನ್ನು ನಾವು ಸ್ಪಷ್ಟಪಡಿಸಿದ್ದೇವೆ. ಸಂಸತ್ತಿನ ವಿಷಯದಲ್ಲಿ, ನಾವು ಯಾವಾಗಲೂ ಸರ್ಕಾರದ ಎಲ್ಲಾ ತಪ್ಪು ನೀತಿಗಳನ್ನು ವಿರೋಧಿಸುತ್ತಿದ್ದೇವೆ. ಪ್ರಸ್ತುತ, ಬಿಹಾರ, ಉತ್ತರ ಪ್ರದೇಶ ಮತ್ತು ಪೂರ್ವಾಂಚಲ ಜನರ ಮನೆಗಳು ಮತ್ತು ಅಂಗಡಿಗಳನ್ನು ಹೇಗೆ ಕೆಡವಿ ನಾಶಪಡಿಸಲಾಗುತ್ತಿದೆ ಎಂಬುದು ನಾವು ನೋಡಿದ್ದೇವೆ ಎಂದು ಕಿಡಿಕಾರಿದರು.

ನಾವು ಸಂಸತ್ತಿನಲ್ಲಿ ಈ ವಿಷಯವನ್ನು ಎತ್ತುತ್ತೇವೆ. ಇಂದಿನವರೆಗೆ ಆಮ್ ಆದ್ಮಿ ಪಕ್ಷವು ಭಾರತ ಮೈತ್ರಿಕೂಟದೊಂದಿಗೆ ಇಲ್ಲ ಎಂದು ನಾವು ಅಧಿಕೃತವಾಗಿ

(2ನೇ ಪುಟ ನೋಡಿ)

# ನಿಗಧಿತ ಅವಧಿಯಲ್ಲಿ ಜಲಜೀವನ ಮಿಷನ್ ಕಾಮಗಾರಿಗಳು ಪೂರ್ಣಗೊಳಿಸಿ:ಸಿಇಓ ಡಾ.ಗಿರೀಶ್ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.18:ಬಸವಕಲ್ಯಾಣ ತಾಲ್ಲೂಕಿನ ಹಣಮಂತವಾಡಿ (ಆರ್) ಗ್ರಾಮದ SETTING UP OF 3KLD FAECAL SLUDGE TREATMENTPLANTIN HANMANTHWADI(R) GRAMPANCHAYAT BASAVAKALYANTALUK ಕಾಮಗಾರಿಯ ಸ್ಥಳ ಪರಿಶೀಲಿಸಿ ಕೂಡಲೆ ಅಂದಾಜು ಪತ್ರಿಕೆಯಂತೆ ಕಾಮಗಾರಿಯನ್ನು ಪ್ರಾರಂಭಿಸಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಸಹಾಯಕ ಬಸವಕಲ್ಯಾಣ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ–ವಿಭಾಗ ಕಾರ್ಯನಿರ್ವಾಹಕ ಅಭಿಯಂತರರಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ ಸೂಚಿಸಿದರು.

ಅವರು ಶುಕ್ರವಾರ ಬಸವಕಲ್ಯಾಣ ತಾಲ್ಲೂಕಿನ ಹಣಮಂತವಾಡಿ (ಆರ್), ಮಲ್ಲಿಕಾರ್ಜುನ ವಾಡಿ ಹಾಗೂ ಹುಲಸೂರ ತಾಲ್ಲೂಕಿನ ಗೋರ್ಟಾ (ಬಿ) ಗ್ರಾಮಗಳ ಜಲಜೀವನ ಮೀಷನ್ ಕಾಮಗಾರಿಗಳ ಪರಿವೀಕ್ಷಣೆ ಮಾಡಿ ಮಾತನಾಡಿದರು.

ಮಲ್ಲಿಕಾರ್ಜುನ ವಾಡಿ ಗ್ರಾಮದ ಜಲ ಜೀವನ ಮೀಷನ್ ಕಾಮಗಾರಿ ಪರಿಶೀಲಿಸಿದ ಅವರು ಕಾಮಗಾರಿಯು ಈಗಾಗಲೆ ಹರ ಘರ ಜಲ್ ಗ್ರಾಮವೆಂದು ಘೋಷಿಸಿ ಗ್ರಾಮ ಪಂಚಾಯತಿಗೆ ಹಸ್ತಾಂತರಿಸಲಾಗಿದೆ, ಕಾಮಗಾರಿಯ ಕಾರ್ಯಾಚರಣೆ ಮತ್ತು ನಿರ್ವಹಣೆಯು ಗ್ರಾಮ ಪಂಚಾಯತಿಯಿಂದ ನಿರ್ವಹಿಸಬೇಕಾಗಿರುವುದರಿಂದ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯು ಸಕ್ರಿಯಗೊಂಡು ನಿಗದಿತ ಸಮಯಕ್ಕೆ ಸಭೆಗಳನ್ನು ಜರುಗಿಸಿ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯು ಉತ್ತಮ ರಿತಿಯಲ್ಲಿ ನಿರ್ವಹಿಸಬೇಕೆಂದು ಸಮಿತಿಯ ಸದಸ್ಯರಿಗೆ ಹಾಗೂ ಗ್ರಾಮಸ್ಥರಿಗೆ ತಿಳಿ ಹೇಳಿದರು.

ಹುಲಸೂರ ತಾಲ್ಲೂಕಿನ ಗೋರ್ಟಾ (ಬಿ) ಗ್ರಾಮದ ಜಲ ಜಿವನ ಮೀಷನ್ ಕಾಮಗಾರಿ ಪರಿಶೀಲಿಸಿ, ಕಾಮಗಾರಿಯು ಪ್ರಗತಿಯಲ್ಲಿದ್ದು ಕಾಮಗಾರಿಯು ಗುಣಪಟ್ಟದಿಂದ ಹಾಗೂ ನಿಗದಿತ ಸಮಯಕ್ಕೆ ಕಾಮಗಾರಿ ಪೂರ್ಣಗೊಳಿಸಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ–ವಿಭಾಗ ಬಸವಕಲ್ಯಾಣ ಅವರಿಗೆ ಹಾಗೂ ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಬಸವಕಲ್ಯಾಣ ತಾಲ್ಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಶುಲ್ಪಿ, ಬಸವಕಲ್ಯಾಣ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಶಿವರಾಜ ಪಲ್ಲೇರಿ, ಪತ್ರು ಜೇ. ಜಿಲ್ಲಾ ಯೋಜನಾ ವೈವಸ್ಥಾಪಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ–ವಿಭಾಗ ಬಸವಕಲ್ಯಾಣ ಶಾಖಾಧಿಕಾರಿಗಳು ಹಾಗೂ ಹಣಮಂತವಾಡಿ (ಆರ್), ಮಲ್ಲಿಕಾರ್ಜುನ ವಾಡಿ ಹಾಗೂ ಹುಲಸೂರ ತಾಲ್ಲೂಕಿನ ಗೋರ್ಟಾ (ಬಿ) ಗ್ರಾಮಗಳ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಕ್ರಮ ನಿಲ್ಲಿಸಲಾಗದಿದ್ದರೆ ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೊಡಲಿ: ಎನ್. ರವಿಕುಮಾರ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.18:ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಅಕ್ರಮ, ಅವ್ಯವಹಾರ, ಭ್ರಷ್ಟಾಚಾರವನ್ನು ನಿಲ್ಲಿಸಲು ಆಗದೇ ಇದ್ದರೆ ಕೂಡಲೇ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಜೀನಾಮೆ ಕೊಡಬೇಕು ಎಂದು ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರು ಒತ್ತಾಯಿಸಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಚಿವ ಪ್ರಿಯಾಂಕ್ ಖರ್ಗೆ ಅವರ ಜಿಲ್ಲೆ ಮಾದಕ ವಸ್ತುಗಳ ಸಾಗಾಟದ ಅಡ್ಡೆಯಾಗಿ ಮಾರ್ಪಟ್ಟಿದೆ. ಸಾವಿರಾರು ಯುವಕರು ಮಾದಕ ಚಟಕ್ಕೆ ಬಲಿಯಾಗುತ್ತಿದ್ದಾರೆ. ಇದಕ್ಕೆ ನೇರ ಕಾರಣ ಇಲ್ಲಿಯ ಸಚಿವರು ಹಾಗೂ ಸರ್ಕಾರ. ಸಚಿವರ ಆಪ್ತ ಶಿಷ್ಯಂದಿರೇ ಈ ಮಾದಕ ವಸ್ತುಗಳ ಸಾಗಾಟ ಮಾಡುತ್ತಿದ್ದು, ಇವೆಲ್ಲವೂ ಎಷ್ಟು ದಿನಗಳಿಂದ ನಡೆ–ಯುತ್ತಿದೆ ಎಂಬುದರ ಕುರಿತು ತನಿಖೆಯಾಗಬೇಕು ಎಂದು ಆಗ್ರಹಿಸಿದರು.ಜಗತ್ತಿಗೆ ಬೋಧನೆ ಮಾಡುವ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ತಮ್ಮ ಕ್ಷೇತ್ರದಲ್ಲಿ ಏನೂ ನಡೆಯುತ್ತಿದೆ ಒಮ್ಮೆ ನೋಡಿಕೊಳ್ಳಲಿ.ಜಿಲ್ಲೆಯಾದ್ಯಂತ ಮಾದಕ ವಸ್ತುಗಳ ದಂಧೆ, ಅಕ್ಕಿ ಕಳ್ಳತನ, ಅಕ್ರಮ ಮರಳುಗಾರಿಕೆ ನಡೆಯುತ್ತಿದೆ. ಇವುಗಳನ್ನು ನಿಯಂತ್ರಸಲು ಸಾಧ್ಯವಾಗದಿದ್ದರೆ ರಾಜೀನಾಮೆ ನೀಡಲಿ ಎಂದು ಅವರು ಒತ್ತಾಯಿಸಿದರು.

ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಧೈರ್ಯವಿದ್ದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲರ ಬಳಿ ಶಾಸಕರು ಹೇಳಿರುವ ಅಹವಾಲುಗಳನ್ನು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದ ಅವರು, ಕಾಂಗ್ರೆಸ್ ಶಾಸಕರ ಅಹವಾಲುಗಳನ್ನು ಸ್ವೀಕರಿಸಲಾಗಿದೆ. ಅವುಗಳನ್ನು ರಾಜ್ಯದ ಜನರ ಮುಂದೆ, ಮಾಧ್ಯಮಕ್ಕೆ ಬಿಡುಗಡೆ ಮಾಡಲಿ. ಆಗ ನಾವೇ ಬಿಜೆಪಿ ಪಕ್ಷದಿಂದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಸನ್ಮಾನ ಮಾಡುತ್ತೇವೆ ಎಂದರು.ಒಬ್ಬ ಗುತ್ತಿಗೆದಾರ ಕೆಂಪಯ್ಯ ಬಿಜೆಪಿ ಆಡಳಿತದ ಅವಧಿಯಲ್ಲಿ ಭ್ರಷ್ಟಾಚಾರ ನಡೆ–ಯುತ್ತಿದೆ ಎಂದು ಹೇಳಿದ್ದಕ್ಕೆ, ಆಗ ಈಗೀನ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ರಾಜೀನಾಮೆಗೆ ಆಗ್ರಹ ಮಾಡಿದ್ದರು. ಇದೀಗ ಅವರ ಪಕ್ಷದ ಶಾಸಕರಾದ ಬಿ.ಆರ್. ಪಾಟೀಲ್, ರಾಜು ಕಾಗೆ, ಬಸವರಾಜ್ ರಾಯರೆಡ್ಡಿ ಅವರೂ ಸೇರಿದಂತೆ ಹಲವು ಶಾಸಕರು ದುಡ್ಡು ತಗೊಂಡು ಮನೆ ಕೊಡುತ್ತಿದ್ದಾರೆ ಎಂದು ಹೇಳಿದ್ದಾರೆ. ಅವರು ಯಾವಾಗ ರಾಜೀನಾಮೆ ಕೊಡುತ್ತಾರೆ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.ಮತ್ತೆ ವಿಚಾರಣೆಗೆ ಹಾಜರು:ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವ ಆರೋಪ ಎದುರಿಸುತ್ತಿರುವ ಬಿಜೆಪಿ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಅವರು ಗುರುವಾರ ಮತ್ತೆ ವಿಚಾರಣೆಗೆ ಹಾಜರಾದರು. ಜಿಲ್ಲಾಧಿಕಾರಿ ಪಾಕಿಸ್ತಾನದಿಂದ ಬಂದಿರಬಹುದು ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದ ಎನ್. ರವಿಕುಮಾರ್ ಅವರ ವಿರುದ್ಧ ನಗರದ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಜಾತಿ ನಿಂದನಾ ಮತ್ತು ಅವಹೇಳನ ಮಾಡಿರುವ ಬಗ್ಗೆ ಪ್ರಕರಣ ದಾಖಲಾಗಿತ್ತು. ಇತ್ತೀಚೆಗಷ್ಟೆ ವಿಚಾರಣೆ ಎದುರಿಸಿದ ಎನ್. ರವಿಕುಮಾರ್ ಅವರು ಮತ್ತೆ ಎರಡನೇ ಬಾರಿ ನಗರದ ದಕ್ಷಿಣ ವಿಭಾಗದ ಎಸಿಪಿ ಕಚೇರಿಗೆ ಆಗಮಿಸಿ ತನಿಖಾಧಿಕಾರಿ ಶರಣಬಸಪ್ಪ ಸುಬೇದಾರ್ ಅವರ ಮುಂದೆ ವಿಚಾರಣೆಗೆ ಹಾಜರಾದರು.

# ಗೃಹ ಆರೋಗ್ಯ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು: ಸಚಿವ ಈಶ್ವರ ಬಿ. ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.18 : ಮನೆ ಬಾಗಿಲಲ್ಲಿಯೇ ಆರೋಗ್ಯ ಸೇವೆ ಒದಗಿಸುವ ಗೃಹ ಆರೋಗ್ಯ ಯೋಜನೆ ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ತಿಳಿಸಿದರು.ಅವರು ಶುಕ್ರವಾರ ಜಿಲ್ಲಾ ಪಂಚಾಯತ ಕಛೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ, ಜಿಲ್ಲಾ ಅಸಾಂಕ್ರಮಿಕ ನಿಯಂತ್ರಣ ಕೋಶ ಇವರ ಸಹಯೋಗದಲ್ಲಿ ನಡೆದ ಗೃಹ ಆರೋಗ್ಯ ಯೋಜನೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಆರೋಗ್ಯ ಸೇವೆ, ಮನೆ ಮನೆಗೆ ಎಂಬ ಧ್ಯೇಯದಲ್ಲಿ 14 ಅಸಾಂಕ್ರಾಮಿಕ ರೋಗಗಳಾದ ಸಕ್ಕರೆ ಕಾಯಿಲೆ, ಅಧಿಕ ರಕ್ತದೊತ್ತಡ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಗರ್ಭಕಂಠದ ಕ್ಯಾನ್ಸರ್, ಡಯಾಬಿಟಿಕ್ ಫೂಟ್, ಡಯಾಬಿಟಿಕ್ ರೆಟಿನೋಪತಿ, ಮಾನಸಿಕ ಆರೋಗ್ಯ ಅಸ್ವಸ್ಥತೆಗಳು, ನರವೈಜ್ಞಾನಿಕ ಸಮಸ್ಯೆಗಳು, ನಿದ್ರೆಯಲ್ಲಿ ಉಸಿರುಗಟ್ಟುವಿಕೆ, ಧೀರ್ಘಕಾಲದ ಮೂತ್ರಪಿಂಡ ಕಾಯಿಲೆ, ಧೀರ್ಘಕಾಲದ ಶ್ವಾಸಕೋಶದ ಕಾಯಿಲೆ, ಲಿವರ್ ಕಾಯಿಲೆ, ರಕ್ತಹೀನತೆ ಆರೋಗ್ಯ ಸಮಸ್ಯೆಗಳು ಇರುವ 30 ವರ್ಷ ಮೇಲ್ಪಟ್ಟವರಿಗೆ ಉಚಿತ ತಪಾಸಣೆ, ಚಿಕಿತ್ಸೆ ಮತ್ತು ಅನುಸರಿಸಬೇಕಾದ ವಿಧಾನದ ಬಗ್ಗೆ ಈ ಯೋಜನೆಯ ಮನೆ ಮನೆಗೆ ಭೇಟಿ ನೀಡುವುದರ ಮೂಲಕ ಸೇವೆ ಒದಗಿಸಲಾಗುವುದು ಎಂದರು.

ನಮ್ಮ ಸರ್ಕಾರ ಆರೋಗ್ಯ ಮತ್ತು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಮತ್ತು ರೋಗಿಗಳ ನಿಯಂತ್ರಣಕ್ಕೆ ಹೆಚ್ಚು ಕ್ರಮ ಕೈಗೊಳ್ಳುತ್ತಿದೆ. ಇಂದಿನ ಪರಿಸರ ಮಾಲಿನ್ಯದಿಂದ ಆಹಾರ, ನೀರು, ಗಾಳಿ ಮಲೀನವಾಗುತ್ತಿದೆ, ಬದಲಾದ ಜೀವನ ಶೈಲಿ, ಒತ್ತಡದ ಜೀವನ ಮತ್ತು ದುಶ್ಚಟಗಳಿಂದ ಆರೋಗ್ಯದ ಮೇಲೆ ಪರಿಣಾಮ ಬೀರಿ ರೋಗಿಗಳಿಗೆ ಅನುವು ಮಾಡಿಕೊಡುತ್ತಿದೆ ಮತ್ತು ನಗರೀಕರಣ, ಕೈಗಾರೀಕರಣಗಳು ಕೂಡ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿವೆ ಎಂದರು.

ಯುವಕರ ಶಾರೀರಿಕ ಸದೃಢತೆ ಇಲ್ಲದೆ ಇರುವುದು, ಮಕ್ಕಳಲ್ಲಿ ಅನಾಮಿಯಾ, ತೂಕ ಕಡಿಮೆ, ಬೆಳವಣಿಗೆ ಕುಂಠಿತ, ಜೀವನಾಯುಷ್ಯ ಕಡಿಮೆ ಮುಂತಾದ ಆರೋಗ್ಯ ಸಮಸ್ಯೆಗಳು ಕಾಣಬಹುದು ಎಂದರು. ಅಸಾಂಕ್ರಮಿಕ ರೋಗಗಳಿಂದ 60% ರಿಂದ 65% ಜನರು ಮರಣ ಹೊಂದುತ್ತಿದ್ದಾರೆ ಎಂದು ಸಮೀಕ್ಷೆಗಳು ತಿಳಿಸುತ್ತಿವೆ ಆದ್ದರಿಂದ ಸರ್ಕಾರ ಈ ಯೋಜನೆಯನ್ನು ಜಾರಿಗೆ ತಂದಿದೆ. ವೈದ್ಯರು, ಆಯುಷ್ಯ ಅಧಿಕಾರಿಗಳು, ಅಶಾ ಕಾರ್ಯಕರ್ತೆಯರು ಇದರಲ್ಲಿ ಪಾತ್ರ ಬಹಳ ದೊಡ್ಡದು, ಮನೆ ಮನೆಗೆ ಭೇಟಿ ನೀಡಿ 100% ಸಾಧನೆ ಮಾಡಬೇಕು ಎಂದರು.ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಧ್ಯಾನೇಶ್ವರ ನಿರಗುಡೆ, ಜಿಲ್ಲಾ ಶಸ್ತ್ರಚಿಕಿತ್ಸಕರು ಅಹಮದುದ್ದಿನ್, ಜಿಲ್ಲಾ ಸರ್ವೇಕ್ಷಣಾ ಆಧಿಕಾರಿ ಶಂಕ್ರಪ್ಪಾ ಬೊಮ್ಮಾ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು, ನರ್ಸ್ಗಳು, ಟೆಕ್ನಿಷಿಯನ್‌ಗಳು ಸೇರಿದಂತೆ ಆಶಾ ಕಾರ್ಯಕರ್ತೆಯರ ಉಪಸ್ಥಿತರಿದ್ದರು.

## ಒಂದನೇ ಪುಟದಿಂದ

# ತಾಳ್ಮೆಯಿಂದ ಇರಬೇಕು: ಡಿಕೆಶಿ

ಬಿಡುಗಡೆ ಮಾಡಿದ್ದೇವೆ ಎಂದು ತಿಳಿಸಿದರು.ಬಿಜೆಪಿ–ಜೆಡಿಎಸ್‌ನವರು ತಾಳ್ಮೆಯಿಂದ ಇರಬೇಕು, ನಿಮಗೂ ಅನುದಾನ ಸಿಗುತ್ತೆ. ಈಗ ಟೀಕೆ ಮಾಡುವ ಮೊದಲು ನೀವು ಕೊಟ್ಟಿರೋದೇನು ಮೊದಲು ಹೇಳಿ. ನನಗೆ ಸ್ಯಾಂಕ್ಷನ್ ಆಗಿದ್ದ ಮೆಡಿಕಲ್ ಕಾಲೇಜು ಕಿತ್ತುಕೊಳ್ಳಲಿಲ್ವಾ? ಅದನ್ನ ಮರೆತುಬಿಟ್ಟಿದ್ದೀರಾ? ಆದರೆ, ನಾವು ಆ ಕೆಲಸ ಮಾಡಲ್ಲ. ಈಗ ಪ್ರಾರಂಭ ಆಗಿದೆ. ಎಲ್ಲರಿಗೂ ಅನುದಾನ ಕೊಡ್ತೀವಿ ಎಂದರು.

ಬೆಂಗಳೂರಿನ ಖಾಸಗಿ ಶಾಲೆಗಳಿಗೆ ಹುಸಿ ಬಾಂಬ್ ಬೆದರಿಕೆ ವಿಚಾರವಾಗಿ ಮಾತನಾಡಿ, ಆ ರೀತಿ ಯಾವುದೇ ಬಾಂಬ್ ಬೆದರಿಕೆ ಇಲ್ಲ. ಎಲ್ಲರೂ ಮುನ್ನೆಚ್ಚರಿಕೆಯಿಂದ ಇರಬೇಕು. ನಮ್ಮ ಪೊಲೀಸ್ ಅಧಿಕಾರಿಗಳು ಅದನ್ನ ನೋಡಿಕೊಳ್ತಾರೆ ಎಂದರು. ಸಣ್ಣಪುಟ್ಟ ಅಂಗಡಿಗಳಿಗೆ ಜಿಎಸ್ಟಿ ತೆರಿಗೆ ಹಾಕ್ತಿರೋ ಬಗ್ಗೆ ಪ್ರತಿಕ್ರಿಯಿಸಿ, ಅದರ ಬಗ್ಗೆ ಸಂಪೂರ್ಣ ಮಾಹಿತಿ ಇಲ್ಲ. ಪರಿಶೀಲನೆ ನಡೆಸುತ್ತಿದ್ದು, ನಂತರ ಮಾತನಾಡುತ್ತೇನೆ ಎಂದು ತಿಳಿಸಿದರು.

# ನೀಡಿದ ಸಚಿವ ಈಶ್ವರ ಬಿ.ಖಂಡ್ರೆ

ಬ್ರಿಮ್ಸ್‌ನಲ್ಲಿ ಸಂಭವಿಸಿದ ವಿದ್ಯುತ್ ವ್ಯತ್ಯಯದ ಕುರಿತು ಅವರು ಗಂಭೀರವಾಗಿ ಗಮನ ಹರಿಸಿದ್ದು, ಈ ಘಟನೆ ನಿರ್ಲಕ್ಷ್ಯದಿಂದ ಉಂಟಾಗಿದ್ದರೆ, ಅದನ್ನು ಯಾವುದೇ ಕಾರಣಕ್ಕೂ ಕ್ಷಮಿಸಲಾಗದು ಎಂದು ತಿಳಿಸಿದ್ದಾರೆ. ಈ ಕುರಿತು ತಕ್ಷಣ ತನಿಖೆ ನಡೆಸಿ ವರದಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿದ್ದಾರೆ. ವರದಿ ಬಂದ ತಕ್ಷಣ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಅವರು ಎಚ್ಚರಿಸಿದರು.

ಆಸ್ಪತ್ರೆಯಲ್ಲಿ ಯಾವುದೇ ರೀತಿಯ ಅಸೌಕರ್ಯವಾಗದಂತೆ ಕ್ರಮ ಕೈಗೊಳ್ಳುತ್ತೇವೆ. ಜನತೆಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ಈ ಸಂದರ್ಭದಲ್ಲಿ ಪೌರಾಡಳಿತ ಸಚಿವರಾದ ರಹೀಂ ಖಾನ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಬ್ರಿಮ್ಸ್ ನಿರ್ದೇಶಕ ಶಿವಕುಮಾರ ಶೆಟಕಾರ, ವೈದ್ಯಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಪ್ಪುಪಟ್ಟಿಗೆ ಸೇರಿಸಲು ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ

ಮಾಡಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು ಯೋಜನಾವರದಿ ಸಿದ್ಧಪಡಿಸುವಾಗಲೇ ಎದುರಾಗುವ ಅಡ್ಡಿ ಆತಂಕಗಳನ್ನು ಗಮನಿಸಬೇಕೆಂದು ಸಲಹೆ ಮಾಡಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಿಂಗಳಲ್ಲಿ ಮೂರು ದಿನ ಪಂಚಾಯತ್ ರಾಜ್, ಗ್ರಾಮೀಣ ನೀರು ಸರಬರಾಜು ಹಾಗೂ ನರೇಗಾ ಇಲಾಖೆಗಳ ಪ್ರಗತಿಯನ್ನು ಪರಿಶೀಲಿಸಬೇಕು, ಜಿಲ್ಲಾ ಮಟ್ಟದಲ್ಲೇ ಸಿಇಒಗಳು ಸಮಸ್ಯೆಗೆ ಪರಿಹಾರ ಹುಡಕಬೇಕು ಎಂದೂ ಸಚಿವರು ಈ ಸಂದರ್ಭದಲ್ಲಿ ಹೇಳಿದರು.

ಇಡೀ ದಿನ ನಡೆದ ಸಭೆಯಲ್ಲಿ ಸಚಿವರು ಜಿಲ್ಲಾವಾರು ಪ್ರಗತಿಯನ್ನು ಪರಿಶೀಲಿಸಿ, ಕಡಿಮೆ ಪ್ರಗತಿ ಸಾಧಿಸಿದ ಎಂಜನಿಯರುಗಳ ಚಳಿ ಬಿಡಿಸಿದರಲ್ಲದೆ, ಸಾಕಷ್ಟು ಪ್ರಮಾಣದಲ್ಲಿ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಗಳಿಗೆ ಕಳುಹಿಸುವಲ್ಲಿ ಆಲಸ್ಯ ತೋರುವ ಎಂಜನಿಯರುಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು, ನೀರು ಕಲುಷಿತಗೊಂಡು ಗ್ರಾಮಗಳಲ್ಲಿ ಸಮಸ್ಯೆ ತಲೆದೋರಿದಲ್ಲಿ ಎಂಜನಿಯರುಗಳನ್ನು ಹೊಣೆ ಮಾಡಲಾಗುವುದು ಎಂದು ಎಚ್ಚರಿಸಿದರು.

ಸಾರ್ವಜನಿಕರಿಂದ ಬರುವ ದೂರುಗಳನ್ನು ತಮ್ಮ ಮೇಜಿನಿಂದ ಕಳುಹಿಸಿದಲ್ಲಿ ಮಾತ್ರ ಸಮಸ್ಯೆ ಬಗೆಹರಿಯುವದಲ್ಲ, ದೂರನ್ನು ಪೂರ್ಣವಾಗಿ ಪರಿಹರಿಸುವ ಮೂಲಕ ಜನರ ಸಮಸ್ಯೆಗಳನ್ನು ದೂರ ಮಾಡಬೇಕು, ಪತ್ರಿಕೆ ಹಾಗೂ ವಾಹಿನಿಗಳಲ್ಲಿ ಬರುವ ದೂರುಗಳನ್ನು ಅಂದೇ ಪರಿಶೀಲಿಸಿ, ಅಗತ್ಯವಿದ್ದಲ್ಲಿ ಕ್ರಮ ಕೈಗೊಂಡು ಸೂಕ್ತ ಸ್ಪಷ್ಟನೆ ನೀಡಬೇಕೆಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲಾ, ಗ್ರಾಮೀಣ ನೀರು ಸರಬರಾಜು ಇಲಾಖೆಯ ನಿರ್ದೇಶಕ ಕೆ.ನಾಗೇಂದ್ರಪ್ರಸಾದ್ ಹಾಗೂ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಕೂಟದಿಂದ ಹೊರನಡೆದ ಆಪ್

ಹೇಳಿದ್ದೇವೆ. ನಮ್ಮ ಮೈತ್ರಿ ಲೋಕಸಭಾ ಚುನಾವಣೆವರೆಗೂ ಮಾತ್ರ ಇತ್ತು. ಜುಲೈ 21 ರಿಂದ ಆಗಸ್ಟ್ 21 ರವರೆಗೆ ನಡೆಯಲಿರುವ ಸಂಸತ್ತಿನ ಮುಂಬರುವ ಮಳೆಗಾಲದ ಅಧಿವೇಶನದಲ್ಲಿ ದೆಹಲಿಯಲ್ಲಿ ಕೊಳೆಗೇರಿಗಳ ಧ್ವಂಸವನ್ನು ಎಎಪಿ ಪಕ್ಷವು ಎತ್ತಿ ತೋರಿಸುತ್ತದೆ ಎಂದು ಸಿಂಗ್ ಹೇಳಿದರು.

# ವಿಕಲಚೇತನರಿಗೆ ಸೋಲಾರ ಯಂತ್ರಗಳು ವಿತರಣೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.18 : ಭಾಲ್ಕಿ ಪುರಸಭೆ ವ್ಯಾಪ್ತಿಯಲ್ಲಿ (08 ಜನ) ವಿಕಲಚೇತನ ಫಲಾನುಭವಿಗಳಿಗೆ ಸೋಲಾರನಿಂದ ನಡೆಯುವ ಯಂತ್ರಗಳನ್ನು ಒದಗಿಸಲು ಅರ್ಹ ವಿಕಲಚೇತನ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಭಾಲ್ಕಿ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಆಸಕ್ತ ಹಾಗೂ ಅರ್ಹ ವಿಕಲಚೇತನ ಆಭ್ಯರ್ಥಿಗಳು ಅಂಗವಿಕಲ ಪ್ರಮಾಣ ಪತ್ರ, ಜಾತಿ ಆದಾಯ ಪ್ರಮಾಣ ಪತ್ರ, ಇತ್ತೀಚಿನ ಪಾಸ್‌ಪೋರ್ಟ ಅಳತೆಯ ಭಾವಚಿತ್ರ, ವಿಕಲಚೇತನರ ಅಂಗವಿಕಲತೆಯುಳ್ಳ ಸಂಪೂರ್ಣ ಭಾವಚಿತ್ರ, ಆಧಾರ ಕಾರ್ಡ, ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಪ್ಯಾನ್ ಕಾರ್ಡ, ರಾಷ್ಟ್ರೀಕೃತ ಬ್ಯಾಂಕ್ ಪಾಸ್‌ಬುಕ್ ಪ್ರತಿಗಳು ಅರ್ಜಿ ನಮೂನೆಯೊಂದಿಗೆ ಲಗತ್ತಿಸಿ ದಿನಾಂಕ: 31–07–2025 ರ ಸಾಯಂಕಾಲ 5.30 ಗಂಟೆಯೊಳಗಾಗಿ ಭಾಲ್ಕಿ ಪುರಸಭೆ ಕಾರ್ಯಾಲಯದ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಭಾಲ್ಕಿ ಪುರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.18 : ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಆಗಸ್ಟ್. 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ 20 ರಿಂದ 40 ವರ್ಷ ವಯಸ್ಸುಳ್ಳ ಈಗಾಗಲೇ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿರುವವರನ್ನು ಪತ್ರಿಕೋದ್ಯಮ ಪದವಿ ಪಡೆದವರು ಹಾಗೂ ಆಸಕ್ತಿಯುಳ್ಳವರು ದಿನಾಂಕ: 25–07–2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ https://sahithyaacademy.karnataka.gov.in ನಲ್ಲಿ ಪಡೆದುಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣೆ ಶಿಬಿರದಿಂದ ಬಡ ಜನರ ಆರೋಗ್ಯ ಚಿಕಿತ್ಸೆಗೆ ಲಾಭ: ಸಿಪಿಐ ಶ್ರೀಕಾಂತ ಅಲ್ಲಾಪುರೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.18: ಉಚಿತ ಆರೋಗ್ಯ ತಪಾಸಣಾ ಶಿಬಿರದಿಂದ ಬಡ ಜನರು ಆರೋಗ್ಯಕ್ಕೆ ಸಂಬಂಧಪಟ್ಟಂತೆ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಉತ್ತಮ ಅವಕಾಶವಾಗಿದೆ ಇದರ ಲಾಭ ತೆಗೆದು ಕೊಳ್ಳಬೇಕು ಎಂದು ಕಮಲನಗರ ಪೊಲೀಸ್ ಠಾಣಾ ನೂತನ ಸಿಪಿಐ ಶ್ರೀಕಾಂತ ಅಲ್ಲಾಪುರೆ ಹೇಳಿದರು.

ಪಟ್ಟಣದ ಮಹಾಜನ ಆಸ್ಪತ್ರೆಯಲ್ಲಿ ಟ್ರಿಟ್ಮೆಂಟ್ ರೇಂಜ್ ಹಾಸ್ಪಿಟಲ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಉಚಿತ ಶಸ್ತ್ರ ಚಿಕಿತ್ಸಾ ಶಿಬಿರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಆರೋಗ್ಯವೇ ಭಾಗ್ಯ ಎನ್ನುವಂತೆ ಮನುಷ್ಯನಿಗೆ ಆರೋಗ್ಯ ಚೆನ್ನಾಗಿ ಇದ್ದರೆ ಜೀವನದಲ್ಲಿ ಏನು ಬೇಕಾದರೂ ಸಾಧನೆ ಮಾಡಬಹುದು ಎಂದರು.



ಡಾ, ಶ್ರೀಧರ ರೆಡ್ಡಿ ಕಾ–ರೆಡ್ಡಿ ಮಾತನಾಡಿ, ಈ ಶಿಬಿರದಲ್ಲಿ ಎಲ್ಲಾ ರೀತಿಯ ರೋಗಗಳ ಚಿಕಿತ್ಸೆ ಹಾಗೂ ವಿಶೇಶವಾಗಿ ಪೈಲ್ಸ್, ಪಿಸ್ತುಲಾ, ಫಿಶರ್, ಹಾಗೂ ವೆರಿಕೊಸ್ ವೇಯ್ನ ??ಸಮಸ್ಯೆಗೆ ಪರಿಹಾರ ಮಾಡಿಕೊಳ್ಳಬಹುದು ಹಾಗೂ ರೋಗಿಗಳಿಗೆ ಉಚಿತವಾಗಿ ಹೆಚ್ಚುವರಿ ಚಿಕಿತ್ಸೆಗಾಗಿ ಹೈದ್ರಾಬಾದಗೆ ಬಸ್ ಸೌಲಭ್ಯ ಮತ್ತು ಉಚಿತ ಊಟದ ಸೌಲಭ್ಯ ಮಾಡಲಾಗಿದೆ ಎಂದು ತಿಳಿಸಿದರು.ಶಿಬಿರದಲ್ಲಿ 100ಕ್ಕೂ ಹೆಚ್ಚು ರೋಗಿಗಳು ತಪಾಸಣೆಯಲ್ಲಿ ಭಾಗವಹಿಸಿದ್ದರು. ಉಚಿತವಾಗಿ ಔಷಧಿ ವಿತರಿಸಲಾಯಿತು.

ಈ ಸಂದರ್ಭದಲ್ಲಿ ರೇವಣಪ್ಪಾ ಮಹಾಜನ, ಪಿಎಸ್‌ಐ ಆಶಾ ರಾಠೊಡ, ಭಾಸ್ಕರ, ಲಿಂಗಾನಂದ ಮಹಾಜನ, ಅಮರ ಮಹಾಜನ ಸೇರಿದಂತೆ ಸುತ್ತ ಮುತ್ತುಲಿನ ಹಳ್ಳಿಯ ರೋಗಿಗಳಿಗೆ ಇದ್ದರು.

ಬಿವಿವಿ ಸಂಘದಿಂದ ಶ್ರೀಗಳಿಗೆ ಗೌರವಾಭಿನಂದನೆ

## ಬಾಗಲಕೋಟೆಗೆ ಬೆಳಕಾದ ಪ್ರಭು ಸ್ವಾಮೀಜಿ-ಡಾ.ಚರಂತಿಮಠ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.18– ಚರಂತಿಮಠದ ಪ್ರಭು ಸ್ವಾಮೀಜಿ ನಗರದ ಚರಂತಿಮಠವನ್ನು ನಾಡಿನ ಮಠವನ್ನಾಗಿಸಿ, ಶಿವಯೋಗದ ಮೂಲಕ ಬಾಗಲಕೋಟೆಗೆ ಬೆಳಕಾದ ಮಹಾನ್ ಚೇತನ ಎಂದು ಬಿವಿವಿಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪಡೆದ ಪೂಜ್ಯ ಪ್ರಭುಸ್ವಾಮಿಗಳವರಿಗೆ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ ಹಾಗೂ ವಿದ್ಯಾಗಿರಿಯ ಬಿ.ವಿ.ವಿ.ಎಸ್ ಕಲಾ,ವಿಜ್ಞಾನ,ಹಾಗೂ ವಾಣಿಜ್ಯ ಸ್ವತಂತ್ರ ಪದವಿ–ಪೂರ್ವ ಮಹಾವಿದ್ಯಾಲಯದ ವತಿಯಿಂದ ಶುಕ್ರವಾರ ಇಂಜನಿಯರಿಂಗ್ ಕಾಲೇಜಿನ ನೂತನ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಶ್ರೀಗಳಿಗೆ ಗೌರವಾಭಿನಂದನೆ ಸಲ್ಲಿಸಿ ಅವರು ಮಾತನಾಡಿದರು.

ಒಂದು ಓಣಿಯ ಮಠದಂತೆ ಇದ್ದ ಚರಂತಿಮಠವನ್ನು ಅನೇಕ ಧಾರ್ಮಿಕ ಆಚರಣೆಗಳು, ಶಿವಯೋಗದ ಪ್ರವಚನಗಳ ಮೂಲಕ ಧಾರ್ಮಿಕತೆಯ ವಾತವಾರಣ ನಿರ್ಮಾಣ ಮಾಡಿ, ನಾಡಿನ ಮಠವನ್ನಾಗಿ ಬೆಳಗಿಸಿದ ಕೀರ್ತಿ ಪೂಜ್ಯ ಪ್ರಭುಸ್ವಾಮಿಗಳಿಗೆ ಸಲ್ಲುತ್ತದೆ ಎಂದು ಚರಂತಿಮಠ ಹೇಳಿದರು.

ಬಾಗಲಕೋಟೆ ಹಾಗೂ ನಿಡಸೋಸಿಯ ಮಠದೊಂದಿಗೆ ಶಿಕ್ಷಣ ಸಂಸ್ಥೆಗಳನ್ನು ಪರಿಣಾಮಕಾರಿಯಾಗಿ ಬೆಳಕಿಗೆ ತಂದವರು, ಜನರಲ್ಲಿರುವ ಅನೇಕ ಮೂಢನಂಬಿಕೆ ತೆ–ಗೆದು ಹಾಕುವ ಮೂಲಕ ಅನೇಕ ಕ್ರಾಂತಿಕಾರಿ ಬದಲಾವಣೆಗೆ ಸಾಕ್ಷಿಯಾಗಿ, ನೀರಾವರಿ, ಕೃಷಿ ಕ್ಷೇತ್ರಕ್ಕೆ ಆದ್ಯತೆ ನೀಡುವ ಮೂಲಕ ರೈತರಿಗೆ ದಾರಿದೀಪವಾಗಿದ್ದಾರೆ. ಈ ಸಾಧನೆ ಗುರುತಿಸಿ ಅವರಿಗೆ ಬೆಳಗಾವಿ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್ ನೀಡಿದ್ದು ಹೆಮ್ಮೆಯ ವಿಚಾರವಾಗಿದೆ ಎಂದ ಅವರು, ಶಾಲಾ ಕಾಲೇಜುಗಳಲ್ಲಿ ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳು ಮುಖ್ಯವಾಗಿದ್ದು ಅದರಿಂದ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಗಳಿಗೆ ವೇದಿಕೆ ನಿರ್ಮಿಸಿ, ಉತ್ತಮ ವ್ಯಕ್ತಿತ್ವ ರೂಪಿಸುತ್ತವೆ ಎಂದರು.

ಸಾನಿಧ್ಯ ವಹಿಸಿದ್ದ ಇಳಕಲ್ಲಿನ ಚಿತ್ತರಗಿ ಸಂಸ್ಥಾನಮಠದ ಪೂಜ್ಯ ಗುರುಮಹಾಂತ ಸ್ವಾಮಿಗಳು ಮಾತನಾಡಿ, ಪ್ರಭುಸ್ವಾಮಿಗಳು ಅತ್ಯಂತ ಕ್ರೀಯಾಶೀಲರಾಗಿ, ಅಧ್ಯಯನಶೀಲರಾಗಿ ಹೊಸ ಹೊಸ ಚಿಂತನೆಗಳ ಮೂಲಕ ನಿತ್ಯನೂತನರಾಗಿದ್ದಾರೆ. ಭಕ್ತರು ತನ್ನಂತೆಯೆಂದು ನೋಡುವ ಮನೋಭಾವ, ಅವರ ವಿಚಾರಗಳು ಇಂದಿನ ಯುವ ಪೀಳಿಗೆಗೆ ಮಾದರಿಯಾಗಿವೆ ಎಂದು ಹೇಳಿದರು.

ಗೌರವಾಭಿನಂದನೆ ಸ್ವೀಕರಿಸಿ ಮಾತನಾಡಿದ ಪ್ರಭುಸ್ವಾಮಿಗಳು, ಜಗತ್ತನ್ನೇ ತನ್ನತ್ತ ಸೆಳೆಯುವ ಶಕ್ತಿ ಭಾರತೀಯ ಸಂಸ್ಕೃತಿಗೆ ಇದೆ. ಅದಕ್ಕೆ ಎಲ್ಲ ಶಾಲಾ ಕಾಲೇಜುಗಳಲ್ಲಿ ಸಾಂಸ್ಕೃತಿಕ ಚಟುವಟಿಕೆಗಳನ್ನು ಅಳವಡಿಸಲಾಗಿದೆ. ಇವು ನಮ್ಮನ್ನು ನಾವು ಅರ್ಥಮಾಡಿಕೊಳ್ಳಲು ಸಹಾಯವಾಗುತ್ತವೆ. ಎಷ್ಟೇ ಶಿಕ್ಷಣ ಪಡೆದರೂ ಸಹಿತ ಮಾನವೀಯತೆ ಎಂಬ ಸಂಸ್ಕೃತಿಯಲ್ಲಿ ಬದುಕಿದಾಗ ಮಾತ್ರ ಮನುಷ್ಯ ಮನುಷ್ಯಾಗಿರುವ ವ್ಯವಸ್ಥೆ ಬರುತ್ತದೆ. ಇಲ್ಲದೆ ಹೋದರೆ ಬರಿ ಯಾಂತ್ರಿಕವಾಗಿ ಬದುಕುವ ವ್ಯವಸ್ಥೆ ಬರುತ್ತದೆ. ಆ ನಿಟ್ಟಿನಲ್ಲಿ ಬಿವಿವಿ ಸಂಘವು ಶತಮಾನದಿಂದಲೂ ಮಾನವೀಯ ನೆಲಗಟ್ಟಿನಲ್ಲಿ ಶಿಕ್ಷಣ ದಾಸೋಹವನ್ನು ಮಾಡುತ್ತಾ ಬಂದಿರುವುದು ದೇಶಕ್ಕೆ ಮಾದರಿಯಾದ ಸಂಸ್ಥೆಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ದ್ವಿತಿಯ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ 6 ಜನ ವಿದ್ಯಾರ್ಥಿಗಳಿಗೆ ನಗದು ಬಹುಮಾನ ವಿತರಿಸಿದರು. ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಸ್ವಾಗತಿಸಿದರು, ಎಸ್.ಆರ್. ಮುಗನೂರಮಠ, ಡಾ.ಎಸ್. ಎಂ.ಗಾಂವಕರ ವಂದಿಸಿದರು. ನಂತರ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಸಮಾರಂಭದಲ್ಲಿ ಸಂಘದ ಎಲ್ಲ ಸದಸ್ಯರುಗಳು, ವಿವಿಧ ಮಹಾವಿದ್ಯಾಲಯಗಳ ಪ್ರಾಚಾರ್ಯರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಜಿಲ್ಲಾ ವಿಜ್ಞಾನ ಕೇಂದ್ರದಿಂದ ಅಂತರರಾಷ್ಟ್ರೀಯ ಚಂದ್ರ ದಿನ ಪ್ರಯುಕ್ತ ವಿವಿಧ ಕಾರ್ಯಕ್ರಮಗಳ ಆಯೋಜನೆ

ಕಲಬುರಗಿ, ಜುಲೈ.18– ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ವತಿಯಿಂದ ಇದೇ ಜುಲೈ 19 ರಿಂದ 22 ರವರೆಗೆ ಅಂತರರಾಷ್ಟ್ರೀಯ ಚಂದ್ರ ದಿನದ (INTERNATIONAL MOON DAY) ಅಚರಣೆ ಪ್ರಯುಕ್ತ ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ಡಿಎಸ್‌ಸಿಜಿ ಅಡಿಟೋರಿಯಂದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಅಧಿಕಾರಿಗಳು ತಿಳಿಸಿದ್ದಾರೆ.

ಜುಲೈ 19 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ "ಭವಿಷ್ಯದ ಚಂದ್ರ ಮಾಡ್ಯೂಲ್" (ಅಟಚಿಥಿ modeling contest on "FutureLunarModule") Pರಿತು ಕ್ಲೇ ಮಾಡೆಲಿಂಗ್ ಸ್ಪರ್ಧೆ ಆಯೋಜಿಸಲಾಗಿದೆ. ಜುಲೈ 20 ರಂದು ಭಾನುವಾರ ಬೆಳಿಗ್ಗೆ 11 ಗಂಟೆಗೆ "ಚಂದ್ರನ ಪರಿಶೋಧನೆ ಕುರಿತು" ಚಲನಚಿತ್ರ ಪ್ರದರ್ಶನ (Film Show on `Lunar Exploration)' ಜರುಗಲಿದೆ. ಜುಲೈ 21 ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ "2050ರಲ್ಲಿ ಚಂದ್ರನ ಮೇಲೆ ನನ್ನ ಜೀವನ" (Story Writing contest on `My life on Moon in 2050') ಎಂಬ ವಿಷಯ ಕುರಿತು ಕಥಾ ಸ್ಪರ್ಧೆ ಜರುಗಲಿದೆ. ಜುಲೈ 22 ರಂದು ಮಂಗಳವಾರ ಬೆಳಿಗ್ಗೆ 11 ಗಂಟೆಗೆ "ಒಂದು ಚಂದ್ರ, ಒಂದು ದೃಷ್ಟಿ, ಒಂದು ಭವಿಷ್ಯ" ("One Moon, One Vision, One Future") ಕುರಿತು ಮೇರಿಲ್ಯಾಂಡ್ ನಾಸಾ ಇಸ್ರೋ ಹೈದ್ರಾಬಾದ್‌ನ ಎನ್‌ಆರ್‌ಎಸ್‌ಎ ಮಾಜಿ ವಿಜ್ಞಾನಿ ಡಾ.ನಾರಾಯಣ ಇನಾಮದಾರ್ ಅವರು ಉಪನ್ಯಾಸ ನೀಡುವರು. ಮಧ್ಯಾಹ್ನ 12.30 ಗಂಟೆಗೆ ರಸಪ್ರಶ್ನೆ ಸ್ಪರ್ಧೆ ಮತ್ತು ಬಹುಮಾನ ವಿತರಣಾ ಕಾರ್ಯಕ್ರಮ ಜರುಗಲಿದೆ.

## ಮಾಧ್ಯಮ ಅಕಾಡೆಮಿಯಿಂದ ಫೆಲೋಷಿಪ್‌ಗೆ : ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜುಲೈ 18–ಕರ್ನಾಟಕ ಮಾಧ್ಯಮ ಅಕಾಡೆಮಿಯ ವತಿಯಿಂದ ಪತ್ರಕರ್ತರಿಗೆ ಆರು ವಿಷಯಗಳ ಕುರಿತ ಫೆಲೋಷಿಪ್‌ಗೆ ಅರ್ಜಿ ಆಹ್ವಾನಿಸಲಾಗಿದೆ.

ಅಕಾಡೆಮಿಯ ಸಾಮಾನ್ಯ ಆಯವ್ಯಯದಡಿ ಎರಡು, ಮಹಿಳಾ ಆಯವ್ಯಯದಡಿ ಎರಡು ಹಾಗೂ ಪರಿಶಿಷ್ಟ ಜಾತಿ ಉಪಯೋಜನೆಯಡಿ ಒಂದು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ ಒಂದು ಫೆಲೋಷಿಪ್ ನೀಡಲಾಗುವುದು. ಫೆಲೋಷಿಪ್ ಅವಧಿ 6 ತಿಂಗಳು.

ಕನಿಷ್ಠ ಐದು ವರ್ಷ ಸೇವಾನುಭವ ಹೊಂದಿರುವ, ಕನಿಷ್ಠ 30 ವರ್ಷದಿಂದ 50 ವರ್ಷ ವಯೋಮಿತಿಯ ಪತ್ರಕರ್ತರು ಫೆಲೋಷಿಪ್‌ಗೆ ಅರ್ಜಿ ಸಲ್ಲಿಸಬಹುದು. ಪತ್ರಕರ್ತರು ಪದವೀಧರರಾಗಿರಬೇಕು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಹಾಗೂ ಉಪಗ್ರಹ ಸುದ್ದಿವಾಹಿನಿಗಳಲ್ಲಿ ಕಾರ್ಯನಿರ್ವಹಿಸುತ್ತಿರಬೇಕು. ಈ ಕುರಿತು ಸಂಪಾದಕರ ದೃಢೀಕರಣ ಪತ್ರ ಸಲ್ಲಿಸಬೇಕು.

ಫೆಲೋಷಿಪ್‌ನ ವಿಷಯಗಳು ಈ ಕೆಳಗಿನಂತಿವೆ: 1. ಬಾಲ್ಯವಿವಾಹ, ಕಔಅಖಔ, ಮರ್ಯಾದೆಗೇಡು ಹತ್ಯೆ– ಮಾಧ್ಯಮ ದೃಷ್ಟಿಕೋನ 2. ಕೃಷಿ ಸಂವಹನ– ಒಂದು ಅಧ್ಯಯನ 3. ಕಲ್ಯಾಣ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಮಾಧ್ಯಮಗಳ ಪಾತ್ರ 4. ಬುಡಕಟ್ಟು ಕಾಯ್ದೆಗಳು ಹಾಗೂ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ–ಮಾಧ್ಯಮ ನೋಟ 5. Role of Media in creating awareness on cyber crime and digital safety (ಇಂಗ್ಲಿಷ್‌ನಲ್ಲಿ ಅಧ್ಯಯನ ವರದಿ ಸಲ್ಲಿಸುವುದು) 6. ಮಾಧ್ಯಮ ಶಿಕ್ಷಣ ಮತ್ತು ವೃತ್ತಿ ನಡುವಿನ ಅಂತರ: ಕಾರಣಗಳು, ಪರಿಣಾಮ ಹಾಗೂ ಪರಿಹಾರ ಫೆಲೋಷಿಪ್ ಅವಧಿ ಆರು ತಿಂಗಳು. ಅರ್ಜಿ ಸ್ವೀಕರಿಸಲು 2 ನೇ ಆಗಸ್ಟ್ 2025 ಕೊನೆಯ ದಿನವಾಗಿದ್ದು, ವಿಜೇತರ ಆಯ್ಕೆಯಲ್ಲಿ ಅಕಾಡೆಮಿಯ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಅರ್ಜಿ ನಮೂನೆಯನ್ನು ಅಕಾಡೆಮಿಯ ವೆಬ್‌ಸೈಟ್ mediaacademy.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಪೂರಕ ದಾಖಲೆಗಳು ಹಾಗೂ ಅಧ್ಯಯನ ಕುರಿತ ಟಿಪ್ಪಣಿಯೊಂದಿಗೆ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು 560001 ಇವರಿಗೆ ಕಳುಹಿಸಬಹುದು ಅಥವಾ kmafellowship2025@gmail.com ಗೆ ಇ–ಮೇಲ್ ಮೂಲಕ ಕಳಿಸಬಹುದು.

## ನಾರಾಯಣಪುರ ಅಣೆಕಟ್ಟೆ ಎಚ್ಚರಿಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 18 : ನಾರಾಯಣಪುರ ಅಣೆಕ–ಟ್ಟೆ ಎಚ್ಚರಿಕೆ ಸಂದೇಶವನ್ನು ಅಣೆಕಟ್ಟಿನ ಪ್ರಸ್ತುತ ನೀರಿನ ಸಂಗ್ರಹವು 89.54% ಇರುತ್ತದೆ. ಕೃಷ್ಣಾ ನದಿಗೆ ಹೊರಹರಿವು 75,240 ಕ್ಯೂಸೆಕ್ ಇರುತ್ತದೆ.

ಅಣೆಕಟ್ಟಿನ ಮೇಲ್ಭಾಗದ ಜಲಾನಯನ ಪ್ರದೇಶದಲ್ಲಿನ ಮಳೆಯ ಪ್ರಮಾಣ ಮತ್ತು ಆಲಮಟ್ಟಿ ಅಣೆಕಟ್ಟೆಯ ಹೊರಹರಿವು ಪರಿಗಣಿಸಲಾಗಿ ನಾರಾಯಣಪುರ ಅಣೆಕಟ್ಟೆಗೆ ಸುಮಾರು 90,000 ಕ್ಯೂಸೆಕ್ ಒಳಹರಿವು ಬರುವ ಸಾಧ್ಯತೆ ಇದ್ದು, ಇಂದು ಬೆಳಿಗ್ಗೆ 10 ಗಂಟೆ ನಂತರ, ಪ್ರಸ್ತುತ ಇರುವ ಹೊರಹರಿವನ್ನು 75,240 ಕ್ಯೂಸೆಕ್ ರಿಂದ 95,000 ಕ್ಯೂಸೆಕ್‌ಗೆ ಹಂತ ಹಂತವಾಗಿ ಜಲಾಶಯದ ಕ್ರೆಸ್ಟ ಗೇಟುಗಳ ಮುಖಾಂತರ ಹೆಚ್ಚಿಸಲಾಗುವುದು, ಮತ್ತು ಒಳಹರಿವಿನ ಅನುಸಾರ ನದಿಗೆ ಬಿಡುತ್ತಿರುವ ಹೊರಹರಿವನ್ನು ಕ್ರಮೇಣ ಹೆಚ್ಚು ಮಾಡಲಾಗುವುದು. ನಾರಾಯಣಪುರ ಅಣೆಕಟ್ಟಿನ ಕೆಳಭಾಗದಲ್ಲಿರುವ ನದಿ ಪಾತ್ರದ ಜನ ಜಾನುವಾರು ಜಾಗ್ರತೆಯಿಂದ ಇರಲು ಎಚ್ಚರಿಕೆ ನೀಡಲು ಪ್ರಕಟಣೆಯಲ್ಲಿ ಕೋರಿದೆ.

## ಇಂದು ಗವಿಮಠದಲ್ಲಿ ಶ್ರಾವಣ ಮಾಸ ನಿಮಿತ್ತ ಪೂರ್ವಭಾವಿ ಸಭೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 18 ಪ್ರತಿವರ್ಷದಂತೆ ಈ ವರ್ಷವೂ ಕೂಡ ಪವಿತ್ರ ಶ್ರಾವಣ ಮಾಸ ನಿಮಿತ್ಯವಾಗಿ ಇಂದು ಸಾಯಂಕಾಲ 05:00 ಗಂಟೆಗೆ ನಗರದ ಇತಿಹಾಸ ಪ್ರಸಿದ್ಧ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು ವಿಶೇಷ ಉಪನ್ಯಾಸ ಮಾಲೆ ಪೂರ್ವ ಸಿದ್ಧತಾ ಸಭೆ ಪೂಜ್ಯಶ್ರೀ ಷ. ಬ್ರ. ಡಾಟಟ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರ ದಿವ್ಯಸಾನಿಧ್ಯದಲ್ಲಿ ಕರೆಯಲಾಗಿದೆ ಆದಕಾರಣ ಸಮಸ್ತ ಸದ್ಭಕ್ತರು ಈ ಸಭೆಯಲ್ಲಿ ಪಾಲ್ಗೊಂಡು ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕಾಗಿ ಕೋರಲಾಗಿದೆ ಎಂದು ಪ್ರಕಟಣೆ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಅರಿವು ಕಾರ್ಯಾಗಾರ:

## ರೈತರು ಆದಾಯ ದ್ವಿಗುಣದತ್ತ ಹೆಚ್ಚು ಗಮನ ಕೊಡಿ:ಬಿ.ಫೌಜಿಯಾ ತರನ್ನುಮ್



ಕಲಬುರಗಿ,ಜು.18– ರೈತ ಸಮುದಾಯವು ಕೃಷಿ ಉತ್ಪನ್ನಗಳ ಬೆಳೆಯುವುದರ ಜೊತೆ–ಗೆ ಅವುಗಳನ್ನು ಸಂಸ್ಕರಿಸಿ ಮಾರಾಟ ಮಾಡುವ ಮೂಲಕ ತಮ್ಮ ಅದಾಯ ದ್ವಿಗುಣದತ್ತ ಗಮನಹರಿಸಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು.

ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆ ಕಲಬುರಗಿ ಹಾಗೂ ಕಪೆಕ್ ಸಂಸ್ಥೆಯವರ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ 2025–26ನೇ ಸಾಲಿನ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣೆ ಉದ್ದಿಮೆಗಳ ನಿಯುವುಬದ್ಧಗೊಳಿಸುವಿಕೆ ಯೋಜನೆಯಡಿ ಪಾಲುದಾರರಿಗೆ ಆಯೋಜಿಸಿದ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಈ ಯೋಜನೆಯು ಅತಿ ಸಣ್ಣ ಆಹಾರ ಸಂಸ್ಕರಣೆ ಉದ್ದಿಮೆಗಳು, ರೈತ ಉತ್ಪಾದಕ ಸಂಸ್ಥೆಗಳು, ಸ್ವ–ಸಹಾಯ ಸಂಘಗಳ ಗುಂಪು ಹಾಗೂ ಸಹಕಾರಿ ಸಂಘಗಳಿಗೆ ಸಬ್ಸಿಡಿ ಸಹಿತ ಸಾಲ ಸೌಲಭ್ಯಗಳು ದೊರಕುವಲ್ಲಿ ಸಹಕಾರಿಯಾಗಿದ್ದು, ರೈತಾಪಿ ವರ್ಗ ಇದರ ಸದ್ಬಳಕೆ ಮಾಡಿಕೊಳ್ಳಬೇಕು. ವಿಶೇಷವಾಗಿ ಗ್ರಾಮೀಣ ಪ್ರದೇಶದ ಮಹಿಳೆಯರಿಗೆ ಈ ಯೋಜನೆಯು ತುಂಬಾ ಫಲಪ್ರಧವಾಗಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಅವರು ಯೋಜನೆಯಡಿ ಈಗಾಗಲೇ ಸ್ಥಾಪಿಸಿದ ಘಟಕಗಳ ಯಶೋಗಾಥೆಗಳನ್ನು ವಿವರಿಸಿದಲ್ಲದೆ ಯೋಜನೆಯ ಲಾಭ ಪಡೆಯಲು ಹತ್ತಿರದ ಕೃಷಿ ಇಲಾಖೆಯ ಕಛೇರಿಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯುವಂತೆ ಸಲಹೆ ನೀಡಿದರು.

ಬೆಂಗಳೂರಿನ ಕೆಪೆಕ್ ಸಂಸ್ಥೆಯ ಜಂಟಿ ಕೃಷಿ ನಿರ್ದೇಶಕ ಶಿವಕುಮಾರ, ತೋಟಗಾರಿಕೆ ಉಪನಿರ್ದೇಶಕ ಸಂತೋಷ ಇನಾಮದಾರ್, ಪಶುಸಂಗೋಪನೆ ಇಲಾಖೆಯ ಉಪನಿರ್ದೇಶಕ ಡಾ. ಸಂಜಯ ರೆಡ್ಡಿ, ಲೀಡ್ ಬ್ಯಾಂಕ್ ಅಧಿಕಾರಿ ರವಿಗೌಡ ಹಾಗೂ ಜಿಲ್ಲೆಯ ಪ್ರಮುಖ ನೋಡಲ್ ಬ್ಯಾಂಕ್‌ಗಳ ಅಧಿಕಾರಿಗಳು, ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು, ರೈತ ಉತ್ಪಾದಕ ಸಂಸ್ಥೆಯ ಸದಸ್ಯರು, ಸ್ವಸಹಾಯ ಸಂಘಗಳ ಗುಂಪಿನ ಸದಸ್ಯರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ 63 ಹೊಸ ಫಲಾನುಭವಿಗಳ ನೊಂದಣಿ ಮಾಡಲಾಯಿತು.

## ಬೆಂಗಳೂರಿಗೆ ದತ್ತಪ್ಪ ಸಾಗನೂರ್ ವರ್ಗಾವಣೆಯಿಂದ ಕಲಬುರ್ಗಿಯವರ ಕೆಲಸ ಮತ್ತಷ್ಟು ಸುಗಮ: ಶಾಸಕ ಅಲ್ಲಮಪ್ರಭು ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಕಲಬುರ್ಗಿ,ಜು.18–ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ್ ಅವರು ಬೆಂಗಳೂರಿನ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟರ್ ಆಗಿ ವರ್ಗಾವಣೆಗೊಂಡಿದ್ದು, ಜಿಲ್ಲೆಯ ಜನರ ಕೆಲಸ ಕಾರ್ಯಗಳು ಇದರಿಂದ ಮತ್ತಷ್ಟು ಸುಗಮವಾಗಲಿವೆ ಎಂದು ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಹೇಳಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸುವರ್ಣ ಸಭಾ ಭವನದಲ್ಲಿ ಗುರುವಾರ ಜಿಲ್ಲಾ ಕಲಾವಿದರ ಬಳಗ ಹಮ್ಮಿಕೊಂಡಿದ್ದ ದತ್ತಪ್ಪ ಸಾಗನೂರ್ ಅವರ ಬೀಳ್ಕೊಡುಗೆ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ಜಿಲ್ಲೆಯವರೇ ಆದ, ಅದೂ ನನ್ನ ನೆಲೋಗಿ ಹತ್ತಿರದ ಅಫಜಲಪುರ ತಾಲ್ಲೂಕಿನ ಸಾಗನೂರಿನ ದತ್ತಪ್ಪ ಸಾಗನೂರ್ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಕಲಾವಿದರ ಹಿತವನ್ನು ರಕ್ಷಿಸಿದ್ದಾರೆ. ಈಗ ಅವರ ಸೇವೆಯು ಬೆಂಗಳೂರಿಗೆ ಅಗತ್ಯ ಇರುವುದನ್ನು ಮನಗಂಡು ಬೆಂಗಳೂರಿಗೆ ವರ್ಗಾವಣೆ ಮಾಡಿದ್ದಾರೆ. ಅವರು ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುವುದರಿಂದ ನಮ್ಮ ಕೆಲಸಗಳು ಎಲ್ಲವೂ ಕೈಗೂಡಲಿವೆ ಎಂದರು.

ನಮ್ಮ ಜಿಲ್ಲೆಯವರೇ ಆಗಿದ್ದರಿಂದ ದತ್ತಪ್ಪ ಸಾಗನೂರ್ ಅವರು ಉತ್ತಮ ಸೇವೆ ಸಲ್ಲಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಬೆಂಗಳೂರಿನಲ್ಲಿಯೂ ಸಹ ಇನ್ನೂ ಉತ್ತಮ ಸೇವೆ ಸಲ್ಲಿಸಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಗಳಾಗಿದ್ದ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥ ಡಾ. ಸದಾನಂದ ಪೆರ್ಲ ಅವರು ಮಾತನಾಡಿ, ಸರ್ಕಾರಿ ಉದ್ಯೋಗಿಯಾಗಿ ಸೇವಾ ತತ್ಪರತೆಯಿಂದ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದರೆ ಜನ ಮೆಚ್ಚುಗೆ ಪಡೆಯಲು ಸಾಧ್ಯ. ದತ್ತಪ್ಪ ಸಾಗನೂರು ಜಿಲ್ಲೆಯ ಸಾಂಸ್ಕೃತಿಕ ಲೋಕದ ಪ್ರತಿಭೆಗಳನ್ನು ಗುರುತಿಸಿ ಬೆಳಕಿಗೆ ತಂದ ಕೀರ್ತಿಗೆ ಪಾತ್ರರಾದವರು ಎಂದರು.

ಸರ್ಕಾರಿ ಉದ್ಯೋಗದಲ್ಲಿ ಕೇವಲ ವೇತನಕ್ಕಾಗಿ ದುಡಿಯದೇ ನಾಡಿನ ಸಾಂಸ್ಕೃತಿಕ ಬೆಳವಣಿಗೆಗೆ ಪ್ರಾಮಾಣಿಕವಾಗಿ ದುಡಿದಾಗ ಸಾರ್ವಜನಿಕರಿಂದ ಮುಕ್ತ ಪ್ರಶಂಸೆಗೆ ಪಾತ್ರರಾಗಿ ವರ್ಗಾವಣೆಯಲ್ಲೂ ಪ್ರೀತಿ ಮತ್ತು ಔದಾರ್ಯವನ್ನು ಪ್ರಕಟಿಸಿ ನೀಡುವ ಅಭಿನಂದನೆ ನಿಜಕ್ಕೂ ಅರ್ಥಪೂರ್ಣ ಮತ್ತು ಜನರ ವಿಶ್ವಾಸ ಗೆದ್ದ ಪ್ರತೀಕ ಎಂದು ಹೇಳಿದ ಅವರು, ದತ್ತಪ್ಪ ಸಾಗನೂರು ಉನ್ನತ ಸ್ಥಾನದೊಂದಿಗೆ ಮತ್ತೆ ಕಲ್ಯಾಣ ಕರ್ನಾಟಕದಲ್ಲಿ ಸೇವೆ ಸಲ್ಲಿಸುವಂತಾಗಲಿ ಎಂದು ಶುಭ ಹಾರೈಸಿದರು.

ಹಿರಿಯ ಪತ್ರಕರ್ತ ಬಸವರಾಜ್ ಅ. ಚಿನಿವಾರ್ ಅವರು ಮಾತನಾಡಿ, ಅಫಜಲಪುರ ತಾಲ್ಲೂಕಿನ ಸುಕ್ಷೇತ್ರ ದೇವಲ್ ಗಾಣಗಾಪುರದ ತ್ರಿವೇಣಿ ಸಂಗಮ ಪ್ರದೇಶದಿಂದ ಬಂದಿರುವ ದತ್ತಪ್ಪ ಸಾಗನೂರ್ ಅವರು ಸ್ಥಳೀಯರೇ ಆಗಿರುವುದರಿಂದ ಕಲಾವಿದರಿಗೆ, ಅದರಲ್ಲೂ ಜಾನಪದ ಕಲಾವಿದರಿಗೆ ಹೆಚ್ಚು ಆದ್ಯತೆ ನೀಡಿದರು. ಈಗ ಅವರ ವರ್ಗಾವಣೆಯಿಂದ ಅವರ ಎಲ್ಲ



ಕಲಾವಿದರು ಸ್ವಲ್ಪ ಆತಂಕಕ್ಕೆ ಒಳಗಾಗಿದ್ದಾರೆ. ಆದಾಗ್ಯೂ, ಅವರು ಮುಂಬಡ್ತಿ ಪಡೆದು ಮತ್ತೆ ಮರಳಿ ಜಿಲ್ಲೆಗೆ ಬರುವವರೆಂಬ ವಿಶ್ವಾಸವನ್ನು ಸಹ ಹೊಂದಿದ್ದಾರೆ. ಅವರ ಆಶಯ ಈಡೇರಲಿ ಎಂದರು.

ಮಹಾನಗರ ಪಾಲಿಕೆಯಲ್ಲಿನ ಸದಸ್ಯರು ಕನ್ನಡವನ್ನು ಬಳಕೆ ಮಾಡುತ್ತಿಲ್ಲ. ಬದಲಾಗಿ ಉರ್ದು, ಹಿಂದಿ ಬಳಸುತ್ತಿದ್ದಾರೆ. ಕನ್ನಡ ಮಾತನಾಡುವ ಪಾಲಿಕೆಯ ಸದಸ್ಯರೂ ಸಹ ಹಿಂದಿಯಲ್ಲಿಯೇ ಮಾತನಾಡುತ್ತಿದ್ದಾರೆ. ಹೀಗಾಗಿ ಪಾಲಿಕೆಯ ಸದಸ್ಯರು ಕನ್ನಡ ಬಾರದೇ ಇದ್ದರೆ ಅವರಿಗೆ ಕಲಿಸುವಂತಹ ಕಾರ್ಯವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಡಬೇಕು ಎಂದು ಅವರು ಇದೇ ಸಂದರ್ಭದಲ್ಲಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಯಕುಮಾರ್ ಪಾಟೀಲ್ ತೇಗಲತಿಪ್ಪಿ ಅವರು ಮಾತನಾಡಿ, ಜಿಲ್ಲೆಯ ಸಾಹಿತ್ಯ ಮತ್ತು ಸಂಸ್ಕೃತಿಗೆ ದತ್ತಪ್ಪ ಸಾಗನೂರ್ ಅವರು ಶ್ಲಾಘನೀಯ ಸೇವೆಯನ್ನು ಸಲ್ಲಿಸಿದ್ದಾರೆ. ಕಲಾವಿದರ ಹಿತಚಿಂತಕರಾಗಿದ್ದಾರೆ. ಅವರ ವರ್ಗಾವಣೆ ಕೇವಲ ತಾತ್ಕಾಲಿಕ. ಶೀಘ್ರವೇ ಮತ್ತೆ ಜಿಲ್ಲೆಗೆ ಉಪ ನಿರ್ದೇಶಕರಾಗಿ ಬರಲಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿದ ದತ್ತಪ್ಪ ಸಾಗನೂರ್ ಅವರು ಮಾತನಾಡಿ, ನನಗೆ ಬೆಂಗಳೂರಿಗೆ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟರ್ ಆಗಿ ವರ್ಗಾವಣೆ ಆದೇಶ ಬಂದಿದೆ. ನನಗೆ ಅಧಿಕಾರ ವಹಿಸಿಕೊಳ್ಳಲು ನಿರಂತರ ದೂರವಾಣಿ ಕರೆಗಳು ಬರುತ್ತಿವೆ. ನಾನು ಹದಿನೈದು ದಿನಗಳ ಕಾಲ ರಜೆಯಲ್ಲಿದ್ದೆ. ಇನ್ನು ಮುಂದೆ ಅಧಿಕಾರ ತೆಗೆದುಕೊಳ್ಳುವೆ. ಜಿಲ್ಲೆಯ ಕಲಾವಿದರು, ಜನರು ನನಗೆ ತೋರಿಸಿದ ಪ್ರೀತಿ ಮತ್ತು ವಿಶ್ವಾಸ ಮರೆಯಲಾಗದು ಎಂದರು.

ನಾನು ಅತ್ಯಂತ ಬಡ ಕುಟುಂಬದಿಂದ ಬಂದವನಿದ್ದೇನೆ. ನಾನು ಕಲಿಯುವ ಸಂದರ್ಭದಲ್ಲಿಯೂ ಸಹ ನನ್ನೂರಿನಿಂದ ಬಸ್ ಸೌಲಭ್ಯ ಇರಲಿಲ್ಲ. 8 ಕಿ.ಮೀ. ನಡೆದುಕೊಂಡು ಹಸರಗುಂಡಗಿ ಗ್ರಾಮಕ್ಕೆ ಬರಬೇಕಾಗುತ್ತಿತ್ತು. ನಾವು ಕಲಬುರ್ಗಿಗೆ ಬಂದು ಮರಳಿ ಹೋದಾಗ ರಾತ್ರಿಯಾದಾಗ ಹಸರಗುಂಡಗಿಯಲ್ಲಿಯೇ ಉಳಿಯಬೇಕಿತ್ತು. ಇಲ್ಲವೇ ರಾತ್ರಿ ಕಾಲ್ನಡಿಗೆಯಲ್ಲಿಯೇ ತೆರಳಬೇಕಿತ್ತು. ಆದಾಗ್ಯೂ, ಅಂತಹ ಕಠಿಣ ಸಂದರ್ಭದಲ್ಲೂ ಸಹ ನಾನು ಕಲಿತು ನೌಕರಿಗೆ 10ರೂ.ಗಳ ಶುಲ್ಕ ಭರಿಸಿ ಅರ್ಜಿ ಹಾಕಿದಾಗ ನನಗೆ ನೇಮಕಾತಿ ಆದೇಶದ ಹಿನ್ನೆಲೆಯಲ್ಲಿ ಪಿಎಸ್‌ಐ ಅವರು ನಮ್ಮೂರಿಗೆ ಬಂದಾಗ ನನ್ನೂರಿನ ಜನರು ನನ್ನ ಕುರಿತು ಎಲ್ಲ ವಿವರಗಳನ್ನು ಹೇಳಿದಾಗ ನನ್ನ ಪರವಾಗಿ ವರದಿಯನ್ನು ಸಿದ್ಧಪಡಿಸಿದರು. ಈಗ ಇದೇ ಹುದ್ದೆಗೆ 30 ಲಕ್ಷ ರೂ.ಗಳನ್ನು ಖರ್ಚು ಮಾಡಿದರೂ ಸಹ ಸಿಗುವುದಿಲ್ಲ. ಇದು ನನಗೆ ಸಿಕ್ಕ ಅಪೂರ್ವ ಅವಕಾಶವಾಗಿದೆ ಎಂದರು.

ಅಧಿಕಾರ ಇದ್ದಾಗ ಪರೋಪಕಾರಿ ಸೇವೆ ಮಾಡಬೇಕು. ಉಪಕಾರ ಮಾಡಿದವರಿಗೆ ಖಂಡಿತ ಒಳ್ಳೆಯದು ಆಗುತ್ತದೆ. ನಾನು ಜಿಲ್ಲೆಯ 200 ಸಂಘ, ಸಂಸ್ಥೆಗಳಿಗೆ ಅನುದಾನ ಕೊಟ್ಟೆ. ಇಡೀ ರಾಜ್ಯದಲ್ಲಿ ಅತೀ ಹೆಚ್ಚು ಸಂಘ, ಸಂಸ್ಥೆಗಳಿಗೆ ಅನುದಾನ ಕೊಟ್ಟ ಎರಡನೇ ಜಿಲ್ಲೆ ಕಲಬುರ್ಗಿ ಆಗಿತ್ತು. ಎರಡು ಕೋಟಿ ರೂ.ಗಳ ಅನುದಾನ ನಾನು ಆಗ ನೀಡಿದೆ ಎಂದು ನೆನಪಿಸಿಕೊಂಡ ಅವರು, ಬಾಲ್ಯದ ಓದಿನಲ್ಲಿ ಚಿಕ್ಕಪ್ಪ ಓದುವ ಕುರಿತು ಕಾಳಜಿ ವಹಿಸಿದ್ದನ್ನೂ ಸಹ ಸ್ಮರಿಸಿಕೊಂಡರು.

ಇದೇ ಸಂದರ್ಭದಲ್ಲಿ ದತ್ತಪ್ಪ ಸಾಗನೂರ್ ಮತ್ತು ಲಲಿತಾ ಡಿ. ಸಾಗನೂರ್ ದಂಪತಿಗೆ ಶಾಲು ಹೊದಿಸಿ, ಹೂಮಾಲೆ ಹಾಕಿ, ಚಿನ್ನದುಂಗುರ ತೊಡಿಸಿ ಕಲಾವಿದರ ಬಳಗವು ಸನ್ಮಾನಿಸಿತು. ಮುಖ್ಯ ಅತಿಥಿಗಳಾಗಿ ವೇದಿಕೆಯ ಮೇಲೆ ಖ್ಯಾತ ಉದ್ಯಮಿ ಚಂದ್ರಶೇಖರ್ ಎ. ಮಡಿವಾಳ್, ಖ್ಯಾತ ಚಿತ್ರಕಲಾವಿದೆ ಮೀನಾಕ್ಷಿ ಅಂಬಯ್ಯ ಗುತ್ತೇದಾರ್ ಅವರು ಉಪಸ್ಥಿತರಿದ್ದರು. ಆರಂಭದಲ್ಲಿ ಶ್ರೀಧರ್ ಹೊಸಮನಿ ಅವರು ಪ್ರಾರ್ಥನಾಗೀತೆ ಹಾಡಿದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ್ ಬಡಿಗೇರ್ ಅವರು ಸ್ವಾಗತಿಸಿದರು. ಎಂ.ಎನ್. ಸುಗಂಧಿ ಅವರು ದತ್ತಪ್ಪ ಸಾಗನೂರ್ ಅವರ ಕುರಿತು ಸ್ವರಚಿತ ಕಾವ್ಯ ವಾಚಿಸಿದರು. ಬಂಡಯ್ಯ ಶಾಸ್ತ್ರಿಗಳು ಸುಂಟನೂರು ಅವರು ಕಾರ್ಯಕ್ರಮ ನಿರೂಪಿಸಿದರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕಲಾವಿದ ಬಾಬುರಾವ್ ಕೋಬಾಳ್, ದತ್ತರಾಜ್ ಕಲಶೆಟ್ಟಿ, ಬಸಯ್ಯ ಗುತ್ತೇದಾರ್, ಸೈದಪ್ಪ ಚೌಡಾಪೂರ್, ನಾಗಲಿಂಗಯ್ಯ ಸ್ಥಾವರಮಠ್, ಶಿವರುದ್ರ ಗೌಡಗಾಂವ್, ಶಿವಶಂಕರ ಬಿರಾದಾರ್, ಅಣ್ಣಾರಾವ್ ಮತ್ತಿಮೂಡ್, ಮಹೇಶಕುಮಾರ್ ಬಡಿಗೇರ, ರವೀಂದ್ರ ಕುಲಕರ್ಣಿ, ಬೋರಮ್ಮ ಹೂಗಾರ, ಇಸ್ಮಾಯಿಲ್ ಲದಾಫ್, ಶಿವಕುಮಾರ್ ಜಾಲಹಳ್ಳಿ, ಸಿದ್ದಾರ್ಥ ಚಿಮ್ಮಯಿದಲಾಯಿ, ವಿಜಯಲಕ್ಷ್ಮೀ ಕೆಂಗನಾಳ್, ಚೆನ್ನಮ್ಮ ಯಾದವ್, ಕಲಾವತಿ, ಜಗದೀಶ್ ಹೂಗಾರ ದೇಸಾಯಿ ಕಲ್ಲೂರ್, ಜ್ಯೋತಿ ಹಂಚಾಟೆ, ಕಲ್ಪನಾ ಮಿನುಗುತಾರೆ,ಬಲ ಭೀಮ್ ನೆಲೋಗಿ, ಶಿವಕುಮಾರ್ ಬೇಡಜುರಗಿ, ರೇವಣಯ್ಯ ಸ್ವಾಮಿ ಸುಂಟನೂರ್, ಮೌನೇಶ್ ಪಂಚಾಳ್, ಶ್ರೀಮತಿ ನೀಲಮ್ಮ ಮಹಾಗಾಂವ,ಆಶಾ ರಾಠೋಡ್, ಶಾಂತ ಲಿಂಗಯ್ಯ ಮಠಪತಿ, ಸೂರ್ಯಕಾಂತ್ ಬಿದ ನೂರ್, ಸಿದ್ದಾರೂಢ ಅವರಳ್ಳಿ, ಮಹಾಂತೇಶ್ ಹರವಾಳ್, ಸೂರ್ಯಕಾಂತ್ ಪೂಜಾರಿ, ಶಿವಶರಣ ಬಡದಾಳ್, ದಾವಪ್ಪ ಇಟಗಿ, ಗುರುಮೂರ್ತಿ ಅಂಕಲಗಿ, ಕಾಳಮ್ಮ ಗುರುತಾಯಿ, ಲಲಿತಾ ಪವಾರ, ಭೀಮಾಶಂಕರ್ ಹೇರೂರ್, ಸಂತೋಷ ಕೋಡ್ಲಿ, ಬುಗ್ಗಪ್ಪ ಮಾಸ್ಟರ್ ಬಿಬ್ಬಳ್ಳಿ, ರಾಚಯ್ಯಸ್ವಾಮಿ ರಟಕಲ್, ಚಂದ್ರಕಾಂತ್ ಗುಳಗಿ, ಅಂಬಾರಾವ್ ಕೋಣೆ ಚೇತನ್ ಕೋಬಾಳ್,ಅವರೂ ಸೇರಿದಂತೆ ಅನೇಕ ಕಲಾವಿದರು, ಸಾಹಿತಿಗಳು, ಕವಿಗಳು ಮುಂತಾದವರು ಪಾಲ್ಗೊಂಡಿದ್ದರು.

# ಪತ್ರಕರ್ತ ಅಪ್ಪಾರಾವ್ ಸೌದಿಗೆ

## ಬೊಮ್ಮನಳ್ಳಿ ಪ್ರಶಸ್ತಿ: ಕೆಯುಡಬ್ಲ್ಯುಜೆ ಹರ್ಷ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 18 : ಕಲಬುರಗಿ ಜಿಲ್ಲೆಯ ಸೇಡಂನ ಬೊಮ್ಮನಳ್ಳಿ ಪ್ರತಿಷ್ಠಾನದಿಂದ ಪತ್ರಕರ್ತ ವೀರಭದ್ರಮಾಮನಿ ಸ್ಮರಣಾರ್ಥ ಕೊಡಮಾಡುವ 16ನೇ ವರ್ಷದ *"ಕಲ್ಯಾಣ ಕರ್ನಾಟಕ ಪತ್ರಕರ್ತ"* ಪ್ರಶಸ್ತಿಗೆ ಭಾಜನರಾಗಿರುವ *ಕನ್ನಡಪ್ರಭ ಕಲಬುರಗಿ ಆವೃತ್ತಿ ಮುಖ್ಯಸ್ಥರು ಹಾಗೂ ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯರಾದ ಅಪ್ಪಾರಾವ್ ಸೌದಿ* ಅವರನ್ನು ಆಯ್ಕೆ ಮಾಡಲಾಗಿದೆ.



ಈ ವರ್ಷ ಫೆಬ್ರವರಿಯಲ್ಲಿ ಕಲ್ಪತರು ನಾಡು ತುಮಕುರಿನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ರಾಜ್ಯ ಘಟಕ ಹಾಗೂ ತುಮಕೂರು ಜಿಲ್ಲಾ ಘಟಕಗಳ ಸಯೋಗದಲ್ಲಿ ನಡೆದ ಪತ್ರಕರ್ತರ 39ನೇ ರಾಜ್ಯ ಮಟ್ಟದ ಸಮ್ಮೇಳನದಲ್ಲಿ ಸೌದಿ ಅವರಿಗೆ ಖಾದ್ರಿ ಶಾಮಣ್ಣ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಿರುವುದು ಗಮನಿಸಬೇಕಾದ ಸಂಗತಿ.

ಇದೇ ಜುಲೈ 23ರಂದು ಬೆಳಿಗ್ಗೆ 10.45ಕ್ಕೆ ಸೇಡಂ ನಗರದ ಶ್ರೀ ಕೊತ್ತಲ ಬಸವೇಶ್ವರ ದೇವಾಲಯದ ಸಭಾಂಗಣದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ಸೌದಿ ಅವರನ್ನು ಈ ಪ್ರಶಸ್ತಿಗೆ ಗುರುತಿಸಿದಕ್ಕೆ ಬೊಮ್ಮನಳ್ಳಿ ಪ್ರತಿಷ್ಟಾನದ ಪದಾಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಲಾಗುತ್ತದೆ. ಹಾಗೆ ಇದೇ ವರ್ಷ ಎರಡೆರಡು ಪ್ರಶಸ್ತಿಗಳು ತನ್ನ ಮುಡಿಗೇರಿಸಿಕೊಂಡಿರುವ ಅಪ್ಪಾರಾವ ಸೌದಿ ಅವರಿಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೀದರ್ ಜಿಲ್ಲಾ ಘಟಕ ಅಭಿನಂದನೆ ಸಲ್ಲಿಸಿದೆ.

# ಉದ್ಯಮಶೀಲತಾಭಿವೃದ್ಧಿ ಜಾಗೃತಿ ಶಿಬಿರ: ಹೆಸರು ನೋಂದಾಯಿಸಿಕೊಳ್ಳಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.18:ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಇವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಬೀದರ ಮುಖಾಂತರ ಸ್ವಯಂ ಉದ್ಯೋಗ ಪ್ರಾರಂಭಿಸಲು ಆಸಕ್ತಿಯುಳ್ಳ ಪುರುಷ ಹಾಗು ಮಹಿಳೆಯರಿಗೆ ಒಂದು ದಿನದ ಉದ್ಯಮಶೀಲತಾಭಿವೃದ್ಧಿ ಜಾಗೃತಿ ಶಿಬಿರವನ್ನು ಜುಲೈ.22 ರಂದು ಹಮ್ಮಿಕೊಳ್ಳಲಾಗಿದೆ ಎಂದು ಬೀದರ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಕ್ತಸಮೂಹದ ಪ್ರೀತಿಯೇ ಮಠ ಎತ್ತರಕ್ಕೆ ಬೆಳೆಯಲು ಕಾರಣ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.18: ನಾಡೋಜ ಡಾ. ಬಸವಲಿಂಗಪಟ್ಟದ್ದೇವರ 75ನೇ ವರ್ಷದ ಅಮೃತಮಹೋತ್ಸವವು ಬಸವಯುಗದ ಅಮೃತ ಮಹೋತ್ಸವವಾಗಲಿದೆ ಎಂದು ಹಿರೇಮಠದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಹೇಳಿದರು.ಪಟ್ಟಣದ ಹಿರೇಮಠ ಸಂಸ್ಥಾನದ ಆವರಣದಲ್ಲಿ ಶುಕ್ರವಾರ ನಡೆದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಅಮೃತ್ ಮಹೋತ್ಸವ ಪೂರ್ವಭಾವಿ ಸಭೆಯ ನೇತೃತ್ವ ವಹಿಸಿ ಅವರು ಮಾತನಾಡಿದರು. ಭಕ್ತ ಸಮೂಹದ ಪ್ರೀತಿಯೇ ಮಠವು ಇಷ್ಟು ಎತ್ತರಕ್ಕೆ ಬೆಳೆಯಲು ಕಾರಣವಾಗಿದೆ.ಮಠದ ವ್ಯವಸ್ಥೆ ಕಷ್ಟದಲ್ಲಿರುವಾಗ ಭಕ್ತರೆಲ್ಲರೂ ಸೇರಿ 1924ರಲ್ಲಿ ಹಿರಿಯ ಸ್ವಾಮೀಜಿ, ಶತಾಯುಸ್ಸಿ ಡಾ.ಚನ್ನಬಸವ ಪಟ್ಟದ್ದೇವರಿಗೆ ಹಾನಗಲ್ಲ ಕುಮಾರೇಶ್ವರ ಶಿವಯೋಗ ಮಂದಿರದಲ್ಲಿ ತರಬೇತಿ ನೀಡಿ ಈ ಮಠಕ್ಕೆ ಪೀಠಾಧಿಪತಿಗಳನ್ನಾಗಿ ಮಾಡಿದ್ದರು. ನಂತರ 1985 ರಲ್ಲಿ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಮಠದ ಪೀಠಾಧ್ಯಕ್ಷವನ್ನು ವಹಿಸಿಕೊಂಡು ಹಗಲಿರಳೆನ್ನದೇ ಎಲ್ಲರನ್ನೂ ಪ್ರೀತಿಸುತ್ತಾ ಮಠದ ಏಳ್ಗೆಯೊಂದಿಗೆ ಕನ್ನಡ ಮತ್ತು ಬಸವ ತತ್ವವನ್ನು ಜಗತ್ತಿನಾದ್ಯಂತ ಪ್ರಸಾರ ಮಾಡುವಲ್ಲಿ ಶ್ರಮಿಸುತ್ತಿದ್ದಾರೆ. ಅವರ 75ನೇ ಹುಟ್ಟುಹಬ್ಬವನ್ನು (ಅಮೃತ ಮಹೋತ್ಸವ) ವಿಜ್ರಂಭಣೆಯಿಂದ ಮಾಡಲು ಭಕ್ತರು ನಿರ್ಧರಿಸಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದ ಸಮ್ಮುಖ ವಹಿಸಿ ಮಾತನಾಡಿದ ಚಿರಂತೇಶ್ವರ ವಿರಕ್ತಮಠ ಬಸವಬೆಳಗಿಯ ಶ್ರೀ ಶರಣಬಸವ ಮಹಾಸ್ವಾಮಿಗಳು, ಈ ಭಾಗದಲ್ಲಿ ಕನ್ನಡಿಗರು ಇಷ್ಟೊಂದು ಸುಸಂಸ್ಕೃತವಾಗಿರಲು ಬಸವಾದಿ ಶರಣರೇ ಕಾರಣ. ವಿಶ್ವಕ್ಕೆ ಕನ್ನಡವನ್ನು ನೀಡಿದ ಕಲ್ಯಾಣನಾಡು, ನಿಜಾಮನ ಆಡಳಿತದಲ್ಲಿ, ತನ್ನ ಅಸ್ತಿತ್ವ ಕಳೆದುಕೊಳ್ಳುತ್ತಿರವ ಸಮಯದಲ್ಲಿ ಮತ್ತೊಮ್ಮೆ ಕನ್ನಡವನ್ನು ಬೆಳೆಸಿದ ಶ್ರೇಯ ಲಿಂಗೈಕ್ಯ ಡಾ. ಚನ್ನಬಸವ ಪಟ್ಟದ್ದೇವರಿಗೆ ಸಲ್ಲುತ್ತದೆ. ಅವರ ಸಂಜಾತರಾದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಜಗತ್ತಿನಾದ್ಯಂತ ಬಸವತತ್ವ ಪ್ರಚಾರ, ಪ್ರಸಾರ ಮಾಡುತ್ತ, ಬಸವ ತತ್ವ ಮಠಗಳ ಮಾತೆಯಾಗಿ ಮುನ್ನಡೆಯುತ್ತಿದ್ದಾರೆ.ಬಸವತತ್ವ ಸಾಧಕರ ತವರು ಮನೆ ಭಾಲ್ಕಿಯ ಹಿರೇಮಠವಾಗಿದೆ.ಬಸವಣ್ಣನವರಿಗೆ ಅಪ್ಪಿಕೊಂಡವರಿಗೆ ಜಗತ್ತೇ ಅಪ್ಪಿಕೊಳ್ಳುತ್ತದೆ ಎನ್ನುವುದಕ್ಕೆ ಭಾಲ್ಕಿ ಹಿರೇಮಠ ಸಾಕ್ಷಿಯಾಗಿದೆ ಎಂದು ಹೇಳಿದರು.ಮಹಾರಾಷ್ಟ್ರದ ಶಿವಾನಂದ ಹೈಬತಪೂರೆ ಮಾತನಾಡಿದರು.ನಾರಂಜಾ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಡಿ.ಕೆ.ಸಿದ್ರಾಮ ಮಾತನಾಡಿ, ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಇತಿಹಾಸ ಪುಟ ಸೇರುವಂತಾಗಬೇಕು ಎಂದು ಹೇಳಿದರು. ಮಾಜಿ ಶಾಸಕ ಪ್ರಕಾಶ ಖಂಡ್ರೆ ಮಾತನಾಡಿ, ಡಾ. ಚನ್ನಬಸವ ಪಟ್ಟದ್ದೇವರ ಸಂಕಲ್ಪದಂತೆ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ನಡೆಯುತ್ತಿದ್ದಾರೆ. ಅವರ ಅಮೃತ ಮಹೋತ್ಸವದಲ್ಲಿ ಯಾವುದೇ ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾತನಾಡಿ, ಬರುವ ಮೇ 2026 ರ ಒಳಗಾಗಿ 740 ಕೋಟಿ ರೂ. ಗಳ ಅನುಭವ ಮಂಟಪ ಲೋಕಾರ್ಪಣೆಗೊಳಿಸಲಾಗುವುದು. ಅನುಭವ ಮಂಟಪ ನಿರ್ಮಾಣಕ್ಕೆ ಅನುದಾನದ ಕೊರತೆ ಇಲ್ಲ. ಹಿರೇಮಠ ಸಂಸ್ಥಾನಕ್ಕೂ ನಮ್ಮ ಮನೆತನಕ್ಕೂ ಅವಿನಾನುಭಾವ ಸಂಬಂಧವಿದೆ ಎಂದು ಹೇಳಿದರು.ಸಾನಿಧ್ಯ ವಹಿಸಿ ಮಾತನಾಡಿದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು, ಓದುವುದಕ್ಕೆ ಮಾತ್ರ ಸೀಮಿತವಾದ ನಾನು ಇಲ್ಲಿಯವರೆಗೆ ಸುಮಾರು 40 ಕೃತಿಗಳನ್ನು ರಚಿಸಿದ್ದೇನೆ. ಇದಕ್ಕೆ ನಮ್ಮ ಕಿರಿಯ ಸ್ವಾಮೀಜಿ ಗುರುಬಸವ ಪಟ್ಟದ್ದೇವರ ಪ್ರೋತ್ಸಾಹವೇ ಕಾರಣ. ಈ ಭಾಗದಲ್ಲಿ ನಿರಂತರ ದಾಸೋಹ ನಡೆಸಬೇಕೆನ್ನುವುದು ನನ್ನ ಆಸೆ. ಹೀಗಾಗಿ ಸುಮಾರು 365 ಭಕ್ತರು ಒಂದೊಂದು ಲಕ್ಷ ರೂ. ದೇಣಿಗೆ ನೀಡಿದರೆ ವರ್ಷಪೂರ್ತಿ ಅವರ ಹೆಸರಿನಲ್ಲಿ ನಿರಂತರ ದಾಸೋಹ ನಡೆಸಲಾಗುವುದು. ಇದರಿಂದ ಸುದೈವಿ ಮಕ್ಕಳ ಅಮೃತ ಮಹೋತ್ಸವ ಮಾಡಿದಕ್ಕೂ ಸಾರ್ಥಕವಾಗುವುದು ಎಂದು ಹೇಳಿದರು. ಇದೇವೇಳೆ ಭಕ್ತರಾದ ಬಸವರಾಜ ಧನ್ನೂರ, ಪಾರ್ವತಿ ಸೋನಾರೆ, ಸುರೇಶ ಚನಶೆಟ್ಟಿ, ಶಕುಂತಲಾ ಬೆಲ್ದಾಳೆ, ಬಸವರಾಜ ಬುಳ್ಳಾ, ಡಾ. ದೇವಕಿ ನಾಗೂರೆಯವರು ತಮ್ಮ ಅಭಿಪ್ರಾಯ ವ್ಯಕ್ತ ಪಡಿಸಿದರು. ಅಲ್ಲದೇ ನೆರೆದ ನೂರಾರು ಭಕ್ತರು ತಮ್ಮ ತಮ್ಮ ಅಭಿಪ್ರಾಯವನ್ನು ಹಾಳೆಯ ಮೇಲೆ ಬರೆದು ಪೂಜ್ಯರಿಗೆ ನೀಡಿದರು. ಅಶೋಕ ಚಂದ್ರೆ, ಶಶಿಕಲಾ ಅಶೋಕ, ವಿಜಯಕುಮಾರ ರಾಜಭವ ಉಪಸ್ಥಿತರಿದ್ದರು.




# ಎಸ್ಸೆಸ್ಸೆಲ್ಸಿ ಪಿಯುಸಿ, ಫಲಿತಾಂಶ ಸುಧಾರಣೆಗಾಗಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓಗೆ ಟಾಸ್ಕ್

ರಾಯಚೂರು ಜು 18: ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಈ ಬಾರಿ ರಾಯಚೂರ ಜಿಲ್ಲೆಯು ಉತ್ತಮ ಸ್ಥಾನ ಕಾಯ್ದುಕೊಳ್ಳುವ ಜವಾಬ್ದಾರಿಯನ್ನು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಸಿಇಓ ಅವರು ತೆಗೆದುಕೊಂಡು ಕಾರ್ಯಪ್ರವೃತ್ತರಾಗಬೇಕು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಹೇಳಿದರು.

ಜುಲೈ 18ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ರಾಯಚೂರ ಜಿಲ್ಲೆಯು ಪ್ರತಿ ಬಾರಿ ಕೆಳಗಿನ ಸ್ಥಾನ ಪಡೆಯುವುದು ಆರೋಗ್ಯಕರ ಬೆಳವಣಿಗೆಯಲ್ಲ. ಕಳಪೆ ಫಲಿತಾಂಶ ಪಡೆಯುವುದು ಕಳಂಕದ ಸಂಗತಿಯಾಗಿದೆ. ಹೀಗಾಗಿ ವಿಶೇಷವಾಗಿ ಜಿಲ್ಲಾಧಿಕಾರಿಗಳು ಮತ್ತು ಜಿಪಂ ಸಿಇಓ ಅವರು ಇದರ ಜವಾಬ್ದಾರಿ ಪಡೆದುಕೊಂಡು ಫಲಿತಾಂಶ ಸುಧಾರಣೆಗಾಗಿ ಸರ್ಕಾರಿ ಶಾಲೆಗಳಲ್ಲಿ ಏನು ಮಾಡಬಹುದು ಎಂಬುದರ ಬಗ್ಗೆ ಯೋಚಿಸಿ ಸುವ್ಯವಸ್ಥಿತ ಕಾರ್ಯದ ಯೋಜನೆ ರೂಪಿಸಿ ಕಾರ್ಯಶೀಲರಾಗಬೇಕು ಎಂದು ಸಚಿವರು ತಿಳಿಸಿದರು.ಫಲಿತಾಂಶ ಸುಧಾರಣೆಗೆ ಸಂಬಂಧಿಸಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳನ್ನು ಪ್ರತಿ ಹಳ್ಳಿಗೆ ಒಬ್ಬರಂತೆ ಮತ್ತು ತಾಲೂಕುಮಟ್ಟದ ಅಧಿಕಾರಿಗಳನ್ನು ಪ್ರತಿ ಶಾಲೆಗೆ ಒಬ್ಬರಂತೆ ನೊಡಲ್ ಅಧಿಕಾರಿಗಳು ಎಂದು ನೇಮಿಸಿ ಅಧಿಕಾರಿಗಳಿಗೆ ಕಾರ್ಯ ಹಂಚಿಕೆ ಮಾಡಬೇಕು ಎಂದು ಸಚಿವರು ಸಲಹೆ ಮಾಡಿದರು.ಶಿಕ್ಷಣದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಮಹತ್ವದ ಹಂತಗಳಾಗಿವೆ. ಬಹಳಷ್ಟು ಮಕ್ಕಳಲ್ಲಿ ಪರೀಕ್ಷಾ ಭಯ ಇರುತ್ತದೆ. ಹಾಗಾಗಿ ಮೇಲಿಂದ ಮೇಲೆ ಕಿರು ಪರೀಕ್ಷೆ ಮತ್ತು ವಿಶೇಷ ತರಗತಿಗಳನ್ನು ನಡೆಸಿ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಬೇಕು. ಒಟ್ಟಾರೆ ಫಲಿತಾಂಶ ಸುಧಾರಣೆಗೆ ಶಾಲಾ ಶಿಕ್ಷಣ ಇಲಾಖೆ ಮತ್ತು ಪಿಯು ಶಿಕ್ಷಣ ಇಲಾಖೆಗಳು ಈಗಿಂದಲೇ ಸನ್ನದ್ದವಾಗಬೇಕು ಎಂದು ಸಚಿವರು ನಿರ್ದೇಶನ ನೀಡಿದರು.




ಅಧಿಕಾರಿಗಳಿಗೆ ಎಚ್ಚರಿಕೆ: ಶಾಲಾ ಕಾಲೇಜುಗಳಲ್ಲಿ ಫಲಿತಾಂಶ ಸುಧಾರಣೆಗೆ ನಿಮ್ಮಲ್ಲಿ ಪ್ಲಾನ್ ಇದೆಯಾ? ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಪ್ರಶ್ನಿಸಿದ ಸಚಿವರು, ಫಲಿತಾಂಶ ಕುಸಿಯಲು ಶಿಕ್ಷಕರ ಕೊರತೆ ಕಾರಣ ಎಂಬುದರಲ್ಲಿ ಹುರುಳಿಲ್ಲ. ನಮ್ಮಲ್ಲಿ ಶಿಕ್ಷಕರ ಕೊರತೆ ಇಲ್ಲ. ಶಾಲಾ ಕಾಲೇಜುಗಳಿಗೆ ನಿಯಮಿತ ಭೇಟಿ ನೀಡಿ, ಶಿಕ್ಷಕರ ಮತ್ತು ಮಕ್ಕಳ ಹಾಜರಾತಿ ಮತ್ತು ಕಲಿಕೆಯ ಗುಣಮಟ್ಟ ಪರಿಶೀಲಿಸದೇ ಮಾನಿಟರಿಂಗ್ ಮಾಡುವಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಿಂದೆ ಬಿದ್ದಿರುವುದೇ ಫಲಿತಾಂಶ ಕುಸಿಯಲು ಕಾರಣವಾಗಿದೆ. ಇದು ಸರಿಯಲ್ಲ ಎಂದು ಸಚಿವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಸಿಇಓ ಅಧ್ಯಕ್ಷತೆಯಲ್ಲಿ ಕಮೀಟಿ ರಚಿಸಿ: ನಮ್ಮ ಜಿಲ್ಲೆಯ ಮಕ್ಕಳು ಪ್ರತಿಭಾನ್ವಿತರಿದ್ದಾರೆ. ಆದರೆ ಕೆಲವು ಶಿಕ್ಷಕರು ಮತ್ತು ಉಪನ್ಯಾಸಕರ ನಿಷ್ಕಾಳಜಿಯಿಂದಾಗಿ ಫಲಿತಾಂಶ ಕುಸಿಯುತ್ತಿದೆ. ಈ ಬಗ್ಗೆ ಸಮಗ್ರ ಚಿಂತನ ಮಂಥನ ನಡೆಸಿ ಕಾರ್ಯಯೋಜನೆ ರೂಪಿಸಲು ಜಿಲ್ಲಾ ಪಂಚಾಯತ್ ಸಿಇಓ ಅವರ ಅಧ್ಯಕ್ಷತೆಯಲ್ಲಿ ಒಂದು ಜಿಲ್ಲಾಮಟ್ಟದ ಕಮಿಟಿಯನ್ನು ರಚಿಸಬೇಕು ಎಂದು ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಸಲಹೆ ಮಾಡಿದರು.

ಪ್ರತಿ ವರ್ಷ ಹತ್ತು ಸಾವಿರ ಸಸಿ ನೆಡಿಸಿ: ಉತ್ತಮವಾದ ಪರಿಸರ ಸಿಗುವ ನಿಟ್ಟಿನಲ್ಲಿ ರಾಯಚೂರ ಸಿಟಿಯಲ್ಲಿ ಪ್ರತಿ ವರ್ಷ ಹತ್ತು ಸಾವಿರ ಸಸಿ ನೆಟ್ಟು ಪೋಷಣೆ ಮಾಡಬೇಕು. ಎಲ್ಲ ತಾಲೂಕುಗಳಲ್ಲಿ ಸಹ ಗರಿಷ್ಟ ಮಟ್ಟದಲ್ಲಿ ಸಸಿ ನೆಡಲು ಕ್ರಮವಹಿಸಬೇಕು ಎಂದು ಸಚಿವರು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತಾಲೂಕು ಆಸ್ಪತ್ರೆ ಬೇಕು: ರಾಯಚೂರ ಗ್ರಾಮೀಣ ಕ್ಷೇತ್ರದ ಜನರಿಗೆ ಅನುಕೂಲವಾಗುವ ಹಾಗೆ ತಾಲೂಕು ಆಸ್ಪತ್ರೆ ಮಂಜೂರಾತಿಗೆ ಪ್ರಸ್ತಾವಣೆ ಕಳುಹಿಸುವಂತೆ ಕರ್ನಾಟಕ ಪರಿಶಿಷ್ಟಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು.

ಶಾಲೆಗಳಿಗೆ ಶೌಚಾಲಯವಿಲ್ಲ: ಸಿಂಧನೂರಿನ ಬಹುತೇಕ ಶಾಲೆಗಳಿಗೆ ಶೌಚಾಲಯಗಳಿಲ್ಲ. ಬಹುತೇಕ ಶಾಲೆಗಳಲ್ಲಿ ಕಂಪ್ಯೂಟರ್ ತುಕ್ಕು ಹಿಡಿಯುತ್ತಿದ್ದು, ಮಕ್ಕಳಿಗೆ ಕಂಪ್ಯೂಟರ್ ಶಿಕ್ಷಣ ಕಲಿಸುವವರು ಇಲ್ಲದಂತಾಗಿದೆ ಎಂದು ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರು ಹೇಳಿದರು.

ಲಿಂಗಸೂರಿಗೆ ಕ್ರಿಟಿಕಲ್ ಕೇರ್ ಆಸ್ಪತ್ರೆ ಕೊಡಿ: ಲಿಂಗಸೂರ ತಾಲೂಕಿನ ಜನತೆಗೆ ಅನ್ಯಾಯವಾಗದ ಹಾಗೆ 50 ಬೆಡ್ ನ ಕ್ರಿಟಿಕಲ್ ಕೇರ್ ಆಸ್ಪತ್ರೆಯನ್ನು ಲಿಂಗಸೂರಗೆ ಕೊಡಲು ಪರಿಶೀಲಿಸಬೇಕು ಎಂದು ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ ಅವರು ತಿಳಿಸಿದರು.ಸಭೆಯಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರುವಿಹಾಳ, ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ಗಜಾನನ ಬಾಳೆ, ಕೆಡಿಪಿ ನಾಮ ನಿರ್ದೇಶಿತ ಸದಸ್ಯರಾದ ಶಫಿವುಲ್ಲಾಖಾನ್ ಮೆಹಬೂಬ, ತಿಮ್ಮಪ್ಪಮಲ್ಲಯ್ಯ, ರುದ್ರಾಗೌಡ ಮಹಾಂತಗೌಡ, ಸೋಮಶೇಖರ ಪಾಟೀಲ, ಮೀನಾಕ್ಷಿ ರಾಮಸ್ವಾಮಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶರಣಬಸವರಾಜ, ಸಿಪಿಓ ಡಾ.ಟಿ.ರೋಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

# ರಸಗೊಬ್ಬರವನ್ನು ರೈತರಿಗೆ ಸಮರ್ಪಕವಾಗಿ ವಿತರಿಸಲು ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ

ರಾಯಚೂರು ಜು 18 : ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜುಲೈ 18ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ ಸಭೆಯಲ್ಲಿ ರಸಗೊಬ್ಬರ ವಿತರಣೆ ವಿಷಯವು ಚರ್ಚೆಗೆ ಬಂದಿತು. ರಾಯಚೂರ ಜಿಲ್ಲೆಯಲ್ಲಿ ಕಾಪು ದಾಸ್ತಾನು 6027 ಮೆಟ್ರಿಕ್ ಟನ್ ಪೈಕಿ 2527.48 ಮೆಟ್ರಿಕ್ ಟನ್ ಲಭ್ಯವಿದ್ದು, ರಿಟೇಲ್ ಮಾರಾಟಗಾರಲ್ಲಿ 57,763 ಮೆ ಟನ್ ರಸಗೊಬ್ಬರ ಲಭ್ಯವಿರುತ್ತದೆ. ಜಿಲ್ಗೆಗೆ 1,50,000 ಮೆಟ್ರಿಕ್ ಟನ್ ಬೇಡಿಕೆ ಪೈಕಿ ಇದುವರೆಗೆ 1.45,000 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜು ಆಗಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಪ್ರಕಾಶ್ ಚವ್ಹಾಣ್ ಅವರು ಸಭೆಗೆ ಮಾಹಿತಿ ನೀಡಿದರು.

ಶಾಸಕರಿಂದ ಅಸಮಾಧಾನ: ರೈತರಿಗೆ ಗೊಬ್ಬರು ಸರಿಯಾಗಿ ತಲುಪುತ್ತಿಲ್ಲ. ಯಾರಿಗೆ ಕೊಡುತ್ತಿದ್ದಾರೆ ಎಂಬುದು ತಿಳಿಯುತ್ತಿಲ್ಲ ಎಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರುವಿಹಾಳ ಅವರು ಅಸಮಾಧಾನ ವ್ಯಕ್ತಪಡಿಸಿದರು. ಶಾಸಕರ ಅಸಮಾಧಾನಕ್ಕೆ ಧನಿಗೂಡಿಸಿದ ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ ಹಾಗೂ ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರು ಸಕಾಲಕ್ಕೆ ಗೊಬ್ಬರ ಸಿಗದೇ ರೈತರು ಪರದಾಡುತ್ತಿದ್ದಾರೆ ಎಂದರು. ಜಿಲ್ಲೆಯಲ್ಲಿ ರಸಗೊಬ್ಬರ ಪೂರೈಕೆಗೆ ಸರಿಯಾದ ವ್ಯವಸ್ಥೆಯಾಗಬೇಕು ಎಂದು ಕೆಡಿಪಿ ನಾಮ ನಿರ್ದೇಶಿತ ಸದಸ್ಯರಾದ ರುದ್ರಾಗೌಡ ಮಹಾಂತಗೌಡ ಹಾಗೂ ಸೋಮಶೇಖರ ಪಾಟೀಲ ಅವರು ಸಲಹೆ ಮಾಡಿದರು.




ಅಧಿಕಾರಿಗಳಿಗೆ ಸೂಚನೆ: ಶಾಸಕರ ಅಭಿಪ್ರಾಯಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸಹಕಾರಿ ಸಂಘಗಳು ಮತ್ತು ಖಾಸಗಿ ಮಳಿಗೆಗಳಲ್ಲಿ ಗೊಬ್ಬರ ದಾಸ್ತಾನು ಇರುವ ಬಗ್ಗೆ ಪ್ರತಿದಿನ ಫಲಕದ ಮೂಲಕ ಮಾಹಿತಿ ನೀಡಬೇಕು. ಸರಿಯಾಗಿ ಮಾಹಿತಿ ನೀಡದ ಖಾಸಗಿ ಮಾರಾಟಗಾರರನ್ನು ಬ್ಲಾಕ್ ಲೀಸ್ಟಗೆ ಸೇರ್ಪಡೆ ಮಾಡಬೇಕು ಎಂದು ಸಚಿವರು, ಕೃಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು.ಪ್ರಸಕ್ತ ಸಾಲಿನಲ್ಲಿ ಸಹ ರೈತರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಗೊಬ್ಬರ ಪೂರೈಕೆ ಆಗಬೇಕು ಎಂದು ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾಗಿದೆ. ಕೃಷಿ ಅಧಿಕಾರಿಗಳು ಜಾಗೃತರಾಗಿ ಕೆಲಸ ಮಾಡಬೇಕು. ರಸಗೊಬ್ಬರದ ಕೊರತೆ ಇರುವ ಬಗ್ಗೆ ತಿಳಿಸಿದಲ್ಲಿ ತಾವು ಕೃಷಿ ಇಲಾಖೆಯ ಕಾರ್ಯದರ್ಶಿಗಳೊಂದಿಗೆ ಮಾತನಾಡುವುದಾಗಿ ಸಚಿವರು ಹೇಳಿದರು.ಶೇ.32ರಷ್ಟು ಮಳೆ ಕೊರತೆ: ಜಿಲ್ಲೆಯಲ್ಲಿ ಮೇ ತಿಂಗಳಲ್ಲಿ ಶೇ.69ರಷ್ಟು ಹೆಚ್ಚಿನ ಮಳೆಯಾಗಿದೆ. ಜೂನ್ ಮತ್ತು ಜುಲೈನಲ್ಲಿ ಶೇ.32ರಷ್ಟು ಮಳೆ ಕೊರತೆಯಿಂದ ತೊಗರಿ ಮತ್ತು ಹತ್ತಿ ಬೆಳೆಗಳು ನಲುಗುತ್ತಿವೆ. ಜಿಲ್ಲೆಯಲ್ಲಿ 5.53 ಲಕ್ಷ ಹೆಕ್ಟೇರನಲ್ಲಿ ಬಿತ್ತನೆ ಗುರಿ ಪೈಕಿ ಇದುವರೆಗೆ ಶೇ.48 ಹೇಕ್ಟೇರ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಇದುವರೆಗೆ 37 ರೈತ ಸಂಪರ್ಕ ಕೇಂದ್ರಗಳಿಂದ 4856.23 ಕ್ವಿಂಟಲ್ ನಷ್ಟುವ ಭತ್ತ, ತೊಗರಿ, ಸಜ್ಜೆ, ಹೆಸರು, ಮೆಕ್ಕೆಜೋಳ ಹಾಗೂ ಸೂರ್ಯಕಾಂತಿ ಬಿತ್ತನೆ ಬೀಜ ದಾಸ್ತಾನು ಮಾಡಿ ಇದುವರೆಗೆ ರಿಯಾಯಿತಿ ದರದಲ್ಲಿ 3245.21 ಕ್ವಿಂಟಲ್ ಬೀಜ ವಿತರಣೆ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ತನಿಖೆಗೆ ಸೂಚನೆ: ಬೇರೆ ಬೇರೆ ತಾಲೂಕುಗಳಲ್ಲಿ ಜಲಧಾರೆ ಯೋಜನೆಯ ಕಾಮಗಾರಿಯು ಕಳಪೆಯಾಗಿದೆ ಎಂದು ಶಾಸಕರು ಸಭೆಯಲ್ಲಿ ಬೇಸರ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಶಾಸಕರು ದೂರಿದ ಈ ವಿಷಯವನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಜಲಧಾರೆ ಕಾಮಗಾರಿ ಕಳಪೆಯ ಬಗ್ಗೆ ಮಸ್ಕಿ ಸೇರಿದಂತೆ ವಿವಿಧೆಡೆ ಪರಿಶೀಲನೆ ನಡೆಸಿ ಕಾಮಗಾರಿ ಕಳಪೆ ಎಂದು ಕಂಡುಬಂದಲ್ಲಿ ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತು ಶಿಕ್ಷೆಗೆ ಗುರಿಪಡಿಸಲು ವಾರದೊಳಗೆ ಕ್ರಮವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಓ ಅವರಿಗೆ ತಿಳಿಸಿದರು.

ಪಿಡಿಓ ಕೊರತೆ ತಪ್ಪಿಸಿ: ರಾಯಚೂರ ಜಿಲ್ಲೆಯ ಬೇ–ರೆಡೆ ಹಾಕದೇ ದೇವದುರ್ಗ ತಾಲೂಕಿನಲ್ಲಿ ಮಾತ್ರ 40 ಕೀ.ಮಿದೊಳಗೆ ಎರಡು ಟೋಲ್ ಅಳವಡಿಸಿ ಜನರಿಂದ ಹಣ ಸುಲಿಗೆ ಮಾಡುತ್ತಿದ್ದಾರೆ. ಈ ಅನ್ಯಾಯ ಸರಿಪಡಿಸಲೇಬೇಕು. ಇದನ್ನು ಈ ಕೂಡಲೇ ತಾತ್ಕಾಲಿಕವಾಗಿ ರದ್ದುಪಡಿಸಿ ಎಂದು ಶಾಸಕರಾದ ಕರೆಮ್ಮ ಜಿ ನಾಯಕ ಅವರು ಸಭೆಯಲ್ಲಿ ಪಟ್ಟುಹಿಡಿದರು. 33 ಪಂಚಾಯಿತಿಗಳಿಗೆ ಕೇವಲ 6 ಜನ ಮಾತ್ರ ಪಿಡಿಓ ಇದ್ದಾರೆ. ಎಲ್ಲ ಪಂಚಾಯಿತಿಗಳಿಗೆ ಪಿಡಿಓ ನೇಮಕಾತಿಯಾಗಬೇಕು ಎಂದು ಶಾಸಕರು ಮನವಿ ಮಾಡಿದರು. ಈ ಬಗ್ಗೆ ಪ್ರತಿಕ್ರಿಯಿಸಿದ ಸಚಿವರು, ಲೋಕೋಪಯೋಗಿ ಸಚಿವರೊಂದಿಗೆ ತಾವು ಮಾತನಾಡಲಿದ್ದು, ಸದ್ಯಕ್ಕೆ ಟೋಲನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.ಸಭೆಯಲ್ಲಿ ಕರ್ನಾಟಕ ಪರಿಶಿಷ್ಟಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಶರಣಗೌಡ ಪಾಟೀಲ ಬಯ್ಯಾಪುರ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ಗಜಾನನ ಬಾಳೆ, ಕೆಡಿಪಿ ನಾಮ ನಿರ್ದೇಶಿತ ಸದಸ್ಯರಾದ ಶಫಿವುಲ್ಲಾಖಾನ್ ಮೆಹಬೂಬ, ತಿಮ್ಮಪ್ಪಮಲ್ಲಯ್ಯ, ಮೀನಾಕ್ಷಿ ರಾಮಸ್ವಾಮಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶರಣಬಸವರಾಜ, ಸಿಪಿಓ ಡಾ.ಟಿ.ರೋಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

# ಒಣ ಮೆಣಸಿನಕಾಯಿ ಮಾರಾಟಕ್ಕೆ ರೈತರಿಂದ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ಮಾರುಕಟ್ಟೆಮಧ್ಯ ಪ್ರವೇಶ ಯೋಜನೆಯ ಬೆಲೆ ವ್ಯತ್ಯಾಸಪಾವತಿ ಯೋಜನೆಯಡಿ ಒಣ ಮೆಣಸಿನಕಾಯಿ ಮಾರಾಟ ಮಾಡಲು ಜಿಲ್ಲೆಯ ರೈತರಿಂದ ನೋಂದಣಿಗೆ ಆಹ್ವಾನಿಸಲಾಗಿದೆ ಎಂದು ಕೃಷಿ ಮಾರಾಟ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

2024–25 ನೇ ಸಾಲಿನಲ್ಲಿ ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯ ಬೆಲೆ ವ್ಯತ್ಯಾಸ ಪಾವತಿ ಯೋಜನೆಯಡಿ ಒಣ ಮೆಣಸಿನಕಾಯಿ ಮಾರುಕಟ್ಟೆ ಮಧ್ಯಪ್ರವೇಶದರರೂ.10,589.20 (ಪ್ರತಿ ಕ್ವಿಂಟಾಲ್) ನಿಗದಿಪಡಿಸಿದೆ. ಬಳ್ಳಾರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆಡಳಿತ ಕಾರ್ಯಾಲಯವು ನೋಂದಣಿ ಸ್ಥಳವಾಗಿದೆ.

ರೈತರು ಒಣ ಮೆಣಸಿನಕಾಯಿ ಉತ್ಪನ್ನವನ್ನು ಕಡ್ಡಾಯವಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಇ–ಟೆಂಡರ್ ಮೂಲಕ ಮಾರಾಟ ಮಾಡಿದಾಗ ಮಾತ್ರ ಯೋಜನೆ ಅನ್ವಯವಾಗಲಿದೆ. ನೋಂದಣಿ ಮಾಡಿಕೊಳ್ಳಲು ಪ್ರಕಟಗೊಂಡ ದಿನದಿಂದ 15 ದಿನಗಳ ವರೆಗೆ ಕಾಲಾವಕಾಶ ಇರುತ್ತದೆ.

ಇ–ಆಡಳಿತ ಇಲಾಖೆಯ ಫ್ರೂಟ್ಸ್ ತಂತ್ರಾಂಶದಲ್ಲಿ ರೈತರು ನೀಡಿರುವ ವಿವರಗಳನ್ನು ಭೂಮಿ, ಯುಐ–ಡಿಎಐ ಮತ್ತು ಬೆಳೆ ಸಮೀಕ್ಷೆ ದತ್ತಾಂಶದೊಂದಿಗೆ ಹೊಂದಾಣಿಕೆ ಮಾಡಿ, ಅರ್ಹ ಫಲಾನುಭವಿಗಳ ಪಟ್ಟಿಯನ್ನು ಅಂತಿಮಗೊಳಿಸಿ ಯುಎಂಪಿ ತಂತ್ರಾಂಶದ ಇ–ಟೆಂಡರ್ ಮೂಲಕ ಮಾರಾಟ ಪ್ರಕ್ರಿಯೆ ಕೈಗೊಳ್ಳಲಾಗುವುದು. ಈ ಯೋಜನೆಯಡಿ ಪ್ರತಿ ಎಕರೆಗೆ 15 ಕ್ವಿಂಟಾಲ್ ಇಳುವರಿಯಂತೆ ಪ್ರತಿ ರೈತರಿಂದ ಗರಿಷ್ಠ 30 ಕ್ವಿಂಟಾಲ್ ಗೆ ಮಿತಿಗೊಳಿಸಿ ವ್ಯತ್ಯಾಸದ ಮೊತ್ತ ನೀಡಲಾಗುವುದು.

ಬಳ್ಳಾರಿ ಜಿಲ್ಲೆಯಲ್ಲಿ ಯಾವ ಮಾರುಕಟ್ಟೆಯಲ್ಲಿಯೂ ಒಣ ಮೆಣಸಿನಕಾಯಿ ಹುಟ್ಟುವಳಿಗೆ ಇ–ಟೆಂಡರ್ ಪದ್ಧತಿ ಜಾರಿಯಲ್ಲಿಲ್ಲದಿರುವುದರಿಂದ ಜಿಲ್ಲೆಯ ರೈತರು ಎನ್‌ಇಎಂಎಲ್ ಪೋರ್ಟಲ್ ನಲ್ಲಿ ನೋಂದಣಿ ಮಾಡಿಕೊಂಡು ರಾಜ್ಯದ ಯಾವುದೇ ಇ–ಟೆಂಡರ್ ಪದ್ಧತಿ ಜಾರಿಯಲ್ಲಿರುವ ವಿವಿಧ ಜಿಲ್ಲೆಯ ಮಾರುಕಟ್ಟೆಗಳಲ್ಲಿ ಒಣ ಮೆಣಸಿನಕಾಯಿ ಮಾರಾಟ ಮಾಡುವ ಸಂದರ್ಭದಲ್ಲಿ ಆನ್ ಲೈನ್ ನಲ್ಲಿ ನೋಂದಣಿ ಮಾಡಿದ ರಸೀದಿ ಪಡೆದಿದ್ದಲ್ಲಿ ಈ ಯೋಜನೆಯ ವ್ಯಾಪ್ತಿಗೆ ಒಳಪಡುತ್ತಾರೆ.

ಹಾಗಾಗಿ ರೈತರು ಫ್ರೂಟ್ಸ್ ಐಡಿ, ಆಧಾರ್ ಕಾರ್ಡ್, ಪಹಣಿಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿಕೊಂಡು ಒಣ ಮೆಣಸಿನಕಾಯಿ ಮಾರಾಟ ಮಾಡಿ ಸರ್ಕಾರದ ಯೋಜನೆಯನ್ನು ಸದುಪಯೋಗಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–250435 ಗೆ ಸಂಪರ್ಕಿಸಬಹುದು ಎಂದು ಕೃಷಿ ಮಾರಾಟ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಹಾವು ಕಡಿತ' ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ಸಲಹೆ

# ಹಾವು ಕಚ್ಚಿದ ವ್ಯಕ್ತಿಯನ್ನು ತಡಮಾಡದೇ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಿರಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ಹಾವು ಕಚ್ಚಿದ ಸಂದರ್ಭದಲ್ಲಿ ಹೆದರಬಾರದು. ಹಾವು ಕಚ್ಚಿದ ವ್ಯಕ್ತಿಯನ್ನು ಸಮಾಧಾನವಾಗಿರಿಸಿ ಹತ್ತಿರದ ಆಸ್ಪತ್ರೆಗೆ ಕರೆದುಕೊಂಡು ಬಂದು ಉಚಿತ ಚುಚ್ಚುಮದ್ದು ಕೊಡಿಸುವ ಮೂಲಕ ಜೀವ ಹಾನಿ ತಡೆಯಬಹುದು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ, ಮೋಕ ಸಮುದಾಯ ಆರೋಗ್ಯ ಕೇಂದ್ರ ಆಶ್ರಯದಲ್ಲಿ ಬಳ್ಳಾರಿ ತಾಲ್ಲೂಕಿನ ಶಿವಪುರ ಗ್ರಾಮದಲ್ಲಿ ಗುರುವಾರ ಏರ್ಪಡಿಸಿದ್ದ ಹಾವು ಕಡಿತ ಕುರಿತು ಜಾಗೃತಿ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ಹಾವು ಕಚ್ಚಿದಾಗ ಎಲ್ಲರೂ ಗಾಬರಿಯಾಗುವುದು ಸಾಮಾನ್ಯ. ಇದರಿಂದ ವ್ಯಕ್ತಿಯ ಜೀವಕ್ಕೆ ಅಪಾಯವಾಗುವ ಸಾಧ್ಯತೆ ಇರುತ್ತದೆ. ಅದರಲ್ಲೂ ವಿಷಕಾರಿ ಹಾವು ಕಡಿತದ ಸಂದರ್ಭದಲ್ಲಿ ವ್ಯಕ್ತಿಯನ್ನು ಯಾವುದೇ ವಾಹನ ಅಥವಾ 108 ಅಂಬುಲೆನ್ಸ್ ಮೂಲಕ ಹತ್ತಿರದ ಆಸ್ಪತ್ರೆಗೆ ಕರೆದುಕೊಂಡು ಹೋಗಲು ಮೊದಲ ಆದ್ಯತೆ ನೀಡಬೇಕು ಎಂದು ಹೇಳಿದರು.

ಆ ಸಂದರ್ಭದಲ್ಲಿ ರೋಗಿಯ ಹಾವು ಕಚ್ಚಿರುವ ಭಾಗವು ಹೃದಯದ ಕೆಳಗೆ ಬರುವ ಹಾಗೆ ಇರುವಂತೆ ನೋಡಿಕೊಳ್ಳಬೇಕು. ರಕ್ತಪರಿಚಲನೆಗೆ ತಡೆಯಾಗುವಂತಹ ಕೈ ಗಡಿಯಾರ, ಬಳೆ, ಉಂಗುರ ಮುಂತಾದವುಗಳನ್ನು ತೆಗೆಯಬೇಕು. ಕಚ್ಚಿದ ಭಾಗ ಅಲುಗಾಡದಂತಿರಬೇಕು. ಮುಖ್ಯವಾಗಿ ಆಸ್ಪತ್ರೆಗೆ ಹೋಗುವಾಗ ವ್ಯಕ್ತಿಯ ರೋಗ ಲಕ್ಷಣಗಳಾದ ತೇಲುಗಣ್ಣು, ಕಣ್ಣುಮುಚ್ಚುವುದು, ನಾಲಿಗೆ ತೊದಲುವಿಕೆ, ನುಂಗಲು ಕಷ್ಟವಾಗುವುದು, ಉಸಿರಾಡಲು ಕಷ್ಟವಾಗುವುದನ್ನು ಗಮನಿಸಬೇಕು. ಇಲ್ಲವಾದಲ್ಲಿ ನರಮಂಡಲಕ್ಕೆ ಹಾನಿ ಮಾಡುವ ವಿಷದ ಅಂಶವಾಗಿರುತ್ತದೆ ಎಂದರು.

ಗಾಯದ ಜಾಗದಲ್ಲಿ ತೀವ್ರ ಉರಿ, ನೋವು ಹರಡುವಿಕೆ ಅಥವಾ ಊದುವಿಕೆ ಗಾಯದ ಸುತ್ತ ಬಣ್ಣಹೀನವಾಗುವುದು, ಕೆಳಬೆನ್ನಿನಲ್ಲಿ ನೋವು ಮುಂತಾದ ಲಕ್ಷಣಗಳು ಸಹ ಅಂಗಾಂಗಕ್ಕೆ ಹಾನಿ ಮಾಡುವ ವಿಷದ ಅಂಶವಾಗಿರುತ್ತದೆ. ಕೂಡಲೇ ಈ ಲಕ್ಷಣಗಳನ್ನು ರೋಗಿಯ ಜೊತೆಗಿರುವ ವ್ಯಕ್ತಿಗಳು ವೈದ್ಯರಿಗೆ ತಿಳಿಸಿದರೆ ವ್ಯಕ್ತಿಯ ಜೀವ ಕಾಪಾಡಲು ಸಾಧ್ಯವಾಗುವ ಚಿಕಿತ್ಸೆ ಒದಗಿಸಲು ಸಹಾಯಕವಾಗಲಿದೆ ಎಂದರು.

ಮೋಕ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಭಾರತಿ ಅವರು ಮಾತನಾಡಿ, ಹಾವು ಕಚ್ಚಿದಾಗ ಕಚ್ಚಿದ ಜಾಗದ ಪಕ್ಕದಲ್ಲಿ ಬಟ್ಟೆ ಕಟ್ಟುವುದು, ಬ್ಲೇಡ್ ಅಥವಾ ಚಾಕುವಿನಿಂದ ಗಾಯ ಮಾಡುವುದು, ಗಾಯ ಸುಡುವುದು, ನಾಟಿ ಔಷಧಿ ನೀಡುವುದು ಮುಂತಾದವುಗಳನ್ನು ಮಾಡಬಾರದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಎನ್‌ಸಿಡಿ ಸಲಹೆಗಾರರಾದ ಡಾ.ಜಬೀನ್ ತಾಜ್, ಜಿಲ್ಲಾ ಸಾಂಕ್ರಾಮಿಕ ರೋಗ ತಜ್ಞರಾದ ಡಾ.ವಿಶಾಲಾಕ್ಷಿ, ತಾಲ್ಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಮ್ಮ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಡಾಟ ಮ್ಯಾನೇಜರ್ ಅಜಯ್, ಸಮುದಾಯ ಆರೋಗ್ಯಾಧಿಕಾರಿ ತ್ರಿಪುನ್ ಕುಮಾರ್, ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಿಗೌಡ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಯಚೂರಲ್ಲಿ ನಡೆಯುವ ಸೇನಾ ನೇಮಕಾತಿ ರ‍್ಯಾಲಿಗೆ ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿಗಳ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜುಲೈ 18–ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆಗಸ್ಟ್ 04 ರಿಂದ ಆಗಸ್ಟ್ 22ರವರೆಗೆ ನಡೆಯುವ ಸೇನಾ ನೇಮಕಾತಿ ರ‍್ಯಾಲಿಯು ಅಚ್ಚುಕಟ್ಟಾಗಿ ನಡೆಯುವ ನಿಟ್ಟಿನಲ್ಲಿ ಎಲ್ಲಾ ರೀತಿಯ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸೂಚನೆ ನೀಡಿದರು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜುಲೈ 16ರಂದು ಪೂರ್ವ ಭಾವಿ ಸಿದ್ಧತಾ ಸಭೆ ನಡೆಸಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೇನಾ ನೇಮಕಾತಿ ರ‍್ಯಾಲಿಯ ಬಗ್ಗೆ ಈ ಹಿಂದೆ ಜುಲೈ 4 ರಂದು ಸಭೆ ನಡೆಸಿ ಸೂಚನೆ ನೀಡಿದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಈ ರ‍್ಯಾಲಿಯಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಅಂದಾಜು 15,000 ಅಭ್ಯರ್ಥಿಗಳು ಭಾಗವಹಿಸಲಿದ್ದು, ಈ ರ‍್ಯಾಲಿಯ ಯಶಸ್ಸಿಗೆ ಅಧಿಕಾರಿಗಳು ಮತ್ತು ಸಿಬ್ಬಂದಿ ಶಿಸ್ತುಬದ್ಧವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ನೇಮಕಾತಿ ರ‍್ಯಾಲಿ ನಡೆಯುವ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಮೈದಾನದಲ್ಲಿ ಬ್ಯಾರಿಕೇಡ್ ವ್ಯವಸ್ಥೆ, ಕ್ರೀಡಾಂಗಣದಲ್ಲಿ ವಿದ್ಯುತ್ ದೀಪಗಳು ಮತ್ತು ಜನರೇಟರ್ ವ್ಯವಸ್ಥೆ ಮತ್ತು ಆಸನ, ಕುರ್ಚಿಗಳು, ಟೇಬಲ್‌ಗಳು, ಮೈಕ್ ಸೆಟ್, ಖಾಟ್ ಮತ್ತು ಹಾಸಿಗೆ ಹಾಗೂ ತ್ಯಾಜ್ಯದ ತೊಟ್ಟಿಗಳ ವ್ಯವಸ್ಥೆಯಾಗಬೇಕು. ರ‍್ಯಾಲಿಗೆ ಆಗಮಿಸುವ ಎಲ್ಲಾ ಅಭ್ಯರ್ಥಿಗಳಿಗೆ ಹಾಗೂ ಇತರರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸಬೇಕು. ಕ್ರೀಡಾಂಗಣದಲ್ಲಿ ಜನಸಂದಣಿ ತಡೆಯಬೇಕು. ಕ್ರೀಡಾಂಗಣದ ಹೊರಗಡೆ ಸಾರ್ವಜನಿಕ ರಸ್ತೆ ಸಂಚಾರಕ್ಕೆ ತೊಂದರೆಯಾಗದಂತೆ ಕ್ರಮವಹಿಸಬೇಕು. ಕ್ರೀಡಾಂಗಣದಲ್ಲಿ ಒಳಗೆ ಮತ್ತು ಮುಂಭಾಗದಲ್ಲಿ ಸಂಚಾರ ದಟ್ಟಣೆ ಆಗದಂತೆ ಕ್ರಮವಹಿಸಬೇಕು. ಮತ್ತು ಎಲ್ಲಾ ರೀತಿಯ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸೆ ಒದಗಿಸಬೇಕು. ರ‍್ಯಾಲಿ ನಡೆಯುವ ಸಂದರ್ಭದಲ್ಲಿ ಅಗ್ನಿಶಾಮಕ ವಾಹನ ಮತ್ತು ತುರ್ತು ಸೇವೆಗಳ ಒದಗಿಸಲು ಕ್ರಮ ವಹಿಸಬೇಕು.

ಸೇನಾ ನೇಮಕಾತಿ ರ‍್ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕುಡಿಯುವ ನೀರಿಗಾಗಿ ನಳಗಳ ವ್ಯವಸ್ಥೆ ಮಾಡಬೇಕು. ಸಿಬ್ಬಂದಿಗು ಸಹ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಮೊಬೈಲ್ ಶೌಚಾಲಯಗಳ ಬಳಕೆ ಮತ್ತು ಅವುಗಳಿಗೆ ಟ್ಯಾಂಕರ್‌ಗಳ ಮೂಲಕ ನೀರನ್ನು ಒದಗಿಸಲು ಕ್ರಮ ವಹಿಸಬೇಕು. ಪ್ರತಿದಿನ ಕ್ರೀಡಾಂಗಣವನ್ನು ಶುಚಿಗೊಳಿಸಬೇಕು. ವಸ್ತುಗಳ ವಿಲೆ ಮಾಡಲು ಹಾಗೂ ಅಗತ್ಯವಿದ್ದಲ್ಲಿ ಸ್ವಚ್ಛತಾ ಸಿಬ್ಬಂದಿ ನಿಯೋಜಿಸಬೇಕು.

ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲಿರುವ ಅಭ್ಯರ್ಥಿಗಳ ವಾಸ್ತವ್ಯಕ್ಕೆ ವಸತಿ ಹಾಗೂ ಊಟದ ವ್ಯವಸ್ಥೆ ಮಾಡಬೇಕು. ಅಭ್ಯರ್ಥಿಗಳು ತಂಗುವ ಸ್ಥಳದಿಂದ ಬಂದು ಹೋಗಲು ಅನುಕೂಲವಾಗುವಂತೆ ಕೆಎಸ್‌ಆರ್‌ಟಿಸಿಯಿಂದ ವಿಶೇಷ ಬಸ್ಸಿನ ವ್ಯವಸ್ಥೆ ಕಲ್ಪಿಸಬೇಕು. ರ‍್ಯಾಲಿಯ ಸಂದರ್ಭದಲ್ಲಿ ವೈದ್ಯರು ಮತ್ತು ಶುಶ್ರೂಷ ಸಹಾಯಕಿಯರ ಸಿಬ್ಬಂದಿಯನ್ನು ಅಗತ್ಯಕ್ಕನುಗುಣವಾಗಿ ನಿಯೋಜಿಸಬೇಕು. ಅವಶ್ಯಕ ಹಾಗೂ ಜೀವರಕ್ಷಕ ಔಷಧಿಗಳ ವ್ಯವಸ್ಥೆ ಒದಗಿಸಬೇಕು. ಬೆಳಗ್ಗೆಯಿಂದ ಸಂಜೆವರೆಗೆ ಆರೋಗ್ಯ ಸೇವೆ ಒದಗಿಸಬೇಕು. ಅಂಬುಲೈನ್ಸ್ ಸೌಲಭ್ಯದೊಂದಿಗೆ ವಾಹನ ಸಿದ್ಧವಾಗಿಟ್ಟುಕೊಳ್ಳಬೇಕು. ಆಹಾರ ಗುಣಮಟ್ಟ ಪರಿಶೀಲನೆ ಮಾಡಬೇಕು.

ಕ್ರೀಡಾಂಗಣದಲ್ಲಿ ನಡೆಯುವ ಸೇನಾ ನೇಮಕಾತಿ ರ‍್ಯಾಲಿ ಮುಗಿಯುವವರೆಗೆ ಯಾವುದೇ ರೀತಿ ವಿದ್ಯುತ್ ವ್ಯತ್ಯಯ ಆಗದ ರೀತಿಯಲ್ಲಿ ಸೂಕ್ತ ವ್ಯವಸ್ಥೆ ಮಾಡಬೇಕು. ಅಭ್ಯರ್ಥಿಗಳ ಅನುಕೂಲಕ್ಕಾಗಿ ರ‍್ಯಾಲಿ ನಡೆಯುವ ಮಾಹಿತಿಯನ್ನು ಪತ್ರಿಕೆಗಳು ಮತ್ತು ಸುದ್ದಿವಾಹಿನಿಗಳಲ್ಲಿ ವ್ಯಾಪಕ ರೀತಿಯಲ್ಲಿ ಪ್ರಚುರಪಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಮನವಿ: ರಾಯಚೂರ ಜಿಲ್ಲೆಯಲ್ಲಿ ಸೇನಾ ನೇಮಕಾತಿ ರ‍್ಯಾಲಿ ನಡೆಯುತ್ತಿರುವುದು ವಿಶೇಷ. ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಸೇನೆಗೆ ಸೇರಿದವರ ಸಂಖ್ಯೆ ರಾಯಚೂರ ಜಿಲ್ಲೆಯಲ್ಲಿ ಕಡಿಮೆ ಇದೆ. ಹೀಗಾಗಿ ಈ ಭಾಗದ ವಿದ್ಯಾರ್ಥಿ ಯುವಜನರಿಗೆ ಸೇನೆ ಸೇರುವ ಬಗ್ಗೆ ಸ್ಫೂರ್ತಿ ನೀಡಲೆಂದೇ ಈ ಸೇನಾ ನೇಮಕಾತಿ ರ‍್ಯಾಲಿಯನ್ನು ರಾಯಚೂರಲ್ಲಿ ಹಮ್ಮಿಕೊಳ್ಳಲಾಗಿದೆ. ಇದಕ್ಕಾಗಿ ಮಾಜಿ ಸೈನಿಕರ ಸಂಘದವರು ಮತ್ತು ನಗರದ ಎಲ್ಲ ಸಂಘ ಸಂಸ್ಥೆಗಳು ಈ ಸೇನಾ ನೇಮಕಾತಿ ರ‍್ಯಾಲಿಗೆ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಮನವಿ ಮಾಡಿದರು.

ಮಾಜಿ ಸೈನಿಕರ ಸಲಹೆ: ಸೇನಾ ನೇಮಕಾತಿ ರ‍್ಯಾಲಿಯು ನಮ್ಮ ರಾಯಚೂರ ಜಿಲ್ಲೆಯಲ್ಲಿ ನಡೆಯುತ್ತಿರುವುದು ಸಂತಸದ ಸಂಗತಿ. ಇದು ಇಡೀ ರಾಜ್ಯಕ್ಕೆ ಮಾದರಿಯಾಗುವ ಹಾಗೆ ಇಲ್ಲಿ ನಡೆಯಬೇಕು. ಬೇರೆ ಬೇರೆ ದೂರದ ಊರುಗಳಿಂದ ಬರುವ ಅಭ್ಯರ್ಥಿಗಳಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದ ಹಾಗೆ ಇಲ್ಲಿ ರ‍್ಯಾಲಿ ನಡೆಯುವಂತಾಗಬೇಕು ಎಂದು ರಾಯಚೂರಿನ ಮಾಜಿ ಸೈನಿಕರಾದ ಚೆನ್ನಾರೆಡ್ಡಿ, ಸಿದ್ದಯ್ಯ ಸ್ವಾಮಿ, ಅಮರಪ್ಪ ಶಿವಬಲ್ಲ, ದೇವರೆಡ್ಡಿ, ಮಲ್ಲಿಕಾರ್ಜುನ ಸ್ವಾಮಿ ಅವರು ಸಲಹೆ ಮಾಡಿದರು.

ಸಭೆಯಲ್ಲಿ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಸಹಾಯಕ ಆಯುಕ್ತರಾದ ಗಜಾನನ ಬಾಳೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಪದ್ಮಶ್ರೀ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸಲು ಜುಲೈ 31 ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 16 ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮಶ್ರೀ ಪ್ರಶಸ್ತಿಗೆ 2026ನೇ ಸಾಲಿನ ನಾಮ ನಿರ್ದೇಶನಗಳನ್ನು ಸಲ್ಲಿಸ ಬಯಸುವವರು ಜುಲೈ 31ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ನಾಮ ನಿರ್ದೇಶನ ಸಲ್ಲಿಸುವ ಪ್ರಕ್ರಿಯೆಯು ಈಗಾಗಲೇ ದಿನಾಂಕ 15–03–2025 ರಿಂದ ಪ್ರಾರಂಭವಾಗಿದ್ದು, ಪ್ರತಿಯೊಂದು ನಾಮ ನಿರ್ದೇಶನಗಳು ಮತ್ತು ಶಿಫಾರಸ್ಸುಗಳನ್ನು ರಾಷ್ಟ್ರೀಯ ಪುರಸ್ಕಾರ ಜಾಲತಾಣ್ಣುಣಣಠಿ:// ಚಿತಿಚಿಡಿಜ.ರಠತ.ಟಿ.ನಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ.

2026ರ ಪದ್ಮಶ್ರೀ ಪ್ರಶಸ್ತಿಗಳ ಕುರಿತು ಸಂಕ್ಷಿಪ್ತ ಮಾಹಿತಿ ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳು ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಸೇರಿವೆ. 1954ರಲ್ಲಿ ಸ್ಥಾಪಿಸಲಾದ ಈ ಪ್ರಶಸ್ತಿಗಳನ್ನು ಪ್ರತಿ ವರ್ಷ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಘೋಷಿಸಲಾಗುತ್ತದೆ.

ಈ ಪ್ರಶಸ್ತಿಯು ವಿಶಿಷ್ಟ ಕಾರ್ಯವನ್ನು ಗುರುತಿಸಲು ಪ್ರಯತ್ನಿಸುತ್ತದೆ. ಮತ್ತು ಕಲೆ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ಔಷಧ, ಸಾಮಾಜಿಕ ಕಾರ್ಯ, ವಿಜ್ಞಾನ ಮತ್ತು ಇಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರಿಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಮುಂತಾದ ಎಲ್ಲಾ ಕ್ಷೇತ್ರಗಳು/ವಿಭಾಗಗಳಲ್ಲಿ ವಿಶಿಷ್ಟ ಮತ್ತು ಅಸಾಧಾರಣ ಸಾಧನೆಗಳು ಅಥವಾ ಸೇವೆಗಾಗಿ ನೀಡಲಾಗುತ್ತದೆ. ಜನಾಂಗ, ಉದ್ಯೋಗ, ಸ್ಥಾನ ಅಥವಾ ಲಿಂಗದ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳು ಈ ಪ್ರಶಸ್ತಿಗಳಿಗೆ ಅರ್ಹರಿದ್ದು, 2026ನೇ ಸಾಲಿನ ಪದ್ಮಶ್ರೀ ಪ್ರಶಸ್ತಿಗೆ ನಾಮನಿರ್ದೇಶನ ಅಥವಾ ಶಿಫಾರಸ್ಸುಗಳನ್ನು ಸಲ್ಲಿಸುವವರು ಪ್ರಕಟಿಸಲಾಗಿರುವ ಅರ್ಜಿ ಪತ್ರ ನಮೂನೆಯಲ್ಲಿ ಭರ್ತಿ ಮಾಡಿ ಆನ್‌ಲೈನ್ ಮುಖಾಂತರ ಸಲ್ಲಿಸಲು ಜುಲೈ 31 ಕೊನೆಯ ದಿನಾಂಕವನ್ನು ನಿಗದಿಪಡಿಸಲಾಗಿದೆ. ನಂತರ ಯಾವುದೇ ಕಾರಣಕ್ಕೂ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ ಎಂದು ಸರ್ಕಾರದ ಪತ್ರದಲ್ಲಿ ತಿಳಿಸಲಾಗಿರುತ್ತದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 18–ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನದ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ (ಓಪೆಕ್) ಯಲ್ಲಿ ವಿವಿಧ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸ್ಪತ್ರೆಯಲ್ಲಿ ಅರ್ಹ 40 ಶುಶ್ರೂಷಕ ಅಧಿಕಾರಿಗಳು ಹುದ್ದೆಗೆ ಬಿಎಸ್‌ಸಿ ಇನ್ ನರ್ಸಿಗ್, 06 ಓಟಿ ತಂತ್ರಜ್ಞರ ಹುದ್ದೆಗೆ ಡಿಪ್ಲೋಮಾ ಇನ್ ಅಪರೇಶನ್ ಥಿಯೇಟರ್ ಐಂಡ್ ಅನಸ್ಥೇಷಿಯ ಟೆಕ್ನೋಲಜಿ, 01 ಗ್ಯಾಸ್ಟ್ರೋ ತಂತ್ರಜ್ಞರ ಹುದ್ದೆಗೆ ಡಿಪ್ಲೋಮಾ ಇನ್ ಎಂಡೊಸ್ಕೋಪಿ ಟೆಕ್ನೋಲಜಿ, 02 ಸಿ.ಟಿ.ತಂತ್ರಜ್ಞರ ಹುದ್ದೆ ಬಿಎಸ್‌ಸಿ

ರೇಡಿಯಾಲಜಿ/50 ಹಾಸಿಗೆಗಳ ಆಸ್ಪತ್ರೆಯಲ್ಲಿ 2 ವರ್ಷಗಳ ಅನುಭವದೊಂದಿಗೆ ಮಾನ್ಯತೆ ಪಡೆದ ಸಂಸ್ಥೆಯಲ್ಲಿ ಸಿಟಿ/ಎಂಆರ್‌ಐ ತಂತ್ರಜ್ಞಾನದಲ್ಲಿ ಡಿಪ್ಲೊಮಾ ಹೊಂದಿರಬೇಕು. 02 ಕ್ಷ–ಕಿರಣ ತಂತ್ರಜ್ಞರ ಹುದ್ದೆಗೆ

ವೈದ್ಯಕೀಯ ಎಕ್ಸ್–ರೇ ತಂತ್ರಜ್ಞಾನದಲ್ಲಿ ಡಿಪ್ಲೊಮಾ ಮತ್ತು 2 ವರ್ಷಗಳ ಅನುಭವ ಹೊಂದಿರಬೇಕು. 02 ಫಾರ್ಮಸಿಸ್ಟ್ ಹುದ್ದೆಗೆ ಡಿ.ಫಾರ್ಮಾ/ ಬಿ.ಫಾರ್ಮಾ ಹೊಂದಿರಬೇಕು. 01 ಸಿಸ್ಟಮ್ ಎಂಜಿನೀಯರ್ ಹುದ್ದೆಗೆ ಎಮ್‌ಸಿಎ/ಬಿಸಿಎಯಲ್ಲಿ 2 ವರ್ಷಗಳ ಅನುಭವ ಹೊಂದಿಬೇಕು. 01 ಬಯೋಮೆಡಿಕಲ್ ಎಂಜಿನಿಯರ್ ಹುದ್ದೆಗೆ ಭಾರತದ ಕಾನೂನಿನಿಂದ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ವೈದ್ಯಕೀಯ ಎಲೆಕ್ಟ್ರಾನಿಕ್ಸ್/ಬಯೋಮೆಡಿಕಲ್ ಎಂಜಿನಿಯರಿಂಗ್‌ನಲ್ಲಿ ಪದವಿ (ಬಿಇ) ಮತ್ತು 2 ವರ್ಷಗಳ ಅನುಭವ ಹೊಂದಿರಬೇಕು. 05 ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೆ ಪಿಯುಸಿ, ಕಿಯೋನಿಕ್ಸ್‌ನಲ್ಲಿ ಟೈಪಿಂಗ್ ಮತ್ತು ಕಂಪ್ಯೂಟರ್ ಕೌಶಲ್ಯ ಹೊಂದಿರಬೇಕು. 30 ಗ್ರೂಪ್–ಡಿ ಹುದ್ದೆಗಳಿಗೆ 10ನೇ ತರಗತಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ಜುಲೈ 31ರ ಸಂಜೆ 4 ಗಂಟೆಯೊಳಗಾಗಿ ವೆಬ್‌ಸೈಟ್ ವಿಳಾಸ: ತಿತಿತಿ.ಡಿಟಡಿಚಿಛಿಜಿಣಡಿ. ಇಚಿಡಿಟಚಿಣಚಿಞಚಿ.ರಠತ. ಟಿ ನಲ್ಲಿ ಅರ್ಜಿ ಫಾರ್ಮ ಡೌನ್‌ಲೋಡ್ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ವಿಶೇಷಾಧಿಕಾರಿಗಳ ಹೆಸರಿಗೆ ತಲುಪುವಂತೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಲಕೋಟೆ ಮೇಲೆ ದಪ್ಪ ಅಕ್ಷರದಲ್ಲಿ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸಬೇಕೆಂದು ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಣ್ಣ ನೀರಾವರಿ, ನೀರಿನಾಸರೆಗಳ ಗಣತಿ ಅಚ್ಚುಕಟ್ಟಾಗಿ ನಡೆಸಿ: ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 18–ಕೇಂದ್ರ ಸರ್ಕಾರದ ಜಲ ಸಂಪನ್ಮೂಲ ಇಲಾಖೆಯ ನಿರ್ದೇಶನದಂತೆ 7ನೇ ಸಣ್ಣ ನೀರಾವರಿ ಮತ್ತು 2ನೇ ನೀರಿನಾಸರೆಗಳ ಕುರಿತು ಈ ಬಾರಿಯ ಗಣತಿಯನ್ನು ಸಂಪೂರ್ಣವಾಗಿ ಮೊಬೈಲ್ ಆ್ಯಪ್‌ನಲ್ಲಿ ಕೈಗೊಳ್ಳಲಾಗುತ್ತಿದ್ದು, ಎಲ್ಲಾ ಗಣತಿದಾರರು ತಮ್ಮ–ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು. ಇತ್ತಿಚೇಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ 7ನೇ ಸಣ್ಣ ನೀರಾವರಿ ಮತ್ತು 2ನೇ ನೀರಿನಾಸರೆಗಳ ಗಣತಿಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಸರ್ಕಾರದ ಜಲ ಸಂಪನ್ಮೂಲ ಇಲಾಖೆಯ ನಿರ್ದೇಶನದ ಮೇರೆಗೆ ಪ್ರತಿ 5 ವರ್ಷಗಳಿಗೊಮ್ಮೆ ಸಣ್ಣ ನೀರಾವರಿ ಗಣತಿ ಕೈಕೊಳ್ಳಲಾಗುತ್ತಿದೆ. ಪ್ರಪಥಮ ಬಾರಿಗೆ 1986–87 ವರ್ಷದ ಆಧಾರದ ಮೇಲೆ 1 ನೇ ಸಣ್ಣ ನೀರಾವರಿ ಗಣತಿ ಕೈಕೊಂಡಿದೆ. 2017–18ನೇ ವರ್ಷದಲ್ಲಿ 1ನೇ ನೀರಿನಾಸರೆ ಗಣತಿ ಕಾರ್ಯವನ್ನು ಕೈಕೊಳ್ಳಲಾಗಿದ್ದು, ಪ್ರಸ್ತುತ 2023–24ನೇ ವರ್ಷವನ್ನು ಆಧಾರಿಸಿ 7ನೇ ಸಣ್ಣ ನೀರಾವರಿ ಗಣತಿ ಮತ್ತು 2ನೇ ನೀರಿನಾಸರೆ ಗಣತಿ ಕಾರ್ಯವನ್ನು ಕೈಕೊಳ್ಳಲು ಉದ್ದೇಶಿಸಲಾಗಿದೆ ಎಂದರು.

ಸಣ್ಣ ನೀರಾವರಿ ಯೋಜನೆಗಳ ಹಾಗೂ ನೀರಿನಾಸರೆಗಳ ಸಮಗ್ರ ಹಾಗೂ ಮೂಲ ಅಂಕಿ ಸಂಗ್ರಹಣೆ ಹಾಗೂ ಮಾಹಿತಿ ಕಲೆ ಹಾಕುವಿಕೆ, ಮುಂಗಾರು, ಹಿಂಗಾರು ಅಥವಾ ಬೇಸಿಗೆ ಋತುಗಳ ನೀರಾವರಿ ಕ್ಷೇತ್ರದ ಮಾಹಿತಿ ಕಲೆ ಹಾಕುವಿಕೆ, ನೀರಿನಾಸರೆಗಳ ಸದ್ಬಳಕೆ, ನಿರ್ವಹಣೆ ಮತ್ತು ಆದಾಯ ಸಂಗ್ರಹಣೆ, ಅಂತರ್ಜಲದ ಪ್ರಮಾಣ ಅಂದಾಜಿಸುವುದು ಮತ್ತು ನೀತಿ ನಿರೂಪಣೆ ಮತ್ತು



ನಿರ್ಧಾರ ತೆಗೆದುಕೊಳ್ಳಲು, ಭಾರಿ ನೀರಾವರಿ ಯೋಜನೆಗಳ ಅಂಕಿ ಅಂಶಗಳ ಸಂಗ್ರಹ ಮತ್ತು ಪ್ರಚಾರ ಬುಗ್ಗೆಗಳ ದತ್ತಾಂಶ ಸಂಗ್ರಹ ಮತ್ತು ಪ್ರಚಾರಗೊಳ್ಳುವುದು ಗಣತಿಯ ಉದ್ದೇಶವಾಗಿದೆ ಎಂದರು.

ಯೋಜನಾ ವ್ಯಾಪ್ತಿಯಲ್ಲಿ 0–40 ಹೆಕ್ಟೇರ್ ಯೋಜನೆಗಳು ಗ್ರಾಮೀಣಾಭಿವೃದ್ಧಿ ಇಲಾಖೆ, 40–2000 ಹೆಕ್ಟೇರ್ ಯೋಜನೆಗಳು ಸಣ್ಣ ನೀರಾವರಿ ಇಲಾಖೆ, 2000 ಹೆಕ್ಟೇರ್ ಕ್ಕಿಂತ ಹೆಚ್ಚಿನ ಯೋಜನೆಗಳು ಮಧ್ಯೆಮ ಅಥವಾ ಬೃಹತ್ ನೀರಾವರಿ ಆಧೀನದಲ್ಲಿರುತ್ತವೆ. ನೀರೀನಾಸರೆಯ ಗಣತಿಯಲ್ಲಿ ನೈಸರ್ಗಿಕ ಮತ್ತು ಮಾನವ ನಿರ್ಮಿತ ಯೋಜನೆಯ ಪ್ರಮಾಣಗಳನ್ನು ಲೆಕ್ಕಿಸದೇ ಮಾಹಿತಿ ಕಲೆ ಹಾಕಬೇಕು. ಗಣತಿಯಲ್ಲಿ ಗ್ರಾಮ ಪ್ರಪತ್ರ, ನಮೂನೆ–1 ಅಂತರ್ಜಲ ಪ್ರಪತ್ರ, ನಮೂನೆ–2 ಮೇಲ್ಮೈ ಯೋಜನೆ ಪ್ರಪತ್ರ, ನಗರ ಪ್ರಪತ್ರ ಹಾಗೂ ನೀರಿನಾಸರೆಗಳ ಪ್ರಪತ್ರ ಸೇರಿದಂತೆ ಒಟ್ಟು 5 ಗಣತಿಯ ಪ್ರಪತ್ರಗಳು ಬರುತ್ತವೆ ಎಂದು ಮಾಹಿತಿ ನೀಡಿದರು. ಈ ವೇಳೆ ಸಣ್ಣ ನೀರಾವರಿ ಹಾಗೂ ಅಂತರ್ಜಾಲ ಇಲಾಖೆಯ ಕೊಪ್ಪಳ ವಿಭಾಗದ ಅಧಿಕಾರಿ ಬಸವರಾಜ ಪಾಟೀಲ್ ಅವರು ಮಾತನಾಡಿ, ಗಣತಿ ಮಾಡುವಾಗ ಗ್ರಾಮದ ನೀರಿನಾಸರೆಗಳನ್ನು ಮೊದಲು ಗಣತಿ ಮಾಡಬೇಕು. ಅಂದರೆ ಮೊಬೈಲ್ ಆಪ್‌ನಲ್ಲಿ ಮೊದಲು ನೀರಿನಾಸರೆಗಳ ನಮೂನೆ ಭರ್ತಿ ಮಾಡಬೇಕು. ನಂತರ ಮೇಲ್ಮೈಜಲ ಯೋಜನೆಗಳನ್ನು ಗಣತಿ ಮಾಡಬೇಕು. ನಂತರ ಅಂತರ್ಜಲ ಯೋಜನೆಗಳನ್ನು ಗಣತಿ ಮಾಡಬೇಕು ಎಂದರು.

ಜಿಲ್ಲೆಯ ಗ್ರಾಮದಲ್ಲಿನ ಎಲ್ಲಾ ನೀರಿನಾಸರೆಗಳನ್ನು ಹಾಗೂ ಎಲ್ಲಾ ಮೇಲ್ಮೈ ಜಲ ಯೋಜನೆಗಳನ್ನು ಮತ್ತು ಎಲ್ಲಾ ಅಂತರ್ಜಲ ಯೋಜನೆಗಳನ್ನು ಗಣತಿ ಮಾಡಿದ ನಂತರವಷ್ಟೇ ಗ್ರಾಮ ಪ್ರಪತ್ರವನ್ನು ಭರ್ತಿ ಮಾಡಬೇಕು. ಗ್ರಾಮದ ಎಲ್ಲಾ ಯೋಜನೆಗಳ ವಿವರಗಳು ಮತ್ತು ಗ್ರಾಮದ ಇತರೇ ವಿವರಗಳು ಸಂಪೂರ್ಣವಾಗಿ ಪ್ರಪತ್ರದಲ್ಲಿ ನಮೂದಿಸಬೇಕು. ಒಮ್ಮೆ ಗ್ರಾಮ ಪ್ರಪತ್ರವನ್ನು ಒಪ್ಪಿಸಿದರೆ ಆ ಗ್ರಾಮದ ಗಣತಿ ಪೂರ್ಣಗೊಂಡಿದೆ ಎಂದರ್ಥ. ಗ್ರಾಮ ಪ್ರಪತ್ರವನ್ನು ಒಪ್ಪಿಸಿದರೆ ನಂತರ ಆ ಗ್ರಾಮದ ಯಾವುದೇ ಸಣ್ಣ ನೀರಾವರಿ ಯೋಜನೆಗಳನ್ನು ಮತ್ತೆ ಸೇರಿಸಲು ಗಣತಿದಾರರಿಗೆ ಅವಕಾಶ ಇರುವುದಿಲ್ಲ ಎಂದರು. ಗಣತಿ ಕಾರ್ಯಕ್ಕಾಗಿ ಕೇಂದ್ರ ಜಲ ಸಂಪನ್ಮೂಲ ಇಲಾಖೆಯು ಒಂದು ವೆಬ್ ಪೋರ್ಟರ್ಲ್ ರೂಪಿಸಿದೆ. ರಾಜ್ಯ ಮಟ್ಟದಲ್ಲಿ ಎಲ್ಲಾ ಜಿಲ್ಲೆಗಳ ಬಳಕೆದಾರಗಳನ್ನು ನೋಂದಾಯಿಸಿ ಬಳಕೆದಾರ ಐಡಿ ಮತ್ತು ಪಾಸ್ವರ್ಡ್‌ಗಳನ್ನು ಸೃಜಿಸಲಾಗುವುದು. ನಂತರ ಜಿಲ್ಲಾ ಹಂತದಲ್ಲಿ ಗಣತಿಗೆ ಸಂಬಂಧಿಸಿದ ಬ್ಲಾಕ್ ಹಂತದಿಂದ ಸಲ್ಲಿಸಲಾದ ಗಣತಿಯ ವಿವರಗಳನ್ನು ಪರಿಶೀಲಿಸಿ, ಸರಿ ಎಂದು ಕಂಡು ಬಂದಲ್ಲಿ ರಾಜ್ಯ ಹಂತಕ್ಕೆ ಕಳುಹಿಸುವುದು. ಅಲ್ಲದೆ ಒಂದು ವೇಳೆ ಜಿಲ್ಲಾ ಹಂತದಲ್ಲಿ ಗಣತಿಗೆ ಸಂಬಂಧಿಸಿದ ತಪ್ಪುಗಳು ಕಂಡು ಬಂದಲ್ಲಿ ಬ್ಲಾಕ್ ಹಂತಕ್ಕೆ ಹಿಂದಿರುಗಿಸಬಹುದಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸಾಂಖ್ಯಿಕ ಅಧಿಕಾರಿ ಡಾ.ತಿಪ್ಪಣ್ಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.18– ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಆಗಸ್ಟ್. 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ 20 ರಿಂದ 40 ವರ್ಷ ವಯಸ್ಸುಳ್ಳ ಈಗಾಗಲೇ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿರುವವರನ್ನು ಪತ್ರಿಕೋದ್ಯಮ ಪದವಿ ಪಡೆದವರು ಹಾಗೂ ಆಸಕ್ತಿಯುಳ್ಳವರು ದಿನಾಂಕ: 25–07–2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ https://sahithy-aacademy.karnataka.gov.in ನಲ್ಲಿ ಪಡೆದುಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯ ಅನುದಾನ ಸಂಪೂರ್ಣ, ಸಮರ್ಪಕ ಅನುಷ್ಠಾನಕ್ಕೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಾಕೀತು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸರ್ವಾಂಗೀಣ ಅಭಿವೃದ್ಧಿಗಾಗಿ ಸರ್ಕಾರ ವಿವಿಧ ಇಲಾಖೆಗಳಿಗೆ ಮೀಸಲಿಟ್ಟಿರುವ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡುವ ಮೂಲಕ ಶೇ.100ರಷ್ಟು ಸಾಧನೆ ಮಾಡಬೇಕು. ಈ ದಿಸೆಯಲ್ಲಿ ಆಯಾ ಇಲಾಖೆಯ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಅನುಸೂಚಿತಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ 2013ರನ್ವಯ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯ 2024–25ನೇ ಸಾಲಿನ ಮಾರ್ಚ್–2025 ಮತ್ತು ಜೂನ್–2025 ಅಂತ್ಯದವರೆಗಿನ ಪ್ರಗತಿಯ ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ಆಯಾ ಉದ್ದೇಶಗಳಿಗೆ ಮಾತ್ರವೇ ಬಳಕೆ ಮಾಡಬೇಕು ಎಂದರು.

ಈಗಾಗಲೇ ಮೊದಲ ತ್ರೈಮಾಸಿಕಕ್ಕೆ ಬಿಡುಗಡೆಯಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕೈಗೆತ್ತಿಕೊಳ್ಳಬಹುದಾದ ಕಾಮಗಾರಿಗಳ ಪಟ್ಟಿ ಮಾಡಿ ನಂತರ ಕಾರ್ಯರೂಪಕ್ಕೆ ತರಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಲ್ಲಾ ಇಲಾಖೆಗಳು, ನಿಗಮಗಳಿಗೆ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಷ್ಟ ವರ್ಗದವರ ಅಭಿವೃದ್ಧಿಗಾಗಿ ಸರ್ಕಾರ ಅನುದಾನ ಬಿಡುಗಡೆ ಮಾಡಿ ಗುರಿ ನಿಗದಿಪಡಿಸಿದೆ. ಆದರೂ ಕಳೆದ ಮಾರ್ಚ್–2025 ಮಾಹೆಯ ಅನುದಾನ ಮಾತ್ರ ಸಂಪೂರ್ಣ ಬಳಕೆ ಮಾಡಿಲ್ಲ ಏಕೆ? ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಪ್ರಶ್ನಿಸಿದರು.

ಹಿಂದಿನ ಸಾಲಿನ ಬಾಕಿ ಉಳಿದ ಮೊತ್ತದ ಪರಿಷ್ಕೃತ ಮಾಹಿತಿ ನೀಡಬೇಕು ಮತ್ತು ಬಾಕಿ ಉಳಿದ ಬಿಲ್ ಗಳನ್ನು ಇತ್ಯರ್ಥ ಮಾಡಬೇಕು. ಅನುದಾನ ಬಳಕೆ ಮಾಡದ ಇಲಾಖೆಗಳ ಅಧಿಕಾರಿಗಳಿಗೆ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅಧಿನಿಯಮದಡಿ ನೋಟೀಸ್ ನೀಡಿ, ಶಿಸ್ತುಕ್ರಮ ಜರುಗಿಸಲು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಿಗೆ ಸೂಚನೆ ನೀಡಿದರು.

ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿ ಆಧಾರಿತ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಸರ್ಕಾರದಿಂದ ಒದಗಿಸಿದ ಅನುದಾನವನ್ನು ಸಮರ್ಪಕವಾಗಿ ಬಳಸಿ, ಫಲಾನುಭವಿಗಳಿಗೆ ತಲುಪಿಸಿದಾಗ ಮಾತ್ರ ಪ್ರಗತಿ ಸಾಧಿಸಲು ಸಾಧ್ಯ ಎಂದರು.

ಕೈ ಮಗ್ಗ ಮತ್ತು ಜವಳಿ ಇಲಾಖೆಗೆ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅನುದಾನ ಬಿಡುಗಡೆಯಾಗಿದ್ದರೂ ಏಕೆ ಖರ್ಚು ಮಾಡಿಲ್ಲ? ಎಂದು ಇಲಾಖೆಯ ಮುಖ್ಯಸ್ಥರಿಗೆ ಪ್ರಶ್ನಿಸಿದಾಗ, ಇದಕ್ಕೆ ಇಲಾಖೆಯ ಉಪನಿರ್ದೇಶಕರು ಕೈ ಮಗ್ಗ ಮತ್ತು ಜವಳಿ ಇಲಾಖೆಯ ಯೋಜನೆಗಳ ಸೌಲಭ್ಯಗಳಿಗೆ ಸಮುದಾಯದವರು ಆಸಕ್ತಿ ತೋರಿಸುತ್ತಿಲ್ಲ ಎಂದು ಸಭೆಯ ಗಮನಕ್ಕೆ ತಂದರು.

ಬಳಿಕ ಜಿಲ್ಲಾಧಿಕಾರಿಯವರು ಮಾತನಾಡಿ, ಫಲಾನುಭವಿಗಳು ಆಸಕ್ತಿ ತೋರಿಸದೇ ಇದ್ದಲ್ಲಿ ವಾಸ್ತವ ಕುರಿತು ಕೇಂದ್ರ ಕಚೇರಿ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯವರಿಗೆ ಪತ್ರ ಬರಬೇಕು. ಆಯಾ ಇಲಾಖೆಗಳಿಗೆ ನಿಗದಿಪಡಿಸಿದ ಅನುದಾನವನ್ನು ಆಯಾ ಇಲಾಖೆಗಳ ಮುಖ್ಯಸ್ಥರೇ ಖರ್ಚು ಮಾಡುವ ಜವಾಬ್ದಾರಿ ಹೊಂದಬೇಕು. ಇಲ್ಲದಿದ್ದರೇ ಅಧಿಕಾರಿಗಳೇ ನೇರ ಹೊಣೆಯಾಗುತ್ತೀರಿ ಎಂದು ತಿಳಿಸಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ರಾಜು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರಾದ ಸಕೀನಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ರಾಘವೇಂದ್ರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಂದು ವಿದ್ಯುತ್ ಗ್ರಾಹಕ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ಕುರುಗೋಡು ಉಪವಿಭಾಗ ಜೆಸ್ಕಾಂನ ಕಾರ್ಯ ಮತ್ತು ಪಾಲನಾ ಶಾಖೆ–ಎಮ್ಮಿಗನೂರು ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿದ್ಯುತ್ ಗ್ರಾಹಕರ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಜು.19 ರಂದು ಬೆಳಿಗ್ಗೆ 11 ಗಂಟೆ ಗೆ ನೆಲ್ಲುಡಿ ಗ್ರಾಮದ ಗ್ರಾಮ ಪಂಚಾಯಿತಿ ಆವರಣದಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಕುರುಗೋಡು ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.20 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ಬಳ್ಳಾರಿ ನಗರ ಉಪವಿಭಾಗ–1ರ ಜೆಸ್ಕಾಂ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣ ಕೇಂದ್ರದ ಬ್ಯಾಂಕ್–1 ನಿಂದ ವಿದ್ಯುತ್ ಸರಬರಾಜು ಆಗುವ ಎಫ್–75 ರ ತುರ್ತು ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಜು.20 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಗರದ ಟ್ರಾಮಾ ಕೇರ್ ಸೆಂಟರ್, ಗೋಪಾಲ್ ಗೌಡ ನಗರ 1ನೇ ಮುಖ್ಯ ರಸ್ತೆ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ಸರಾಬರಾಜಿನಲ್ಲಿ ವ್ಯತ್ಯಯ ವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಜುಲೈ–2025 ಮಾಹೆಯ ಪಡಿತರ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿದಾರರಿಗೆ ಜುಲೈ–2025 ಮಾಹೆಗೆ ಪಡಿತರ ವಿತರಣೆ ಮಾಡಲಾಗುತ್ತಿದೆ.

ಜುಲೈ 2025 ರ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಬಳ್ಳಾರಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಜೋಳ ಮತ್ತು 14 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಜೋಳ ಮತ್ತು 02 ಕೆ.ಜಿ ಸಾರವರ್ಧಿತ ಅಕ್ಕಿ ವಿತರಿಸಲಾಗುವುದು.


ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು. ಹಾಗೂ ರಾಜ್ಯ ಪಡಿತರ ಚೀಟಿ ಫಲಾನುಭವಿಗಳಿಗೆ ಜೋಳದ ಬದಲು ಪೂರ್ಣ ಪ್ರಮಾಣದಲ್ಲಿ ಅಕ್ಕಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ(ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಯಾವುದೇ ನ್ಯಾಯಬೆಲೆ ಅಂಗಡಿದಾರರು ಕಡಿಮೆ ಪ್ರಮಾಣದ ಪಡಿತರ ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಬಹುದು.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲೀ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಅಂತಹ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯುಷ್ ವೈದ್ಯರ ಮೇಲೆ ಆಗುತ್ತಿರುವ ಅನ್ಯಾಯ, ದೌರ್ಜನ್ಯ ತಡೆಗೆ ಎಎಫ್‌ಐ ಸಂಘಟನೆಯಿಂದ ವಿ. ಪ. ಸದಸ್ಯ ಬಯ್ಯಾಪೂರಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು. ಜು. 17.–ಕರ್ನಾಟಕ ರಾಜ್ಯದಲ್ಲಿ ವೃತ್ತಿ ನಿರತ ಆಯುಷ್ ವೈದ್ಯರ ಮೇಲೆ ಒಂದಿಲ್ಲೊಂದು ಕಾರಣದಿಂದ ಅನ್ಯಾಯ ದೌರ್ಜನ್ಯ ನಡೆ–ಯುತ್ತಿದ್ದು ಕೂಡಲೆ ಇದನ್ನ ತಡೆದು ಆಯುಷ್ ವೈದ್ಯರಿಗೆ ನ್ಯಾಯ ಕೊಡಿಸುವಂತೆ ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪುರ ಅವರಿಗೆ ಎ ಎಫ್ ಐ ಸಂಘಟನೆಯಿಂದ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು.

ಹಲವು ಕಾರಣಗಳಿಂದ ಮಾನ್ಯತೆ ಪಡೆದ ವೃತ್ತಿನಿರತ ಆಯುಷ್ಯ ವೈದ್ಯರ ಮೇಲೆ ಆರೋಪಗಳು ಮಾಡುತ್ತಿರುವುದು ಸರಿಯಾದ ಕ್ರಮವಲ್ಲ. ಈ ಹಿಂದೆ ರಮೇಶ್ ಕುಮಾರ್ ಅವರು ಆರೋಗ್ಯ ಸಚಿವರಾಗಿದ್ದಾಗ ಮತ್ತು ಅಂದು ಆರೋಗ್ಯ ಇಲಾಖೆಯ ಕಾರ್ಯದರ್ಶಿಯಾಗಿದ್ದ ಶ್ರೀಮತಿ ಶಾಲಿನಿ ರಜನಿಶ್ ಅವರು ಡ್ರಗ್ಸ್ ಅಂಡ್ ಕಾಸ್ಮೆಟಿಕ್ ಕಾಯ್ದೆ 1940 ಮತ್ತು 1945ರ ಕಾಯ್ದೆಯ ಪ್ರಕಾರ 5–1–2017 ರಂದು ಆಯುಷ್ ವೈದ್ಯರಿಗೆ ಪ್ರಾಥಮಿಕ ಹಂತದ ಚಿಕಿತ್ಸಾ ಸಂದರ್ಭದಲ್ಲಿ ಆಲೋಪತಿ ಔಷಧಿ ಬಳಕೆಗೆ ಅನುಮತಿ ನೀಡಿದ್ದರು.

ಆಗಿನ ಸರಕಾರದ ಅವಧಿಯಲ್ಲಿ ನೀಡಿದ್ದ ಅನುಮತಿಯನ್ನು ದಿನಾಂಕ 7–9–2020 ರಂದು ರದ್ದುಗೊಳಿಸಿ ಆದೇಶ ಹೊರಡಿಸಲಾಗಿದೆ.

ಇದರಿಂದಾಗಿ ಪದವೀಧರ ಆಯುಷ್ ವೈದ್ಯರಿಗೆ ದಿನನಿತ್ಯ ಕಿರುಕುಳ ಮಾನಸಿಕ ಹಿಂಸೆ ಅನುಭವಿಸುವಂತಾಗಿದೆ.

ಕೆ.ಪಿ.ಎಂ.ಇ.ಯಾ ಕೆಲ ಅವೈಜ್ಞಾನಿಕ ಕಾನೂನುಗಳಿಂದಾಗಿ ಆಯುಷ್ಯ ವೈದ್ಯರ ನೋಂದಣಿ ಹಾಗೂ ನವೀಕರಣದಲ್ಲಿ ವ್ಯಥೆಯವಾಗಿದೆ. ಈಗಾಗಲೇ ಈ ವಿಷಯ ಕುರಿತು ರಾಜ್ಯದ ಆರೋಗ್ಯ ಸಚಿವರ ಗಮನಕ್ಕೂ ಸಹ ತರಲಾಗಿದ್ದು ಅವರು ಅವುಗಳನ್ನ ಸರಿಪಡಿಸುವ ಭರವಸೆ ನೀಡಿದ್ದಾರೆ. ಆದರೂ ಸಹ ಇತ್ತೀಚೆಗೆ ನಡೆದ ಕೆ.ಪಿ.ಎಂ.ಇ ಕುಂದು ಕೊರತೆಗಳ ಸಭೆಯಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು ಆಯುಷ್ಯ ವೈದ್ಯರ ಜಿಲ್ಲಾ ಎ ಎಫ್ ಐ ಸಂಘಟನೆಯವರನ್ನು ಗಣನೆಗೆ ತೆಗೆದುಕೊಳ್ಳದೆ ನಮ್ಮ ಅವಾಲು ಗಳನ್ನು ಸ್ವೀಕರಿಸದೆ ಏಕ ಪಕ್ಷಿಯವಾಗಿ ತಮ್ಮ ನಿರ್ಧಾರವನ್ನು ತೆಗೆದುಕೊಂಡಿರುತ್ತಾರೆ. ಹಾಗೂ ನಿರ್ದಾಕ್ಷಣ ಕ್ರಮಕ್ಕೆ ಸೂಚಿಸಿರುತ್ತಾರೆ.

ಇದನ್ನು ಏ ಎಫ್ ಐ ಸಂಘಟನೆಯೂ ಬಲವಾಗಿ ಖಂಡಿಸುತ್ತದೆ. ದಿನಾಂಕ 5–1–2017 ರಂದು ಹೊರಡಿಸಿರುವ ಆದೇಶವನ್ನು ಸರಕಾರ ತಕ್ಷಣ ಮರು ಜಾರಿಗೆ ತರಬೇಕು. ಹಾಗೂ ಕೇಂದ್ರ ಸರಕಾರದ ಎನ್ ಸಿ ಐ ಎಸ್ ಎಂ ಗೆಜ–ಟ್ ನೋಟಿಫಿಕೇಶನ್ ಅಉ–ಆಐ–ಇ–02012024–251078 ಡಿಸೆಂಬರ್ 28,2023 ರನ್ನು ಯಥಾವತ್ತಾಗಿ ಜಾರಿಗೆ ತರಬೇಕು.

ಮತ್ತು ಇತ್ತೀಚೆಗೆ 2024ರ ಕರ್ನಾಟಕ ಸರ್ಕಾರ ವೃತ್ತಿನಿರತ ವೈದ್ಯರ ಮೇಲಿನ ದಾಳಿಗಳಿಗೆ ಸಂಬಂಧಿಸಿದಂತೆ ಜಾರಿಗೆ ತಂದಿರುವ ಕಾನೂನನ್ನು ಗಟ್ಟಿಗೊಳಿಸಬೇಕು.

ಕೂಡಲೇ ಸರಕಾರದ ಮೇಲೆ ಒತ್ತಡ ತಂದು ನಮ್ಮ ಸಮಸ್ಯೆಗೆ ಪರಿಹಾರ ಒದಗಿಸಬೇಕು. ಒಂದು ವೇಳೆ ನಮ್ಮ ಬೇಡಿಕೆಗಳಿಗೆ ಸರಕಾರ ಸ್ಪಂದಿಸದಿದ್ದರೆ ಜಿಲ್ಲೆಯ ಎಲ್ಲಾ ಆಯುಷ್ಯ ವೈದ್ಯರು ನಮ್ಮ ಸೇವೆಯನ್ನ ಸ್ಥಗಿತಗೊಳಿಸಿ ಹೋರಾಟಕ್ಕೆ ಇಳಿಯಬೇಕಾಗುತ್ತದೆ.

ಆ ಸಂದರ್ಭದಲ್ಲಿ ಜನರ ಆರೋಗ್ಯದಲ್ಲಿ ತೊಂದರೆ–ಯಾದರೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಹೊಣೆಗಾರರಾಗಬೇಕಾಗುತ್ತದೆ ಎಂದು ಅವರು ಮನವಿ ಪತ್ರದಲ್ಲಿ ಎಚ್ಚರಿಸಿದ್ದಾರೆ. ಈ ಸಂದರ್ಭದಲ್ಲಿ ಈ ಎ ಎಫ್ ಐ ಸಂಘಟನೆಯ ರಾಯಚೂರು ಜಿಲ್ಲಾಧ್ಯಕ್ಷರಾದ ಡಾ. ಆರ್ ಬಿ ಹಿರೇಮಠ್, ಲಿಂಗಸಗೂರು ತಾಲೂಕ ಅಧ್ಯಕ್ಷರಾದ ಡಾ. ಡಿ ಬಿ ಗಚ್ಚಿನಮನಿ, ಉಪಾಧ್ಯಕ್ಷರಾದ ಡಾ. ಸಂಜೀವ್ ಭೀಮ್ ಸಾಗರ್, ಪ್ರಧಾನ ಕಾರ್ಯದರ್ಶಿ ಡಾ. ಮಂಜುನಾಥ್ ಗುಡಿಹಾಳ, ಜಂಟಿ ಕಾರ್ಯದರ್ಶಿ ಡಾ. ಸಿ.ಎಂ.ನಾಗಲಿಕರ್, ಡಾ. ಅಮರೇಗೌಡ ಪಾಟೀಲ್ ಸೇರಿದಂತೆ ಹಲವಾರು ಆಯುಷ್ ವೈದ್ಯರು ಪಾಲ್ಗೊಂಡಿದ್ದರು.

# ಇಂದು ವಿದ್ಯುತ್ ಗ್ರಾಹಕ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ಬಳ್ಳಾರಿ ಗ್ರಾಮೀಣ–ಉಪ ವಿಭಾಗ ಜೆಸ್ಕಾಂನ ಕಾರ್ಯ ಮತ್ತು ಪಾಲನಾ ಶಾಖೆ–2 ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿದ್ಯುತ್ ಗ್ರಾಹಕರ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಜು.19 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 01.30 ಗಂಟೆಯವರೆಗೆ ರೂಪನಗುಡಿ ಗ್ರಾಮದ ಗ್ರಾಮ ಪಂಚಾಯಿತಿ ಆವರಣದಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18–ಬಳ್ಳಾರಿ ನಗರ ಜೆಸ್ಕಾಂ ಉಪ ವಿಭಾಗ–1 ಹಾಗು ಉಪ ವಿಭಾಗ–2 ರ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆಯನ್ನು ಜು.19 ರಂದು ಬೆಳಿಗ್ಗೆ 11.30 ಗಂಟೆಗೆ ನಗರ ಉಪ–ವಿಭಾಗದಲ್ಲಿ ಏರ್ಪಡಿಸಲಾಗಿದ್ದು, ವಿದ್ಯುತ್ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ತಮ್ಮ ಕುಂದು ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಗ್ನಿಶಾಮಕ ಠಾಣೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ. ಜು. 17.–ಪಟ್ಟಣದಲ್ಲಿಯ ಅಗ್ನಿಶಾಮಕ ಠಾಣೆಯಲ್ಲಿ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದಡಿಯಲ್ಲಿ ನೂತನ ಶುದ್ಧ ಕುಡಿಯುವ ನೀರಿನ ಘಟಕವನ್ನು ರಾಯಚೂರ ಹಾಗೂ ಕೊಪ್ಪಳ ವಿಧಾನ ಪರಿಷತ್ತ ಸದಸ್ಯರಾದ ಶರ–ಣಗೌಡ ಪಾಟೀಲ ಬಯ್ಯಾಪೂರ ರವರು ಉದ್ಘಾಟಿಸಿದರು.

ಅಗ್ನಿಶಾಮಕ ಸಿಬ್ಬಂದಿಗೆ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಪ್ರಾದೇಶಿಕ ಅಗ್ನಿಶಾಮಕಾದಿಕಾರಿ ಕೆ ತಿಮ್ಮಾರೆಡ್ಡಿ ಬಳ್ಳಾರಿ, ಜಿಲ್ಲಾ ಅಗ್ನಿಶ್ಯಾಮಕಾಧಿಕಾರಿ ರವೀಂದ್ರ ಘಾಟಿಗೆ, ಲಿಂಗಸ್ಗೂರು ಠಾಣಾ ಅಗ್ನಿಶಾಮಕಾಧಿಕಾರಿ ಹೊನ್ನಪ್ಪ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಪಾಟೀಲ್ ಕರಡಕಲ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಪಾಮಯ್ಯ ಮುರಾರಿ, ಜಿಪಂ ಮಾಜಿ ಅಧ್ಯಕ್ಷ ಗುಂಡಪ್ಪನಾಯಕ ,ಬಸವರಾಜಗೌಡ ಗಣೇಕಲ್ ,ಸೋಮಶೇಖರ ಐದನಾಳ, ಪ್ರಮೋದ ಕುಲಕರ್ಣಿ, ಜಗದೀಶಗೌಡ ಹಾಲಬಾವಿ, ಚನ್ನಾರೆಡ್ಡಿ ಬಿರಾದಾರ ಸೇರಿದಂತೆ ಅಗ್ನಿಶಾಮಕ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜುಲೈ 19 ರಂದು ಗ್ರಾಹಕರ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 18 – ಇಲ್ಲಿನ ಜೆಸ್ಕಾಂ ಇಲಾಖೆಯಿಂದ ಜೆಸ್ಕಾಂ ಉಪ–ವಿಭಾಗ–1ರ ಕಚೇರಿಯಲ್ಲಿ ಗ್ರಾಹಕರ ಸಂವಾದ ಸಭೆಯು ಜುಲೈ 19ರ ಬೆಳಗ್ಗೆ 11 ರಿಂದ ಮಧ್ಯಾಹ್ನ 1ರವರೆಗೆ ಏರ್ಪಡಿಸಲಾಗಿದೆ. ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ಕುಂದುಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ–ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐತಿಹಾಸಿಕ ಕೆರೆಯ ಸಂರಕ್ಷಣೆ ಮತ್ತು ಉದ್ಯಾನವನದ ರಕ್ಷಣೆಗಾಗಿ ಕರವೇ ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು, ಜುಲೈ 18 – ನೂರಾರು ವರ್ಷಗಳ ಇತಿಹಾಸ ಹೊಂದಿರುವ ಲಿಂಗಸುಗೂರಿನ ಐತಿಹಾಸಿಕ ಕೆರೆ ಸಂಪೂರ್ಣ ನಿರ್ಲಕ್ಷ್ಯೆಯಿಂದ ದುರವಸ್ಥೆಗೆ ತುತ್ತಾಗಿದ್ದು, ಸುತ್ತಮುತ್ತ ಬೆಳೆದಿರುವ ಮುಳ್ಳುಮೊದೆ ಗಿಡಗಳು ಹಾಗೂ ಹೂಳು ನಾಶ ಮಾಡುತ್ತಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಪ್ರವೀಣ್ ಕುಮಾರ್ ಶೆಟ್ಟಿ ಬಣದ ತಾಲೂಕು ಘಟಕವು ಪುರಸಭೆ ಅಧ್ಯಕ್ಷ ರಿಗೆ ಮನವಿಯನ್ನು ನೀಡಿದರು.

ಕರವೇ ತಾಲೂಕು ಘಟಕದ ಅಧ್ಯಕ್ಷರಾದ ಆಂಜನೇಯ. ಹೆಚ್.ಭಂಡಾರಿ "ಈ ಐತಿಹಾಸಿಕ ಕೆರೆಯ ನೀರನ್ನು ಬ್ರಿಟಿಷರ ಕಾಲದಲ್ಲಿ ಕೂಡ ಕುಡಿಯುವಂತೆ ಬಳಸಲಾಗುತ್ತಿತ್ತು. ಆದರೆ ಇಂದು ಜಾನುವಾರುಗಳು ಕೂಡ ನೀರು ಕುಡಿಯಲು ಹಿಂದೇಟು ಹಾಕುವಂತಾಗಿದೆ. ಸುತ್ತಲಿನ ಭೂಮಿ ಕೂಡ ಒತ್ತುವರಿಯಿಂದ ಕೆರೆಯ ಗಾತ್ರ ಹದಗೆಟ್ಟಿದೆ. ಅಲ್ಲದೆ, ಕೆರೆಯ ದಡದಲ್ಲಿರುವ ಲಕ್ಷಾಂತರ ವೆಚ್ಚದ ಪಟ್ಟಣದ ಏಕೈಕ ಉದ್ಯಾನವನ ನಿರ್ವಹಣೆಯ ಕೊರತೆಯಿಂದ ಹಾಳಾಗುತ್ತಿದೆ. ಕಲ್ಲಿನ ಬೆಂಚುಗಳು ಮುರಿದಿರುವುದು, ಕಸದ ಗುಂಡಿಯಾಗಿ ಉದ್ಯಾನವು ಮಾರ್ಪಟ್ಟಿರುವುದರಿಂದ ಸಾರ್ವಜನಿಕರಿಗೆ ತೊಂದರೆ–ಯಾಗಿದೆ.

ಪುರಸಭೆಗೆ ಮನವಿ ಸಲ್ಲಿಸಿ, ಕೆರೆ ಸುತ್ತಲಿನ ಗಿಡಗಂಟಿ ತೆರವುಗೊಳಿಸಿ, ಹೂಳು ಸ್ವಚ್ಛಗೊಳಿಸಿ, ಒತ್ತುವರಿ ಭೂಮಿಯನ್ನು ತೆರವುಗೊಳಿಸಿ ಮತ್ತು ಉದ್ಯಾನವನದ ನಿರ್ವಹಣೆಗಾಗಿ ಪ್ರತ್ಯೇಕ ಅನುದಾನ ನೀಡಬೇಕು ಎಂದು ಒತ್ತಾಯಿಸಿದೆ. ಈ ಸಂದರ್ಭದಲ್ಲಿ ಕರವೇ ಕಾರ್ಯಕರ್ತರು ಇದ್ದರು.

# ವಿಕಲಚೇತನರಿಗೆ ಸೋಲಾರ ಯಂತ್ರಗಳು ವಿತರಣೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.18– ಭಾಲ್ಕಿ ಪುರಸಭೆ ವ್ಯಾಪ್ತಿಯಲ್ಲಿ (08 ಜನ) ವಿಕಲಚೇತನ ಫಲಾನುಭವಿಗಳಿಗೆ ಸೋಲಾರನಿಂದ ನಡೆಯುವ ಯಂತ್ರಗಳನ್ನು ಒದಗಿಸಲು ಅರ್ಹ ವಿಕಲಚೇತನ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಭಾಲ್ಕಿ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ಹಾಗೂ ಅರ್ಹ ವಿಕಲಚೇತನ ಅಭ್ಯರ್ಥಿಗಳು ಅಂಗವಿಕಲ ಪ್ರಮಾಣ ಪತ್ರ, ಜಾತಿ ಆದಾಯ ಪ್ರಮಾಣ ಪತ್ರ, ಇತ್ತೀಚಿನ ಪಾಸ್‌ಪೋರ್ಟ ಅಳತೆಯ ಭಾವಚಿತ್ರ, ವಿಕಲಚೇತನರ ಅಂಗವಿಕಲತೆಯುಳ್ಳ ಸಂಪೂರ್ಣ ಭಾವಚಿತ್ರ, ಆಧಾರ ಕಾರ್ಡ, ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಪ್ಯಾನ್ ಕಾರ್ಡ, ರಾಷ್ಟ್ರೀಕೃತ ಬ್ಯಾಂಕ್ ಪಾಸ್‌ಬುಕ್ ಪ್ರತಿಗಳು ಅರ್ಜಿ ನಮೂನೆಯೊಂದಿಗೆ ಲಗತ್ತಿಸಿ ದಿನಾಂಕ: 31–07–2025 ರ ಸಾಯಂಕಾಲ 5.30 ಗಂಟೆಯೊಳಗಾಗಿ ಭಾಲ್ಕಿ ಪುರಸಭೆ ಕಾರ್ಯಾಲಯದ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಭಾಲ್ಕಿ ಪುರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮೀನುಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.18– ಮೀನುಗಾರಿಕೆ ಇಲಾಖೆ ವತಿಯಿಂದ 2025–26 ನೇ ಸಾಲಿನ ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

*ಯೋಜನೆಗಳು:*

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಮೀನುಗಾರರಿಗೆ ಉಚಿತ ಮೀನುಗಾರಿಕೆ ಸಲಕರಣೆ ಕಿಟ್‌ಗಳ ವಿತರಣೆ ಮತ್ತು ಮೀನುಗಾರರಿಗೆ ದ್ವಿಚಕ್ರ ವಾಹನ ಖರೀದಿಸಲು ರೂ.25,000 ಸಹಾಯಧನ ನೆರವು ನೀಡಲಾಗುವುದು.

ಅರ್ಹ ಫಲಾನುಭವಿಗಳು ವೆಬ್‌ಸೈಟ್ https://ballari.nic.in/ ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಸಲ್ಲಿಸಿದ ಅರ್ಜಿಯ ಜೊತೆಗೆ ಅಗತ್ಯ ದಾಖಲೆಗಳೊಡನೆ ಆಯಾ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 18 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಹೊಸಪೇಟೆ ರಸ್ತೆಯ ನಾಗಲಕೆರೆ ಹತ್ತಿರದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ ಮೊ.9449593156 ಅಥವಾ ಆಯಾ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವತಂತ್ರ ಉದ್ಯೋಗಕ್ಕೆ ತರಬೇತಿ-ಜಿಗಜಿನ್ನಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.18-ಬಣಜಿಗ ಸಮಾಜದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ ಸಮಾಜದ ವತಿಯಿಂದ ಶೈಕ್ಷಣಿಕ ಸೌಲಭ್ಯ ಹಾಗೂ ಸ್ವತಂತ್ರ ಉದ್ಯೋಗಕ್ಕೆ ಸೂಕ್ತ ತರಬೇತಿ ಶಿಬಿರಗಳನ್ನು ಆಯೋಜಿಸಲಾಗುವುದು ಎಂದು ಸಮಾಜದ ಮುಖಂಡ ಆನಂದ ಜಿಗಜಿನ್ನಿ ತಿಳಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಸಮಾಜದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಸಾಧನೆ ಮಾಡಲು ಅವರಿಗೆ ಸಮಾಜ ಆರ್ಥಿಕ ಸಹಕಾರ ಕಲ್ಪಿಸಲಿದೆ ಎಂದರು.

ಸಮಾಜದ ಯುವಕರು ಸರ್ಕಾರಿ ಹಾಗೂ ಖಾಸಗಿ ಕೆಲಸಗಳಿಗೆ ಅವಲಂಭಿತರಾಗದೇ ಸ್ವಾವಲಂಬಿ ಜೀವನ ಸಾಗಿಸುವಂತಾಗಲು ಅವರಿಗೆ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗುವುದು,ಮಹಿಳೆಯರಿಗೆ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಸಮಾಜ ನಿರ್ಧರಿಸಿದೆ ಎಂದು ಜಿಗಜಿನ್ನಿ ಹೇಳಿದರು.

ಜಿಲ್ಲಾಧಿಕಾರಿಗಳ ಆದೇಶಕ್ಕಿಲ್ಲ ಕವಡೆ ಕಾಸಿನ ಕಿಮ್ಮತ್ತು.!

# ನಕಲಿ ವೈದ್ಯರ ವಿರುದ್ಧ ಕ್ರಮದಲ್ಲಿ ಕಾಲಹರಣ ಮಾಡುತ್ತಿರುವ ಡಾ. ಮಹೇಶ ಬಿರಾದಾರ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜಿಲ್ಲೆಯಲ್ಲಿ ನಕಲಿ ವೈದ್ಯರ ಅಬ್ಬರ ಜೋರಾಗಿರುವ ಹಿನ್ನೆಲೆಯಲ್ಲಿ,ಹಿಂದಿನ ಜಿಲ್ಲಾಧಿಕಾರಿ ಡಾ. ಸುಶೀಲ ಬಿ ಅವರು ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಜೂನ್ 25 ರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ



ನಕಲಿ ವೈದ್ಯರ ವಿರುದ್ಧ ಸಭೆ ಕರೆದ ಹಿಂದಿನ ಜಿಲ್ಲಾಧಿಕಾರಿ ಡಾ. ಸುಶೀಲಾ ಬಿ



ಹಿಂದಿನ ಜಿಲ್ಲಾಧಿಕಾರಿ ಆದೇಶ ಎತ್ತಿ ಹಿಡಿದು ಪ್ರಸ್ತುತ ಜಿಲ್ಲಾಧಿಕಾರಿ ಹರ್ಷಲ್ ಬೋಯರ್ ಅವರು ಯಾವ ರೀತಿ ಕ್ರಮ ಕೈಗೊಳ್ಳುತ್ತಾರೋ ಕಾದು ನೋಡಬೇಕಾಗಿದೆ.

ಕಲ್ಯಾಣಾಧಿಕಾರಿ ಡಾ. ಮಹೇಶ ಬಿರಾದಾರ್ ಅವರಿಗೆ ಸ್ಪಷ್ಟವಾದ ನಿರ್ದೇಶನ ನೀಡಿದ್ದರು.

ಆದರೆ,ಜಿಲ್ಲಾಧಿಕಾರಿಗಳ ಆದೇಶಕ್ಕೆ ಕವಡೆ ಕಾಸಿನ ಕಿಮ್ಮತ್ತು ಕೊಡುತ್ತಿಲ್ಲ ಎಂಬುದಕ್ಕೆ ಡಾ. ಬಿರಾದಾರ್ ಅವರ ಕಾರ್ಯ ವೈಕರಿಯೇ ಸಾಕ್ಷಿಯಾಗಿದೆ.

ನಕಲಿ ವೈದ್ಯರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದೇ ಈವರೆಗೆ ಕಾಲಹರಣ ಮಾಡುತ್ತಿದ್ದಾರೆ.

ಇದು "ಜಿಲ್ಲಾಡಳಿತದ ಮಾತಿಗೂ ಅಸಡ್ಡೆ, ಸಾರ್ವಜನಿಕ ಆರೋಗ್ಯಕ್ಕೂ ಅಪಾಯ" ಎಂಬ ಆಕ್ಷೇಪಣೆಗೆ ಕಾರಣವಾಗಿದ್ದು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಸಮಯಕ್ಕೆ ಸರಿಯಾದ ಕ್ರಮ ಕೈಗೊಂಡಿ-ದ್ದರೆ ನಕಲಿ ವೈದ್ಯರಿಂದ ಜನರು ಮೋಸ ಹೋಗುವ ಪರಿಸ್ಥಿತಿಗೆ ತಲುಪುತ್ತಿರಲಿಲ್ಲ.

ಆದರೆ ಈಗ ಆರೋಗ್ಯ ಇಲಾಖೆಯ ನಿರ್ಲಕ್ಷ್ಯ ನೇರವಾಗಿ ಜನರ ಜೀವದೊಂದಿಗೆ ಆಟವಾಡುವಂತಾಗಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಅಧಿಕಾರಿಗಳ ಮಧ್ಯೆ ಜವಾಬ್ದಾರಿಯ ಕೊರತೆಯು ಜನರ ವಿಶ್ವಾಸವನ್ನು ಕುಗ್ಗಿಸುತ್ತಿರುವಂತಾಗಿದೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಹಾಗೂ ಜಿಲ್ಲಾಡಳಿತದಿಂದ ತಕ್ಷಣ ಸ್ಪಷ್ಟನೆ ಮತ್ತು ಕ್ರಮದ ನಿರೀಕ್ಷಿಸಲಾಗಿದೆ.

# ಕೆಸಲಾಪುರ ಕಾರ್ಯ ಕ್ಷೇತ್ರದಲ್ಲಿ ಕೃಷಿ ವಿಸ್ತರಣಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಶ್ರೀ ಕ್ಷೇತ ಧರ್ಮಸ್ಥಳ ಗಾಮೀಣಾಭಿರುದ್ಧಿ ಯೋಜನೆಯಿಂದ ಕೆಸಲಾಪುರ ಕಾರ್ಯಕ್ಷೇತ್ರದಲ್ಲಿ ಕೃಷಿ ವಿಸ್ತರಣಾ, ರೈತ ಕ್ಷೇತ್ರ ಪಾಠ ಶಾಲೆ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಯಿತು ಅಳವಂಡಿ ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿಗಳಾದ ಪ್ರತಾಪ್ ಗೌಡ ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ರೈತರಿಗೆ ಅನುಕೂಲವಾಗುವಂತೆ ಹಸಿರೇಲೆ ಗೊಬ್ಬರ ಮಾಡುವ ವಿಧಾನ ಹಾಗೂ ತಮ್ಮ ಕೃಷಿ ಭೂಮಿಯಲ್ಲಿ ಮತ್ತು ಕುಟುಂಬ ವರ್ಗಗಳಲ್ಲಿ ಮಾಡಬೇಕಾದ ಕೃಷಿ ಚಟುವಟಿಕೆಗಳ ಬಗ್ಗೆ,ತಮ್ಮತಮ್ಮ ಕೃಷಿ ಭೂಮಿಯಲ್ಲಿ ಎರೆಹುಳು ಗೊಬ್ಬರ, ವರ್ಮಿ ಕಂಪೋಸ್ಟ್ ಗಳ ಬಳಕೆ ಬಗ್ಗೆ ಮಾಹಿತಿ ನೀಡಿದರು.

ಈ ಸಂಧರ್ಭದಲ್ಲಿ ಕೃಷಿ ಮೇಲ್ವಿಚಾರಕರಾದ ಅಶೋಕ್, ಒಕ್ಕೂಟದ ಅಧ್ಯಕ್ಷರಾದ ದೇವಪ್ಪ, ಸೇವಾಪ್ರತಿನಿಧಿಯಾದ ಹನುಮವ್ವ ನಿಂಗಪ್ಪ ಕಲ್ಲಳ್ಳಿ, ಮಹಾದೇವಯ್ಯ, ಕುಶಾಲ್, ಹನುಮಂತ ಗೌಡ, ನಾಗರಾಜ ಕೆಂಪನಗೌಡ, ಸ್ವಸಹಾಯ ಸಂಘದ ಸದಸ್ಯರು ಇನ್ನಿತರರು ಭಾಗವಹಿಸಿದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಕಮತಗಿ ಪಟ್ಟಣ ಪಂಚಾಯತಿ ಅಧ್ಯಕ್ಷರ ಪದಚ್ಯುತಿ ರಮೇಶ ವಿರುದ್ಧದ ಅವಿಶ್ವಾಸ ನಿರ್ಣಯಕ್ಕೆ ಗೆಲುವು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.18-ಕಳೆದೊಂದು ತಿಂಗಳಿನಿಂದ ತೀವ್ರ ಕುತೂಹಲ ಕೆರಳಿಸಿದ್ದ ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣ ಪಂಚಾಯಿತಿ ಅಧ್ಯಕ್ಷರ ಪದಚ್ಯುತಿ ಪ್ರಯತ್ನ ಕೊನೆಗೂ ಶುಕ್ರವಾರ ಯಶಸ್ಸು ಕಂಡಿದೆ.

ಅಧ್ಯಕ್ಷ ರಮೇಶ ಜಮಖಂಡಿ ಅವರ ಏಕಪಕ್ಷೀಯ ನಿರ್ಧಾರಗಳಿಗೆ ಬೇಸತ್ತು ಕಾಂಗ್ರೆಸ್ ಪಕ್ಷದ ಸದಸ್ಯರೇ ಬಿಜೆಪಿ ಸದಸ್ಯರ ಸಹಕಾರದೊಂದಿಗೆ ರಮೇಶ ವಿರುದ್ಧ ಬಂಡೆದ್ದು ಅವಿಶ್ವಾಸ ನಿರ್ಣಯಕ್ಕೆ ಮುಂದಾಗಿ ಪ್ರವಾಸ ಕೈಗೊಂಡಿದ್ದರು.

ಉಪಾಧ್ಯಕ್ಷೆ ನೇತ್ರಾವತಿ ದೇವಿಪ್ರಸಾದ ನಿಂಬಲಗುಂದಿ ನೇತೃತ್ವದಲ್ಲಿ ಅವಿಶ್ವಾಸ ಗೊತ್ತುವಳಿ ಮಂಡಿಸಿ ಸಭೆ ನಡೆಸಲು ಅವಕಾಶ ಕೋರಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದ 9 ಹಾಗೂ ಬಿಜೆಪಿಯ 3 ಜನ ಹಾಗೂ ಓರ್ವ ಪಕ್ಷೇತರ ಸದಸ್ಯರು ಸೂಚನಾ ಪತ್ರ ಸಲ್ಲಿಸಿದ್ದರು.

ಶುಕ್ರವಾರ ಸಭೆ ನಡೆಸಲು ಅವಕಾಶ ದೊರೆತ ಹಿನ್ನೆಲೆಯಲ್ಲಿ ಅಧ್ಯಕ್ಷರ ವಿರುದ್ಧದ ಅವಿಶ್ವಾಸ ಗೊತ್ತುವಳಿಯನ್ನು ಮಂಡಿಸಲಾಗಿ 13 ಸದಸ್ಯರು ಅವಿಶ್ವಾಸ ಗೊತ್ತುವಳಿ ಪರವಾಗಿ ಬೆಂಬಲ ಪ್ರಕಟಿಸಿದರು. ಇದರಿಂದಾಗಿ ಗೊತ್ತುವಳಿಗೆ ಗೆಲುವಾಗಿದ್ದು,ರಮೇಶ ಜಮಖಂಡಿ ಅಧಿಕಾರ ಕಳೆದುಕೊಳ್ಳಬೇಕಾಗಿದೆ.

ಒಟ್ಟು 16 ಜನ ಸದಸ್ಯರಲ್ಲಿ 13 ಜನ ಇಂದಿನ ಸಭೆಯಲ್ಲಿ ಹಾಜರಿದ್ದು, ಅವಿಶ್ವಾಸ ಗೊತ್ತುವಳಿಗೆ ಬೆಂಬಲ ನೀಡಿದ್ದು, ಅಧ್ಯಕ್ಷ ರಮೇಶ ಜಮಖಂಡಿ ಸೇರಿ ಮೂವರು ಸದಸ್ಯರು ಸಭೆಗೆ ಗೈರಾಗಿದ್ದರು.

# ವಡಗೇರಾ ತಾಲೂಕಿನ ಕಲಿಕಾ ಕಚೇರಿ ಯಲ್ಲಿ ತೋಟಗಾರಿಕೆ ಬೆಳೆಗಳ ಸಸಿಗಳ ವಿತರಣೆ



ಕಲಿಕೆ ಟಾಟಾ ಟ್ರಸ್ಟ್,ಟೆಸ್ಕೋ ಜೀವನೋಪಾಯ ಕಾರ್ಯಕ್ರಮ, "ತೋಟಗಾರಿಕೆ*ಇಲಾಖೆ ಮತ್ತು ಕೃಷಿ ಇಲಾಖೆ"ಸಹಯೋಗದಲ್ಲಿ ವಡಗೇರ ತಾಲೂಕಿನ ಕಲಿಕೆ ಕಚೇರಿ ಮುಂಭಾಗದಲ್ಲಿ ತೋಟಗಾರಿಕೆ ಬೆಳೆಯ ತರಬೇತಿ ಹಾಗೂ ಸಸಿಗಳ ವಿತರಣಾ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿತ್ತು

ಮತ್ತು ಈ ತರಬೇತಿಯಲ್ಲಿ ಮುಖ್ಯ ಅತಿಥಿಗಳಾಗಿ ಕೃಷಿ ಇಲಾಖೆ ರೈತ ಸಂಪರ್ಕ ಕೇಂದ್ರ ವಡಗೇರಾ ಅಧಿಕಾರಿಗಳಾದ "ಶ್ರೀ ಗಣಪತಿ" ಅವರು ತೋಟಗಾರಿಕೆ ಬೆಳೆಗಳಿಂದ ಆಗುವ ಪ್ರಯೋಜನ ಬಗ್ಗೆ, ಕೃಷಿ ಇಲಾಖೆಯಲ್ಲಿನ ವಿವಿಧ ಯೋಜನೆಗಳ ಬಗ್ಗೆ ರೈತರಿಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು.

ಹಾಗೂ ಸಹಾಯಕ ತೋಟಗಾರಿಕೆ ಅಧಿಕಾರಿಗಳಾದ "ಶ್ರೀ ಶ್ರೀಮಂತ" ಅವರು ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ , ತೋಟಗಾರಿಕೆ ಬೆಳೆಗಳ ಬೇಸಾಯ ಕ್ರಮಗಳ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು.

ಕಲಿಕೆ ಜೀವನೋಪಾಯ ಕಾರ್ಯಕ್ರಮ ಅಧಿಕಾರಿಗಳಾದ "ಶ್ರೀ ಸಾಯಿ ಶ್ರೀಕಾಂತ್ ರೆಡ್ಡಿ" ಅವರು ಕಲಿಕೆ ಜೀವನೋಪಾಯ ಕಾರ್ಯಕ್ರಮದ ಗುರಿ ಮತ್ತು ಉದ್ದೇಶ ಬಗ್ಗೆ ರೈತರಿಗೆ ಮಾಹಿತಿ ನೀಡಿದರು.

ಕೃಷಿ ತಜ್ಞರಾದ "ಶ್ರೀ ಕಿರಣ ಕಸ ರೆಡ್ಡಿ" ಅವರು ತೋಟಗಾರಿಕೆ ಬೆಳೆಗಳಾದ ಮಾವು,ನಿಂಬೆ ಹಾಗೂ ಪೇರಲ(ಜಂಪಲ್) ಬೆಳೆಯ ಬೇಸಾಯ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಜೀವನೋಪಾಯ ಕಾರ್ಯಕ್ರಮದ ಹಿರಿಯ ಸಂಯೋಜಿಕರಾದ, ಶ್ರೀ ಶಾಂತಗೌಡ ಬಿರಾದಾರ ಅವರು ಕಾರ್ಯಕ್ರಮವನ್ನು ನಿರೂಪಣೆ ಮಾಡಿದರು.

ಜೀವನೋಪಾಯ ಕಾರ್ಯಕ್ರಮ ಸಂಯೋಜಕರಾದ ಶ್ರೀಮತಿ ಅನುರಾಧ, ಸುಧಾರಾಣಿ, ಅರುಣ್ ಕುಮಾರ್ ಗುಬ್ಬಿ, ಹಸನ್ ರಜಾಕ್ ಹಾಗೂ ಕ್ಷೇತ್ರ ಸಹಾಯಕರಾದ ಕುಮಾರ್ ಎಸ್ ತೆಳಿಗೇರಿ, ಮೊಮ್ಮದ್ ರಫಿ ಹಾಗೂ ಗ್ರಾಮ ಸಂಪನ್ಮೂಲ ವೆಕ್ತಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ 100 ಜನ ತೋಟಗಾರಿಕೆ ಬೆಳೆ ಬೆಳೆಯುವ ಆಸಕ್ತ ರೈತರಿಗೆ ಮಾವು, ನಿಂಬೆ,ಪೇರಲ ಒಟ್ಟು 10,000 ಸಸಿಗಳನ್ನು ವಡಗೇರಾ ತಾಲೂಕಿನ ವಿವಿಧ ಗ್ರಾಮದ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಉಚಿತವಾಗಿ ವಿತರಣೆ ಮಾಡಲಾಯಿತು.

# ಯಲಬುರ್ಗಾದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಕೊಪ್ಪಳ, ತಾಲೂಕು ಬಾಲ ಭವನ ಸಮಿತಿ ಯಲಬುರ್ಗಾ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಹಯೋಗದಲ್ಲಿ ಗುರುವಾರ ಯಲಬುರ್ಗಾದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂಬರ್ 01ರಲ್ಲಿ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ ಆಯೋಜನೆ ಮಾಡಲಾಯಿತು.

ಯಲಬುರ್ಗಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬೇಟ್ಟದೇಶ ಮಾಳೆಕೊಪ್ಪ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿ, ಮಕ್ಕಳಲ್ಲಿ ಸೃಜನಾತ್ಮಕ ಕಲೆಗಳನ್ನು ಬೆಳೆಸಿಕೊಳ್ಳಲು ವಿವಿಧ ಸ್ಪರ್ಧೆಗಳು ಮತ್ತು ಕಾರ್ಯಕ್ರಮದ ಅವಶ್ಯಕತೆಯಿದೆ. ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಅವರಲ್ಲಿ ಬೌದ್ಧಿಕ ಮಾನಸಿಕ ಹಾಗೂ ದೈಹಿಕ ಸದೃಢತೆಗೆ ಉಪಯೋಗವಾಗುತ್ತದೆ. ಇಂತಹ ಸ್ಪರ್ಧೆಗಳಲ್ಲಿ ಹೆಚ್ಚು ಹೆಚ್ಚು ಮಕ್ಕಳು ಭಾಗವಹಿಸಬೇಕು. ಮಕ್ಕಳು ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂಬರ್ 01ರ ಮುಖ್ಯೋಪಾಧ್ಯರಾದ ಜಗದೀಶ ಚಂದ್ರ ಮಾತನಾಡಿ, ಮಕ್ಕಳಿಗೆ ಇಂತಹ ಕಾರ್ಯಕ್ರಮಗಳು ಅವಶ್ಯಕತೆಯಿದ್ದು, ಮಕ್ಕಳಿಗೆ ತಮ್ಮ ಕಲೆಯನ್ನು ಹೊರಹಾಕಲು ಇಂತಹ ಸ್ಪರ್ಧೆಗಳು ಅನುಕೂಲವಾಗಲಿವೆ. ಇದಕ್ಕಾಗಿ ಬಾಲ ಭವನ ಸೊಸೈಟಿ ರವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆಂದರು.

ವಿಜೇತ ಮಕ್ಕಳಿಗೆ ಪ್ರಶಸ್ತಿ ಪತ್ರ & ಬಹುಮಾನ ವಿತರಣೆ: ಮ್ಯೂಜಿಕಲ್ ಚೇರ್ ಸ್ಪರ್ಧೆ ಮತ್ತು ಸಮೂಹ ನೃತ್ಯ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ಪತ್ರ ಹಾಗೂ ಬಹುಮಾನವನ್ನು ಗಣ್ಯ ಮಾನ್ಯರಿಂದ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲಾ ಸಹ ಶಿಕ್ಷಕರ ವೃಂದ, ಅತಿಥಿ ಶಿಕ್ಷಕರ ವೃಂದ ಹಾಗೂ ಶಾಲೆಯ ನೂರಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು. ಸುಧಾ ಬಟ್ಟೂರ ಅವರು ಕಾರ್ಯಕ್ರಮದ ನಿರೂಪಿಸಿದರು. ಜಿಲ್ಲಾ ಬಾಲ ಭವನ ಕಾರ್ಯಕ್ರಮ ಸಂಯೋಜಕ ಮೆಹಬೂಬಸಾಬ ಇಲಾಹಿ ಅವರು ಸ್ವಾಗತ ಮತ್ತು ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಜಯಾ ಬೆಟಗೇರಿ ಅವರು ವಂದಿಸಿದರು.

# ಬಣಜಿಗ ಸಮಾಜದಿಂದ ಪ್ರಭುಶ್ರೀಗಳಿಗೆ ಗೌರವಾಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.18-ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪಡೆದಿರುವ ನಗರದ ಚರಂತಿಮಠದ ಡಾ. ಪ್ರಭು ಮಹಾಸ್ವಾಮಿಗಳಿಗೆ ಬಾಗಲಕೋಟೆ ತಾಲೂಕಾ ಬಣಜಿಗ ಸಮಾಜದ ವತಿಯಿಂದ ಜು.20 ರಂದು ಗೌರವಾಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಮಾಜದ ಅಧ್ಯಕ್ಷ ಬಸವರಾಜ ಶೀಲವಂತ ತಿಳಿಸಿದರು.

ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರವಿವಾರ ಮಧ್ಯಾಹ್ನ 4-30 ಗಂಟೆಗೆ ಚರಂತಿಮಠದ ಶಿವಾನುಭ ಮಂಟಪದಲ್ಲಿ ಸಮಾರಂಭ ನಡೆಯಲಿದ್ದು, ಇದೇ ಸಮಾರಂಭದಲ್ಲಿ ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವೂ ನಡೆಯಲಿದೆ ಎಂದರು.

ಡಾ.ಪ್ರಭು ಸ್ವಾಮೀಜಿ ಸಾನಿಧ್ಯದಲ್ಲಿಯೇ ನಡೆಯುವ ಸಮಾರಂಭಕ್ಕೆ ಮುಖ್ಯ ಅತಿಥಿಗಳಾ ಹುಬ್ಬಳ್ಳಿಯ ಕೆ.ಎಲ್.ಇ. ತಾಂತ್ರಿಕ ವಿಶ್ವವಿದ್ಯಾಲಯದ ಸಹ ಕುಲಪತಿ ಅಶೋಕ ಶೆಟ್ಟರ, ಶಾಸಕ ಮಹೇಶ ಟೆಂಗಿನಕಾಯಿ, ಮಾಜಿ ಸಂಸದ ರಮೇಶ ಕತ್ತಿ, ರಾಜ್ಯ ಬಣಜಿಗ ಸಮಾಜದ ಅಧ್ಯಕ್ಷ ಮಲ್ಲಿಕಾರ್ಜುನ ರೂಢಗಿ, ಕಾರ್ಯದರ್ಶಿ ಶಿವಾನಂದ ಬಿದರಿ, ಜಿಲ್ಲಾ ಬಣಜಿಗ ಸಮಾಜದ ಉಪಾಧ್ಯಕ್ಷ ರವಿ ಕುಮಟಗಿ, ಕಾರ್ಯದರ್ಶಿ ಮುತ್ತು ಜೋಳದ, ಗೌರವಾಧ್ಯಕ್ಷರಾದ ಮಲ್ಲಪ್ಪಣ್ಣ ಆರಬ್ಬಿ, ವಿಶ್ವನಾಥ ವೈಜಾಪೂರ, ಮೇಘಾ ಜಿಗಜಿನ್ನಿ, ವಿನಯ ನಾವಲಗಿ ಅತಿಥಿಗಳಾಗಿ ಭಾಗವಹಿಸುವರು ಎಂದು ಶೀಲವಂತ ಹೇಳಿದರು.

ಎಸ್ಎಸ್ಎಲ್ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಹಾಗೂ ಸಮಾಜದ ಯುವಪ್ರತಿಭೆಗಳು ಮತ್ತು ಉದ್ದಿಮೆದಾರ ಯುವಕರನ್ನು ಸನ್ಮಾನಿಸಲಾಗುವುದು ಎಂದು ಅವರು ತಿಳಿಸಿದರು.

ಸ್ವಂತ ಉದ್ಯೋಗಗಳ ಬಗ್ಗೆ ಆಸಕ್ತಿ ಹೊಂದಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಸವಲತ್ತು ಪಡೆದು ಇತರರಿಗೆ ಉದ್ಯೋಗ ನೀಡುವಂತಾಗಲು ಯುವಕರಿಗೆ ಸಮಾಜದಿಂದ ಸಹಕಾರ, ಸಲಹೆ ನೀಡುತ್ತೇವೆ. ಬಣಜಿಗ ಸಮಾಜದ ಯಾವುದೇ ವಿದ್ಯಾರ್ಥಿಗೆ ಶೈಕ್ಷಣಿಕವಾಗಿ ಸಲಹೆ, ಸಹಕಾರ ಹಾಗೂ ಮಾರ್ಗದರ್ಶನ ನೀಡಲಾಗುವುದು ಎಂದು ಅವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಲ್ಲಪ್ಪಣ್ಣ ಆರಬ್ಬಿ, ವಿಶ್ವನಾಥ ವೈಜಾಪೂರ, ಮುರುಗೇಶ ಶಿವನಗುತ್ತಿ, ಬಸವರಾಜ ಸೊಬರದ ಮತ್ತಿತರರಿದ್ದರು.

# ಸಂಖ್ಯಾಶಾಸ್ತ್ರ ದೇಶದ ಅಭಿವೃದ್ದಿಗೆ ದಿಕ್ಸೂಚಿ :ಕುಲಕರ್ಣಿ



ಜಮಖಂಡಿ ತಹಶೀಲ್ದಾರ ಕಚೇರಿಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಸಾಂಖ್ಯಿಕ ನಿರೀಕ್ಷಕ ರಾಜೇಶ ದೊಡಮನಿ, ಬಾಗಲಕೋಟೆ ತಹಶೀಲ್ದಾರ ಕಚೇರಿಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಗಣತಿದಾರ ಸಿ.ಎಸ್.ಕೋಟಿ ಅವರನ್ನು ಸನ್ಮಾನಿಸಲಾಯಿತು.

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.18-ವ್ಯಕ್ತಿ,ಸಮಾಜ ಹಾಗೂ ದೇಶದ ಬೆಳವಣಿಗೆಯಲ್ಲಿ ಸಂಖ್ಯಾಶಾಸ್ತ್ರ ದಿಕ್ಸೂಚಿಯಾಗಿದೆ ಎಂದು ಜಮಖಂಡಿ ಬಿ.ಎಲ್.ಡಿ.ಎ ಸಂಸ್ಥೆಯ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ವಿ.ಎಸ್.ಕುಲಕರ್ಣಿ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿರುವ ಆರೋಗ್ಯ ಇಲಾಖೆಯ ಸಭಾಭವನದಲ್ಲಿ ಶುಕ್ರವಾರ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಾರ್ಯಾಲಯದವತಿಯಿಂದ ಸಾಂಖ್ಯಿಕ ತಜ್ಞ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರ ಜನ್ಮದಿನಾಚರಣೆ ಅಂಗವಾಗಿ ಆಚರಿಸಲ್ಪಡುವ ಸಾಂಖ್ಯಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿ, ಮನುಷ್ಯ ಹುಟ್ಟಿನಿಂದ ಮರಣದವರೆಗೆ ಹಾಗೂ ಪ್ರತಿ ಅಡುಗೆ ಮನೆಯಿಂದ ದೇಶದ ಆರ್ಥಿಕ ವ್ಯವಸ್ಥೆವರೆಗೆ ಸಂಖ್ಯಾಶಾಸ್ತ್ರ ಅಮೂಲ್ಯ ಪಾತ್ರ ವಹಿಸುತ್ತದೆ ಎಂದರು.

ಜೀವನದಲ್ಲಿ ಧನಾತ್ಮಕವಾಗಲಿ, ಋಣಾತ್ಮಕವಾಗಲಿ ಪ್ರತಿಯೊಂದಕ್ಕೂ ಸಂಖ್ಯಾಶಾಸ್ತ್ರ ಅವಲಂಬಿತವಾಗಿದೆ. ಆಸ್ಪತ್ರೆಯಲ್ಲಿ 10 ಎಂ.ಎಲ್ ರಕ್ತದ ಮೇಲೆ ನಮ್ಮ ದೇಹವನ್ನು ಅಳೆಯುತ್ತಾರೆ. ಪ್ರತಿಯೊಂದು ಹಂತದಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಕರೋನಾ ಸಮಯದಲ್ಲಿ ಹಿರಿಯರು ಹಾಗೂ ಕಿರಿಯರನ್ನು ಕಳೆದುಕೊಂಡಿದ್ದೇವೆ. ಇಂತಹ ಸಮಯದಲ್ಲಿ ವ್ಯಾಕ್ಸಿನ್ ಕೊಡುವ ಸಂದರ್ಭ ಬಂದಾಗ 65 ವರ್ಷ ಮೇಲ್ಪಟ್ಟ ಜನರಿಗೆ ಕೊಡಲಾಗುತ್ತಿತ್ತು. ಆ ಜನ ಕೇವಲ ಶೇ.27 ರಷ್ಟು ಇತ್ತು. ಈ ಮಾಹಿತಿ ದೊರೆತಿದ್ದು, ಸಂಖ್ಯಾಶಾಸ್ತ್ರದಿಂದ ಎಂದರು.

ಪ್ರತಿಯೊಂದು ಸಂಖ್ಯಾಶಾಸ್ತ್ರ ಬೇರೆ ಬೇರೆ ಸಂದರ್ಭಗಳಲ್ಲಿ ಬಳಸುವಾಗ ಒಂದು ನಿರ್ಧಿಷ್ಟತೆ ಇದ್ದು, ಯಾವುದನ್ನು ಎಲ್ಲಿ ಬಳಸಿದರೆ ಸೂಕ್ತ ಎಂಬುದನ್ನು ಅರಿಯಬೇಕಿದೆ. ಒಂದು ದತ್ತಾಂಶ ಬೇರೆ ಬೇರೆ ದತ್ತಾಂಶದ ಮೇಲೆ ಅವಲಂಬನೆಯಾಗುತ್ತದೆ. ದತ್ತಾಂಶಗಳ ನಿಖರತೆಯನ್ನು ಸ್ಪಷ್ಟವಾಗಿ ತಿಳಿದಿದ್ದೆ ಆದರೆ ದತ್ತಾಂಶಗಳ ಪ್ರಮುಖತೆ ಹಾಗೂ ಬಳಕೆ ಅತ್ಯಂತ ಸುಭಕಾರಿಯಾಗಿರುತ್ತದೆ. ಒಂದು ವೇಳೆ ದತ್ತಾಂಶಗಳನ್ನು ಪ್ರತ್ಯೇಕವಾಗಿ ತೆಗೆದುಕೊಂಡರೆ ಹಾನಿಕಾರ ಆಗುವ ಸಾಧ್ಯತೆ ಇರುತ್ತದೆ. ಕಾರ್ಯಕ್ರಮ ಇರಬಹುದು, ಯೋಜನೆ, ತಯಾರಿ ಮುಖ್ಯವಾಗುತ್ತದೆ ಎಂದು ತಿಳಿಸಿದರು.

ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ರವೀಂದ್ರ ಹಕಾಟಿ ಮಾತನಾಡಿ, ದೇಶ ಪ್ರಗತಿ ಹೊಂದಬೇಕಾದರೆ ಸಂಖ್ಯಾಶಾಸ್ತ್ರ ಪ್ರಮುಖ ಪಾತ್ರ ವಹಿಸುತ್ತದೆ. ಪ್ರತಿಯೊಂದು ಇಲಾಖೆಯಲ್ಲಿ ಸಂಖ್ಯಾ ಪಿತಾಮಹ ಇದ್ದಾರೆ. ಪ್ರತಿಯೊಂದು ಯೋಜನೆಗಳನ್ನು ಅಂಕಿ ಸಂಖ್ಯೆ ಆಧಾರದ ಮೇಲೆ ಲೆಕ್ಕಹಾಕಲಾಗುತ್ತದೆ. ತೋಟಗಾರಿಕೆ ಮತ್ತು ಕೃಷಿಗೆ ಸಂಬಂಧಿಸಿದ ಮಾಹಿತಿ ಕಲೆ ಹಾಕಲಾಗುತ್ತದೆ. ಪ್ರತಿಯೊಂದು ವ್ಯವಸ್ಥೆಯಲ್ಲಿ ಅಂಕಿ ಅಂಶಗಳು ಬಹಳ ಮುಖ್ಯವಾಗಿವೆ ಎಂದರು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಪ್ರಾರಂಭದಲ್ಲಿ ಸಾಂಖ್ಯಿಕ ತಜ್ಞ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಜಿ.ಪಿ.ಸುಂಕದ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ಜಿಲ್ಲಾ ಪಂಚಾಯತಿ ನಿವೃತ್ತ ಯೋಜನಾ ಅಂದಾಜು ಮತ್ತು ಮೌಲ್ಯಮಾಪಣಾಧಿಕಾರಿ ಎಂ.ಆರ್.ಬಾಡಗಿ, ನಿವೃತ್ತ ಸಹಾಯಕ ಸಾಂಖ್ಯಿಕ ಅಧಿಕಾರಿ ಎಂ.ಎಸ್. ಘಟನೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜುಲೈ 20 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜೆಸ್ಕಾಂ ಉಪ ವಿಭಾಗ ವ್ಯಾಪ್ತಿಯ 110 ಕೆ.ವಿ ಎಂ.ಯು.ಎಸ್.ಎಸ್ ಕೊಪ್ಪಳ ಸ್ಟೇಷನ್‌ನ ನಿರ್ವಹಣೆ ಕಾಮಗಾರಿ (ಮೆಂಟೆನನ್ಸ್) ನಡೆಸುತ್ತಿರುವ ಪ್ರಯುಕ್ತ ಸ್ಟೇಷನ್‌ಗೆ ಒಳಪಡುವ ಮಾರ್ಗಗಳಿಗೆ ಜುಲೈ 20 ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

110 ಕೆ.ವಿ ಎಂ.ಯು.ಎಸ್.ಎಸ್ ಕೊಪ್ಪಳ ಸ್ಟೇಷನ್‌ಗೆ ಒಳಪಡುವ ಎಫ್-9 ಬನ್ನಿಕಟ್ಟಿ ಫೀಡರ್‌ನ ಬನ್ನಿಕಟ್ಟಿ ಏರಿಯಾ, ಗದಗ ರಸ್ತೆ, ರೇಲ್ವೆ ಸ್ಟೇಷನ್, ಬಸ್ ಸ್ಟ್ಯಾಂಡ್, ಸ್ಟೇಷನ್ ರಸ್ತೆ ಮತ್ತು ಅಮೀನಪೂರ. ಈ ಎಲ್ಲಾ 11 ಕೆವಿ ಮಾರ್ಗಗಳು ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸಹಕರಿಸಬೇಕು.

ವಿದ್ಯುತ್ ನಿರ್ವಹಣಾ ಕೆಲಸವು ಬೇಗನೆ ಮುಕ್ತಾಯಗೊಂಡಲ್ಲಿ, ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು. ಆದ್ದರಿಂದ ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕೆಲಸ-ಕಾರ್ಯಗಳನ್ನು ಮಾಡಬಾರದೆಂದು ಈ ಮೂಲಕ ಕೋರಲಾಗಿದೆ. ಒಂದು ವೇಳೆ ವಿದ್ಯುತ್ ಅಘಘಾತ ಸಂಭವಿಸಿದಲ್ಲಿ ಕಂಪನಿಯು ಜವಾಬ್ದಾರರಾಗಿರುವುದಿಲ್ಲ ಎಂದು ಜೆಸ್ಕಾಂ ಕೊಪ್ಪಳ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ಕೆಂಭಾವಿಯಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ
## ಬಡವರಿಗೆ ವರದಾನ : ಸಚಿವ ಶರಣಬಸಪ್ಪ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ

ಸುರಪುರ: ತಾಲೂಕಿನ ಕೆಂಭಾವಿ ಪಟ್ಟಣದ ಸಾರ್ವಜನಿಕರಿಗೆ ತಾಜಾ, ಪೌಷ್ಟಿಕ ಆಹಾರವನ್ನು ಒದಗಿಸುವ ನಿಟ್ಟಿನಲ್ಲಿ ಕೆಂಭಾವಿ ಪಟ್ಟಣದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆಯು ಜರುಗಿತು. ಈ ಕಾರ್ಯಕ್ರಮವನ್ನು ರಾಜ್ಯ ಸರ್ಕಾರದ ಸಚಿವರಾದ ಶರಣಬಸಪ್ಪ ದರ್ಶನಾಪುರ ಅವರು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಪುರಸಭೆಯ ಮುಖ್ಯ ಅಧಿಕಾರಿ ಮಹಮ್ಮದ್, ಮಾಜಿ ಜಿಲ್ಲಾ ಪಂಚಾಯತಿ ಸದಸ್ಯ ಸಿದ್ದನಗೌಡ ಪೊಲೀಸ್ ಪಾಟೀಲ್, ಪುರಸಭೆ ಅಧ್ಯಕ್ಷ ರೈಮನ್ ಪಟೇಲ್, ಸ್ಥಳೀಯ ಗ್ರಾಮಸ್ಥರು ಹಾಗೂ ಕಾಂಗ್ರೆಸ್‌ನ ಹಿರಿಯ ಮುಖಂಡರು ಉಪಸ್ಥಿತರಿದ್ದರು.

ಇದೆ ವೇಳೆ ಮಾತನಾಡಿದ ಸಚಿವ ದರ್ಶನಾಪುರ, "ಇಂದಿರಾ ಕ್ಯಾಂಟೀನ್ ಬಡ ಮತ್ತು ಮಧ್ಯಮ ವರ್ಗದ ಜನತೆಗೆ ವರದಾನವಾಗಿದೆ. ಸಮಾಜದ ಎಲ್ಲ ವರ್ಗಗಳಿಗೂ ಸಮಾನವಾಗಿ ಸೇವೆ ನೀಡುವುದು ಇದರ ಉದ್ದೇಶ. ಈ ಕ್ಯಾಂಟೀನ್‌ಗಳ ಮೂಲಕ ನಿತ್ಯದ ಜೀವನ ಖರ್ಚಿನಲ್ಲಿ ತಗ್ಗಿಸುವುದೇ ನಮ್ಮ ಉದ್ದೇಶ," ಎಂದು ಹೇಳಿದರು.

ಕೆಂಭಾವಿ ಸ್ಥಳೀಯ ಜನತೆ ಇಂತಹ ಜನಪರ ಯೋಜನೆಗೆ ಧನ್ಯವಾದವನ್ನು ವ್ಯಕ್ತಪಡಿಸಿದರು.!

# ಅಮೃತ ಮಹೋತ್ಸವ ಅರ್ಥಪೂರ್ಣವಾಗಿ ಆಚರಿಸಲು ನಿರ್ಧಾರ



ಬಸವಣ್ಣನವರ ಕೃಪೆ, ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ ಆಶೀರ್ವಾದ ಶಕ್ತಿಯಿಂದ ಸಮಾಜದಲ್ಲಿ ಒಂದಿಷ್ಟು ಒಳ್ಳೆಯ ಕೆಲಸ ಮಾಡುವ ಪ್ರಯತ್ನ ಮಾಡುತ್ತಿದ್ದೇನೆ. ಅನುಭವ ಮಂಟಪದಲ್ಲಿ ನಿರಂತರ ದಾಸೋಹ ನಡೆಯಬೇಕು. ಕೊನೆಯ ಉಸಿರಿರುವ ವರೆಗೂ ಬಸವತತ್ವ ಪ್ರಚಾರ ಪ್ರಸಾರ ಮಾಡುತ್ತೇನೆ.

– ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.18: ಇಲ್ಲಿಯ ಹಿರೇಮಠ ಸಂಸ್ಥಾನದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಪೂರ್ವಭಾವಿ ಸಭೆ ನೆರವೇರಿತು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಶುಕ್ರವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಜಿಲ್ಲೆ ಅಲ್ಲದೆ ನೆರೆಯ ಕಲಬುರಗಿ ಸೇರಿ ಮಹಾರಾಷ್ಟ್ರ, ತೆಲಂಗಾಣ ರಾಜ್ಯದ ವಿವಿಧ ಜಿಲ್ಲೆಯ ಸಾವಿರಾರು ಸಂಖ್ಯೆಯ ಭಕ್ತರು, ವಿವಿಧ ಸಂಘ ಸಂಸ್ಥೆಗಳ ಮುಖಂಡರು, ಉದ್ಯಮಿಗಳು, ಗಣ್ಯರು ಭಾಗವಹಿಸಿ ಅಮೃತ ಮಹೋತ್ಸವ ಯಶಸ್ವಿಗೆ ಅಗತ್ಯ ಸಲಹೆ ಸೂಚನೆ ನೀಡಿದರು.

ಅಮೃತಮಹೋತ್ಸವಕ್ಕೆ ರಾಷ್ಟ್ರಪತಿಗಳನ್ನು ದೇಶದ ಹೆಸರಾಂತ ಸಾಹಿತಿ, ಗಣ್ಯರನ್ನು ಆಹ್ವಾನಿಸುವುದು, ಅಭಿನಂದನಾ ಗ್ರಂಥ ಹೊರತರುವುದು, ಜಿಲ್ಲೆಯ ಶಾಲಾ–ಕಾಲೇಜುಗಳಲ್ಲಿ ಡಾ.ಬಸವಲಿಂಗ ಪಟ್ಟದ್ದೇವರ ಜೀವನ ಸಾಧನೆ ಕುರಿತು ಕಾರ್ಯಕ್ರಮ ಆಯೋಜಿಸುವುದು, ರಾಜ್ಯದಾದ್ಯಂತ ಅಭಿಯಾನ ರೂಪದಲ್ಲಿ ಪ್ರಚಾರ, ಅಂತರ ರಾಜ್ಯ ಸಮ್ಮೇಳನ ಆಯೋಜಿಸುವುದು ಸೇರಿ ವಿವಿಧ ಸಲಹೆ ಸೂಚನೆಗಳು ಭಕ್ತರಿಂದ ವ್ಯಕ್ತವಾದವು.

ಅಧ್ಯಕ್ಷತೆ ವಹಿಸಿದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾತನಾಡಿ, ಹಿರೇಮಠ ಸಂಸ್ಥಾನ ಐತಿಹಾಸಿಕ ಹಿನ್ನೆಲೆ ಹೊಂದಿದೆ. ಡಾ.ಬಸವಲಿಂಗ ಪಟ್ಟದ್ದೇವರು ವಿವಿಧ ಸಮಾಜಪರ ಸೇವೆ ಮೂಲಕ ಶ್ರೀಮಠವನ್ನು ರಾಜ್ಯ, ದೇಶವನ್ನು ಗುರುತಿಸುವಂತೆ ಮಾಡಿದ್ದಾರೆ.

ಬಸವತತ್ವ ಪ್ರಚಾರ ಪ್ರಸಾರದ ಜತೆಗೆ ಶಿಕ್ಷಣ, ಅನಾಥ ಮಕ್ಕಳ ಸೇವೆಗೈಯುತ್ತಿರುವುದು ಹೆಮ್ಮೆ ತರಿಸಿದೆ. ಅಂತಹ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರಿಗೆ ಎಪ್ಪತ್ತೈದು ತುಂಬುತ್ತಿರುವುದು ಸಂತಸ ತರಿಸಿದೆ. ಜನ್ಮದಿನದ ಸವಿನೆನಪಿಗಾಗಿ ಆಚರಿಸಲು ಉದ್ದೇಶಿಸಿರುವ ಅಮೃತ ಮಹೋತ್ಸವ ಅರ್ಥಪೂರ್ಣ ಆಚರಣೆಗೆ ಅಗತ್ಯ ಸಹಾಯ ಸಹಕಾರದೊಂದಿಗೆ ತನು, ಮನ, ಧನದಿಂದ ಸಹಕರಿಸುವುದಾಗಿ ಭರವಸೆ ನೀಡಿದರು.

ಮಾಜಿ ಶಾಸಕ ಪ್ರಕಾಶ ಖಂಡ್ರೆ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ವಿಶಿಷ್ಟವಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಜಿಲ್ಲೆ ಅಲ್ಲದೆ ನೆರೆಯ ರಾಜ್ಯಗಳಲ್ಲಿ ಬಸವತತ್ವ ಪ್ರಚಾರ ಪ್ರಸಾರದ ಜತೆಗೆ ಶಿಕ್ಷಣ ಸಂಸ್ಥೆ ತೆರೆದು ವಿದ್ಯಾದಾನದ ಮೂಲಕ ಸಾವಿರಾರು ಮಕ್ಕಳ ಭವಿಷ್ಯ ಬೆಳಗಿಸುವ ಕೆಲಸ ಮಾಡುತ್ತಿರುವ ಪೂಜ್ಯರ ಅಮೃತ ಮಹೋತ್ಸವ ಎಲ್ಲರೂ ಸೇರಿ ಅರ್ಥಪೂರ್ಣವಾಗಿ ಆಚರಿಸೋಣ ಎಂದು ತಿಳಿಸಿದರು.

ನಾರಂಜಾ ಸಹಕಾರ ಸಕ್ಕರೆ ಕಾರಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ ಮಾತನಾಡಿ, ಪೂಜ್ಯರ ವಿಶಿಷ್ಟ ಸೇವೆ ಮೂಲಕ ಹಿರೇಮಠ ಸಂಸ್ಥಾನ ರಾಜ್ಯದಲ್ಲಿ ಶ್ರೇಷ್ಠ ಮಠವಾಗಿ ಬೆಳೆದಿದೆ. ಪೂಜ್ಯರ ಅಮೃತ ಮಹೋತ್ಸವ ಸವಿನೆನಪಿಗಾಗಿ ಬೃಹತ ಗ್ರಂಥ ಹೊರತರುವ ಕೆಲಸ ಆಗಬೇಕು ಎಂದು ತಿಳಿಸಿದರು

ನೇತೃತ್ವ ವಹಿಸಿದ ಶರಣಬಸವ ಸ್ವಾಮೀಜಿ ಮಾತನಾಡಿ, ಕಲ್ಯಾಣ ನಾಡಿನ ಮಠಾಧೀಶರಿಗೆ ಹಿರೇಮಠ ಸಂಸ್ಥಾನ ತವರು ಮನೆ ಇದ್ದಂತೆ ಪೂಜ್ಯರು ಬಸವತತ್ವ ಆರಾಧಕರನ್ನು ನಾಡಿಗೆ ಪರಿಚಯಿಸುವ ಕೆಲಸ ಮಾಡುತ್ತಿದ್ದಾರೆ. ಪೂಜ್ಯರ ಅಮೃತ ಮಹೋತ್ಸವಕ್ಕೆ ವಹಿಸುವ ಜವಾಬ್ದಾರಿಯನ್ನು ಚಾಚು ತಪ್ಪದೆ ಪಾಲಿಸುತ್ತೇವೆ ಎಂದು ತಿಳಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಶಿಕ್ಷಕರಾಗುವ ಕನಸು ಕಂಡಿದ್ದ ಪೂಜ್ಯರು ಶ್ರೀಮಠಕ್ಕೆ ಪೀಠಾಧಿಪತಿ ಆಗಿರುವುದು ವಿಶೇಷವೆನಸಿದೆ.

ಆರ್ಥಿಕ ಸಂಕಷ್ಟದ ಸಮಯದಲ್ಲಿ ಶ್ರೀಮಠವನ್ನು ಮುನ್ನಡೆಸಿ ಇಂದು ರಾಜ್ಯ, ದೇಶದ ಗಮನ ಸೆಳೆಯುವಂತೆ ಮಾಡಿದ್ದಾರೆ.

ಅನೇಕ ವಿಧಾಯಕ ಕಾರ್ಯಗಳ ಮೂಲಕ ಶ್ರೀಮಠದ ಕೀರ್ತಿ ಹೆಚ್ಚಿಸುವುದರ ಜತೆಗೆ ವಿದ್ಯಾದೇಗುಲ ತೆರೆದು ಗಡಿಯಲ್ಲಿ ಗುಣಾತ್ಮಕ ಶಿಕ್ಷಣ ಕೊಡುವ ಕೆಲಸ ಮಾಡುತ್ತಿದ್ದಾರೆ. ಪೂಜ್ಯರ ಅಮೃತ ಮಹೋತ್ಸವ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಿದ್ದು ಎಲ್ಲ ಭಕ್ತರು ತನು, ಮನ, ಧನದಿಂದ ಸಹಕರಿಸಬೇಕು ಎಂದು ತಿಳಿಸಿದರು.

ಮಾಜಿ ಶಾಸಕ ಪ್ರಕಾಶ ಖಂಡ್ರೆ ಬಸವ ಗುರುವಿನ ಪೂಜೆ ನೆರವೇರಿಸಿದರು.

ಉದ್ಯಮಿ ಬಸವರಾಜ ಧನ್ನೂರು, ಬಸವರಾಜ ಬುಳ್ಳಾ, ಕಸಾಪ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ, ಶಕುಂತಲಾ ಬೆಲ್ದಾಳೆ, ಡಾ.ದೇವಿಕಾ ನಾಗೂರೆ, ಪಾರ್ವತಿ ಸೋನಾರೆ ಸೇರಿದಂತೆ ಮುಂತಾದವರು ಸಲಹೆ ಸೂಚನೆ ನೀಡಿದರು.

ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಶಿವಾನಂದ ಹೈಬತಪುರೆ, ಅಶೋಕ ಚಂದ್ರೆ ಸೇರಿದಂತೆ ಹಲವರು ಇದ್ದರು.

ಸಂಗಯ್ಯ ಸ್ವಾಮಿ, ಲೋಕನಾಥ ಚಾಂಗ್ಲೆರಾ ವಚನ ಸಂಗೀತ ನಡೆಸಿ ಕೊಟ್ಟರು.

ಬಾಬು ವಾಲಿ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

ಸ್ವಾಗತ ಸಮಿತಿ ರಚನೆ :

ಇದೇವೇಳೆ ಎಲ್ಲ ಭಕ್ತರ ಸಮ್ಮುಖದಲ್ಲಿ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಿತಿ ರಚಿಸಲಾಯಿತು. ಸ್ವಾಗತ ಸಮಿತಿ ಗೌರವಾಧ್ಯಕ್ಷರಾಗಿ ಮಾಜಿ ಶಾಸಕ ಪ್ರಕಾಶ ಖಂಡ್ರೆ, ಅಧ್ಯಕ್ಷರಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಸರ್ವಾನುಮತದಿಂದ ಆಯ್ಕೆಮಾಡಲಾಯಿತು. ಸಮಿತಿಯ ಈ ಇಬ್ಬರನ್ನು ಉಭಯ ಪೂಜ್ಯರು ಸನ್ಮಾನಿಸಿದರು.

ಲೋಗೊ ಬಿಡುಗಡೆ :

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಅಂಗವಾಗಿ ಹೊಸದಾಗಿ ಲೋಗೊ ಬಿಡುಗಡೆ ಮಾಡಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಲೋಗೊ ಬಿಡುಗಡೆ ಮಾಡಿದರು.

# "ಯುವನಿಧಿ ಯೋಜನೆಯ ನೋಂದಣಿ ಅಭಿಯಾನ"ಕ್ಕೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.18: ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ "ಯುವನಿಧಿ" ಯೋಜನೆಯಡಿ ಅರ್ಹ ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳುವ ಅಭಿಯಾನಕ್ಕೆ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಚಾಲನೆ ನೀಡಿದರು.

ಈ ಯೋಜನೆಯಡಿ 2023–24 ಮತ್ತು 2024–25ನೇ ಸಾಲಿನಲ್ಲಿ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಪಾಸಾದ ನಿರುದ್ಯೋಗಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿದ್ದು, ಅರ್ಹ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಪದವೀಧರರಿಗೆ ಪ್ರತಿ ತಿಂಗಳು 3000 ರೂ. ಹಾಗೂ ಡಿಪ್ಲೋಮಾದಾರರಿಗೆ 1500 ರೂ. ಗಳ ನಿರುದ್ಯೋಗಿ ಭತ್ಯೆಯನ್ನು ನೀಡಲಾಗುತ್ತದೆ. ಅಭ್ಯರ್ಥಿಗಳು ನೇರವಾಗಿ ಸೇವಾ ಸಿಂಧು ಪೋರ್ಟಲ್ <ಃಣಣಠಿ://ಜತಫುಟಿಜುಣಾಠಿ.ಇಚಿಡಿ–ಟಚಿಣಚಿಇಚಿ.ರಠತ.ಎಟ> ದಲ್ಲಿ ನೋಂದಾಯಿಸಿಕೊಳ್ಳಲು ಅಥವಾ ತಮ್ಮ ಸಮೀಪದ ಕರ್ನಾಟಕ ಒನ್/ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಸಹ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಿ ಸ್ವೀಕೃತಿ ಪಡೆಯಬೇಕು. ಹ್ ಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ ಸಂಖ್ಯೆ 08472–274846 ಗೆ ಅಥವಾ ಈ ಕಛೇರಿಗೆ ಖುದ್ದಾಗಿ ಸಂಪರ್ಕಿಸಬೇಕು. ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಕೌಶಲಾಭಿವೃದ್ಧಿ ಅಧಿಕಾರಿ ನಾಗೂಬಾಯಿ ದೊಡ್ಡಮನಿ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಪ್ರಥಮ ದರ್ಜೆ ಸಹಾಯಕ ಶರಣಪ್ಪ ಹಾಗೂ ಪಿಯೂಷ ಪರಿಹಾರ ಮಾದರಿ ವೃತ್ತಿ ಕೇಂದ್ರದ ಸತೀಶ ಕುಮಾರ ರಾಠೋಡ ಅವರು ಉಪಸ್ಥಿತರಿದರು.

# ಬೆಳೆ ವಿಮೆ ಮಾಡಿಸುವ ಕುರಿತು ರೈತರಲ್ಲಿ
## ಅರಿವು ಮೂಡಿಸುವುದು ಅಧಿಕಾರಿಗಳ ಕರ್ತವ್ಯ: ಜಿಲ್ಲಾಧಿಕಾರಿ



ಕಲಬುರಗಿ: ಜು 18: ಮಳೆಗಾಲ ಪ್ರಾರಂಭವಾಗಿದ್ದು, ರೈತರು ಬಿತ್ತನೆ ಕಾರ್ಯ ಆರಂಭಿಸಿದ್ದು, ಭವಿಷ್ಯದಲ್ಲಿ ಪ್ರಕೃತಿ ವಿಪತ್ತಿನಿಂದ ತಲೆದೂರಬಹುದಾದ ಸಮಸ್ಯೆಗಳನ್ನು ಹಾಗೂ ಬೆಳೆ ವಿಮೆಯ ಅವಶ್ಯಕತೆಯನ್ನು ರೈತರಿಗೆ ಮನದಟ್ಟು ಮಾಡುವ ಮೂಲಕ ಬೆಳೆ ಸಾಲಗಳಿಗೆ ವಿಮೆ ಮಾಡಿಸಲು ರೈತರಲ್ಲಿ ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಬೆಳೆ ಸಾಲ ನೀಡುವ ಬ್ಯಾಂಕ್ ಅಧಿಕಾರಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ವಿವಿಧ ಬ್ಯಾಂಕ್‌ಗಳಿಂದ 3 ಲಕ್ಷ ರೈತರಿಗೆ ಒಟ್ಟು 3800 ಕೋಟಿ ಬೆಳೆ ಸಾಲವನ್ನು ನೀಡಲಾಗಿದ್ದು, ಅವರಿಗೆ ಬೆಳೆ ವಿಮೆ ಬಗ್ಗೆ ಅರಿವು ಮೂಡಿಸುವುದು ಪ್ರತಿಯೊಬ್ಬ ಬ್ಯಾಂಕ್ ಅಧಿಕಾರಿಯ ಕರ್ತವ್ಯ ಆಗಿರುತ್ತದೆ ಎಂದರು. ಬೆಳೆ ವಿಮೆ ಕಂತು ಅತ್ಯಂತ ಚಿಕ್ಕ ಮೊತ್ತವಾಗಿದ್ದು, ಅದನ್ನು ತುಂಬುವುದರಿಂದ ಭವಿಷ್ಯದಲ್ಲಿ ತಲೆದೂರಬಹುದಾದ ಸಮಸ್ಯೆಗಳಿಗೆ ಸಹಾಯಕವಾಗಲಿದೆ. ಜುಲೈ 31 ರೊಳಗೆ ಜಿಲ್ಲೆಯ ಬೆಳೆ ವಿಮೆ ಸಾಲ ಪಡೆದಿರುವ 3 ಲಕ್ಷ ರೈತರಿಗೆ ಮನವೊಲಿಸುವ ಮೂಲಕ ಬೆಳೆ ವಿಮೆಯಲ್ಲಿ ಶೇಕಡ 100 ರ ರಷ್ಟು ಗುರಿ ಸಾಧಿಸಬೇಕು.

ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ತಾಲ್ಲೂಕುವಾರು ಮುಖ್ಯ ಬೆಳೆಗಳ ಮತ್ತು ಇತರೆ ಬೆಳೆಗಳನ್ನು ಮತ್ತು ರೈತರು ಮಾಡಿರುವ ಬೆಳೆ ಸಾಲವನ್ನು ವಿಂಗಡಿಸಿ ಪ್ರತಿ ರೈತರನ್ನು ತಲುಪಲು ಅಗತ್ಯ ವ್ಯವಸ್ಥೆ ಮಾಡಿಕೊಂಡು ಮನವೊಲಿಸುವ ಕಾರ್ಯ ಮಾಡದಿದ್ದರೆ ಅಂತವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು.

ಸದರಿ ಯೋಜನೆಯಡಿ ಮುಖ್ಯ ಬೆಳೆಗಳನ್ನು ಜಿಲ್ಲೆಯ ಎಲ್ಲಾ ತಾಲ್ಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟಕ್ಕೆ ಹಾಗೂ ಉಳಿದ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಅನುಷ್ಠಾನಗೊಳಿಸಬೇಕೆಂದರು.

ಕಲಬುರಗಿ ಜಿಲ್ಲೆಯಲ್ಲಿ 2025–26 ರ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಅನುಷ್ಠಾನಗೊಳಿಸಲು ಇಫ್ಕೋ ಟೋಕಿಯೋ ಇನ್ಸುರೆನ್ಸ್ ಕಂಪನಿ.ಲಿ ಬೆಂಗಳೂರು ವಿಮಾ ಸಂಸ್ಥೆಯನ್ನು ನಿಗಧಿಪಡಿಸಲಾಗಿದೆ.

ರೈತರು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 1800–200–5142 ತಮ್ಮ ತಾಲ್ಲೂಕಿನ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದಾಗಿದೆ.

ವಿವಿಧ ಮಾಧ್ಯಮಗಳ ಮೂಲಕ ರೈತರಲ್ಲಿ ಬೆಳೆವಿಮೆ ಮಾಡಿಸುವ ಕುರಿತಂತೆ ಜಾಗೃತಿ ಮೂಡಿಸಲು ಕೃಷಿ ಇಲಾಖೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು. ಸಭೆಯಲ್ಲಿ ಕಲಬುರಗಿಯ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್ ಸೇರಿದಂತೆ ವಿವಿಧ ಬ್ಯಾಂಕ್‌ಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ಸಂತ್ರಸ್ತೆ ಮನೆಗೆ ಮಕ್ಕಳ ಹಕ್ಕುಗಳ ರಕ್ಷಣಾ
## ಆಯೋಗದ ಸದಸ್ಯರ ಭೇಟಿ, ಪಾಲಕರಿಗೆ ಸಾಂತ್ವನ



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ: ಜು.18: ಬೆಂಗಳೂರಿಗೆ ದುಡಿಯಲೆಂದು ಹೋದ ಜಿಲ್ಲೆಯ ಕುಟುಂಬವೊಂದರ ಬಾಲಕಿಯ ಮೇಲೆ ಜುಲೈ 09 ರಂದು ಯಾರೋ ಅಪರಿಚಿತರು ಲೈಂಗಿಕ ಅಪರಾಧಗಳನ್ನು ಎಸಗಿ ಅವಳನ್ನು ಕೊಲೆ ಮಾಡಿದ ಬಗ್ಗೆ ಬೆಂಗಳೂರು ದಕ್ಷಿಣ ಜಿಲ್ಲೆಯ ತಾವರಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಹಾಂತಸ್ವಾಮಿ ಪೂಜಾರ ಅವರು ಶುಕ್ರವಾರದಂದು ಬಾಲಕಿಯ ಮನೆಗೆ ಭೇಟಿ ನೀಡಿ ಪಾಲಕರಿಗೆ ಸಾಂತ್ವನ ಹೇಳಿದರು. ಈ ಸಂದರ್ಭ ಮಾತನಾಡಿದ ಆಯೋಗದ ಸದಸ್ಯರು, ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ನಿಯಮಾವಳಿಗಳು–2020 ರನ್ವಯ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಬಲ ವ್ಯಕ್ತಿಗಳನ್ನು ನೇಮಕ ಮಾಡಲು, ಮಧ್ಯಂತರ ಪರಿಹಾರಕ್ಕೆ ನ್ಯಾಯಾಲಯಕ್ಕೆ ಅರ್ಜಿಯನ್ನು ಸಲ್ಲಿಸುವಂತೆ ಹಾಗೂ ಘಟಕದಿಂದ ಲಭ್ಯ ಯೋಜನೆಯಲ್ಲಿ ಕುಟುಂಬಕ್ಕೆ ಆರ್ಥಿಕ ಸಹಾಯ ಲಭ್ಯವಿದ್ದಲ್ಲಿ ನೀಡುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಹಾಗೂ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಪ್ಪಳರವರಿಗೆ ಸೂಚಿಸಿದರು. ಅಲ್ಲದೇ ಸಮುದಾಯದಲ್ಲಿ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆಯ ಕುರಿತು ಶಾಲೆ, ಕಾಲೇಜುಗಳ ವ್ಯಾಪ್ತಿಯಲ್ಲಿ ಮಕ್ಕಳಿಗೆ ಜಾಗೃತಿಯನ್ನು ಮೂಡಿಸುವಂತೆ ಉಪನಿರ್ದೇಶಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕೊಪ್ಪಳರವರಿಗೆ ಸೂಚಿಸಿದರು.

ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ತಿದ್ದುಪಡಿ –2019ರ ಕಲಂ 23 (4)ರಡಿಯಲ್ಲಿ ಸಂತ್ರಸ್ತ ಮಗುವಿನ ಮಾಹಿತಿಯನ್ನು ಯಾವುದೇ ಮಾಧ್ಯಮದಲ್ಲಿ ಪ್ರಕಟಿಸುವುದು, ಪ್ರಚುರ ಪಡಿಸುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಇದಕ್ಕೆ 6 ತಿಂಗಳನಿಂದ 1 ವರ್ಷದವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿರುತ್ತದೆ. ಈ ಕುರಿತು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರಿನಲ್ಲಿ ಪ್ರಕರಣವನ್ನು ಸೋ–ಮೋಟೋ ಪ್ರಕರಣವನ್ನಾಗಿ ದಾಖಲಿಸಿಕೊಳ್ಳಲಾಗುವುದು ಎಂದು ಆಯೋಗದ ಸದಸ್ಯರು ತಿಳಿಸಿದರು.

ಹೊಸಬಂಡಿ ಹರ್ಲಾಪುರ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಮಕ್ಕಳ 'ಗ್ರಾಮ ಪಂಚಾಯತ್ ಮಟ್ಟದ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿ'ಸಭೆಯ ಆಯೋಜನೆ ಮತ್ತು ಮಕ್ಕಳ ಗ್ರಾಮಸಭೆಗಳ ನಿಯಮಿತ ಆಯೋಜನೆ ಇಲ್ಲದಿರುವುದನ್ನು ಗಮನಿಸಿ ಕಡ್ಡಾಯವಾಗಿ ಆಯೋಜಿಸುವಂತೆ ಸೂಚಿಸಿ ಹಾಗೂ ಮಕ್ಕಳಿಗಾಗಿ ಮೀಸಲಿರುವ ಅನುದಾನಗಳ ಬಳಕೆ ಕುರಿತು ಪರಿಶೀಲಿಸಿ ಸಮರ್ಪಕ ಬಳಕೆ ಮಾಡುವಂತೆ ಸೂಚಿಸಿದರು.

ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ರಕ್ಷಣಾ ನೀತಿ – 2016ರ ಅನುಷ್ಠಾನದ ಸಮರ್ಪಕ ನಿರ್ವಹಣೆ ಇಲ್ಲದಿರುವುದನ್ನು ಗಮನಿಸಿ ಕಡ್ಡಾಯವಾಗಿ ನಿರ್ವಹಿಸುವಂತೆ ಸೂಚಿಸಿ, ಬಿಸಿಯೂಟದ ಆಹಾರ ಪದಾರ್ಥದಗಳ ಗುಣಮಟ್ಟವನ್ನು ಪರೀಕ್ಷಿಸಿದರು. ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ಮಕ್ಕಳ ರಕ್ಷಣಾ ನೀತಿ – 2016ರ ಅನುಷ್ಠಾನದ ಕುರಿತು ಪರಿಶೀಲಿಸಲಾಗಿ, ಈ ಕುರಿತು ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳಿಗೆ ಮಾಹಿತಿ ಇಲ್ಲದಿರುವುದನ್ನು ಗಮನಿಸಿ ವಿಷಾದವನ್ನು ವ್ಯಕ್ತಪಡಿಸಿ, ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು ಬಾಲ್ಯವಿವಾಹ ನಿಷೇಧಾಧಿಕಾರಿಗಳಾಗಿದ್ದು, ಮಕ್ಕಳ ರಕ್ಷಣೆಯ ಜವಾಬ್ದಾರಿಯಲ್ಲಿ ಇವರೂ ಸಹ ಮುಖ್ಯ ಪಾತ್ರಧಾರಿಗಳಾಗಿದ್ದು, ಶೀಘ್ರವೇ ಎಲ್ಲ ಕಾಲೇಜುಗಳಲ್ಲಿ ಮಕ್ಕಳ ರಕ್ಷಣಾ ನೀತಿ – 2016ರನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಿ ಆಯೋಗಕ್ಕೆ ವರದಿ ನೀಡುವಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು. ಈ ಸಂದರ್ಭ ಸಮಾಜ ಕಾರ್ಯಕರ್ತ ರವಿಕುಮಾರ ಪವಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಔಟ್‌ರೀಚ್ ವರ್ಕರ್ ಪ್ರತಿಭಾ ಕಾಶಿಮಠ, ಅಂಗನವಾಡಿ ಮೇಲ್ವಿಚಾರಕರಾದ ಸುಮಂಗಲಾ ಸಜ್ಜನ, ಮುನಿರಾಬಾದ್ ಪೊಲೀಸ್‌ಠಾಣೆಯ ಮಹಿಳಾ ಪೊಲೀಸ್ ಸುಧಾ ಉಪಸ್ಥಿತರಿದ್ದರು.

# ಜು. ೩೦ಕ್ಕೆ ಪ್ರಜ್ವಲ್ ರೇವಣ್ಣ ಭವಿಷ್ಯ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜು.18: ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ದಾಖಲಾಗಿರುವ ನಾಲ್ಕು ಅತ್ಯಾಚಾರ ಪ್ರಕರಣಗಳಲ್ಲಿ ಒಂದರ ವಿಚಾರಣೆಯನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಶುಕ್ರವಾರ ಪೂರ್ಣಗೊಳಿಸಿದ್ದು, ತೀರ್ಪನ್ನು ಜುಲೈ 30ಕ್ಕೆ ಕಾಯ್ದಿರಿಸಿದೆ.

ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ಮನೆಕೆಲಸದ ಮಹಿಳೆ ಮೇಲೆ ಪ್ರಜ್ವಲ್ ರೇವಣ್ಣ ಅತ್ಯಾಚಾರ ಎಸಗಿದ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಂತೋಷ ಗಜಾನನ ಭಟ್ ಅವರು ಇಂದು ಆದೇಶ ಕಾಯ್ದಿರಿಸಿದ್ದಾರೆ. ಪ್ರಾಸಿಕ್ಯೂಷನ್ ಪರ ಎ???ಸ್ ಪಿ ಬಿ.ಎನ್.ಜಗದೀಶ್ ಹಾಗೂ ಅಶೋಕ್ ನಾಯ್ಕ್ ವಾದ ಮಂಡಿಸಿದ್ದರೆ, ಪ್ರಜ್ವಲ್ ರೇವಣ್ಣ ಪರವಾಗಿ ಹಿರಿಯ ವಕೀಲ ನಳಿನಾ ಮಾಯಗೌಡ ಪ್ರತಿವಾದ ಮಂಡಿಸಿದ್ದಾರೆ. ವಾದ ಪ್ರತಿವಾದ ಆಲಿಸಿದ ನ್ಯಾಯಮೂರ್ತಿ ಸಂತೋಷ ಗಜಾನನ ಭಟ್ ಅವರು ಜುಲೈ 30ಕ್ಕೆ ತೀರ್ಪು ಕಾಯ್ದಿರಿಸಿದ್ದಾರೆ.

ಜುಲೈ 30 ರಂದು ಪ್ರಜ್ವಲ್ ರೇವಣ್ಣ ಭವಿಷ್ಯ ನಿರ್ಧಾರವಾಗಲಿದ್ದು, ಒಂದು ವೇಳೆ ಕೋರ್ಟ್?, ಪ್ರಜ್ವಲ್ ರೇವಣ್ಣ ದೋಷಿ ಎಂದು ತೀರ್ಪು ನೀಡಿದರೆ ಕನಿಷ್ಠ 10 ವರ್ಷ, ಗರಿಷ್ಠ ಜೀವಾವಧಿ ಶಿಕ್ಷೆಗೆ ಗುರಿಯಾಗಲಿದ್ದಾರೆ. ಮಹಿಳೆ ಮೇಲೆ ಅತ್ಯಾಚಾರ ಪ್ರಕರಣ ತನಿಖೆ ನಡೆಸಿದ ವಿಶೇಷ ತನಿಖಾ ತಂಡ (ಎಸ್‌ಐಟಿ) ನಂತರ ಪ್ರಕರಣವನ್ನು ಸಿಐಡಿಗೆ ಹವರ್ಗಾವಣೆ ಆಗಿತ್ತು. ಸಿಐಡಿ ಇನ್ಸ್‌ಪೆಕ್ಟರ್ ಶೋಭಾ ಅವರು ತನಿಖೆಯ ನೇತೃತ್ವ ವಹಿಸಿದ್ದರು ಮತ್ತು 26 ಸಾಕ್ಷಿಗಳ ಹೇಳಿಕೆಗಳನ್ನು ದಾಖಲಿಸಿಕೊಂಡು ಸುಮಾರು 2 ಸಾವಿರ ಪುಟಗಳ ಚಾರ್ಜ್ ಶೀಟನ್ನು ಜನಪ್ರತಿನಿಧಿಗಳ ವಿಶೇಷ ಕೋರ್ಟಿಗೆ ಸಲ್ಲಿಸಿದ್ದಾರೆ. ಪ್ರಜ್ವಲ್ ರೇವಣ್ಣ ವಿರುದ್ಧ ಇನ್ನೂ ಮೂರು ಅತ್ಯಾಚಾರ ಪ್ರಕರಣಗಳು ಕೋರ್ಟ್‌ನಲ್ಲಿ ವಿಚಾರಣೆಯ ಹಂತದಲ್ಲಿವೆ. ಹಲವು ಮಹಿಳೆಯರ ಮೇಲೆ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಕಳೆದ ವರ್ಷ ಮೇ ತಿಂಗಳಲ್ಲಿ ಪ್ರಜ್ವಲ್ ರೇವಣ್ಣ ಜರ್ಮನಿಯಿಂದ ಹಿಂದಿರುಗಿದ ನಂತರ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಎಸ್‌ಐಟಿ ಬಂಧಿಸಿತ್ತು. ಅಂದಿನಿಂದ ಪ್ರಜ್ವಲ್ ರೇವಣ್ಣ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲೇ ಇದ್ದಾರೆ. ಇದೇ ಪ್ರಕರಣದಲ್ಲಿ ಪ್ರಜ್ವಲ್ ಅವರ ತಂದೆ ಎಚ್.ಡಿ ರೇವಣ್ಣ ಅವರನ್ನು ಬಂಧಿಸಲಾಗಿತ್ತು. ಆದರೆ, ನಂತರ ಅವರಿಗೆ ಜಾಮೀನು ನೀಡಲಾಯಿತು ಮತ್ತು ದೂರಿನಲ್ಲಿ ಆರೋಪಿ ಎಂದು ಹೆಸರಿಸಲಾದ ಅವರ ತಾಯಿ ಭವಾನಿ ರೇವಣ್ಣ ಅವರು ನಿರೀಕ್ಷಣಾ ಜಾಮೀನು ಪಡೆದಿದ್ದರು. ಹೀಗಾಗಿ ಬಂಧನದಿಂದ ತಪ್ಪಿಸಿಕೊಂಡರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.